ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೨

# ಪಟ್ಟಿ – ೦೬

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೇಯ ಮುಂದುವರೆದ ಅಧಿವೇಶನ

ಮಂಗಳವಾರ, ದಿನಾಂಕ : ೧೦ನೇ ಮಾರ್ಚ್, ೨೦೨೬

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

## ಕೃಷಿ ಮಾರುಕಟ್ಟೆಯ ಎಪಿಎಂಸಿ (APMC)ಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೦ (೭೩೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಪಿಎಂಸಿ (Agricultural Produce Market Committee) ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಎಪಿಎಂಸಿ ಮಾರುಕಟ್ಟೆಗಳಲ್ಲಿ ನಡೆದ ವಹಿವಾಟಿನ ಒಟ್ಟು ಮೌಲ್ಯ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಎಪಿಎಂಸಿ ಮಾರುಕಟ್ಟೆಗಳಲ್ಲಿ ಪಾರದರ್ಶಕ ಹರಾಜು ವ್ಯವಸ್ಥೆ ಜಾರಿಗೆ ತರಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಪೂರ್ಣ ಮಾಹಿತಿ ಒದಗಿಸುವುದು)

(ಈ) ಕಳೆದ ೩ ವರ್ಷಗಳಲ್ಲಿ ಎಪಿಎಂಸಿ ಕಾಯ್ದೆಗೆ ಸಂಬಂಧಿಸಿದಂತೆ ಮಾಡಲಾದ ತಿದ್ದುಪಡಿಗಳು ಯಾವುವು ; ಅದರ ಪರಿಣಾಮಗಳು ಯಾವುವು ?

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಯಿಂದ ಸೃಷ್ಟಿಯಾಗಿರುವ ಉದ್ಯೋಗಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೧ (೭೩೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಮೂಲಕ ಸೃಷ್ಟಿಯಾದ ನೇರ ಮತ್ತು ಪರೋಕ್ಷ ಉದ್ಯೋಗಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಗ್ರಾಮೀಣ ಪ್ರದೇಶದ ಸ್ಥಳೀಯ ಯುವಕರಿಗೆ ಯಾವ-ಯಾವ ರೀತಿಯ ಉದ್ಯೋಗಾವಕಾಶಗಳನ್ನು ನೀಡಲಾಗುತ್ತಿದೆ ; ಅದರ ಪ್ರಮಾಣ ಎಷ್ಟು ;

(ಇ) ಮಹಿಳೆಯರು ಮತ್ತು ಎಸ್‌ಸಿ/ಎಸ್‌ಟಿ ಸಮುದಾಯಗಳಿಗೆ ಕೈಗಾರಿಕಾ ಉದ್ಯೋಗದಲ್ಲಿ ಯಾವ-ಯಾವ ರೀತಿಯ ಪ್ರಾತಿನಿಧ್ಯ ನೀಡಲಾಗುತ್ತಿದೆ ?

## ನಗರಾಭಿವೃದ್ಧಿ ಇಲಾಖೆಗೆ ಬಿಡುಗಡೆಯಾದ ಅನುದಾನ ಹಾಗೂ ಯೋಜನೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೨ (೭೩೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ನಗರಾಭಿವೃದ್ಧಿ ಇಲಾಖೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಸದರಿ ಅನುದಾನದಲ್ಲಿ ಖರ್ಚು ಮಾಡಲಾದ ಅನುದಾನ ಎಷ್ಟು ; ಬಾಕಿ ಉಳಿದ ಅನುದಾನವೆಷ್ಟು ; (ಪೂರ್ಣ ಮಾಹಿತಿ ಒದಗಿಸುವುದು)

(ಆ) ನಗರ ಸ್ಥಳೀಯ ಸಂಸ್ಥೆಗಳ ಆದಾಯ ಹೆಚ್ಚಿಸಲು ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ನಗರದಲ್ಲಿ ಹಸಿರು ವಲಯ ಹೆಚ್ಚಿಸಲು ಸರ್ಕಾರದ ಯೋಜನೆಗಳು ಯಾವುವು ;

(ಈ) ಮಳೆ ನೀರು ಸಂಗ್ರಹಣೆ ಕಡ್ಡಾಯಗೊಳಿಸುವ ಬಗ್ಗೆ ಜಾರಿಗೆ ಬಂದಿರುವ ನಿಯಮಗಳು ಯಾವುವು ?

# ಕೊಪ್ಪಳ ಜಿಲ್ಲೆಯಲ್ಲಿ ಸ್ಪಾಂಜ್ ಐರನ್ ಉತ್ಪಾದನಾ ಘಟಕಗಳಿಂದ ಹೊರಸೂಸುವ ವಿಷಕಾರಿ ಅನಿಲದಿಂದ ಗ್ರಾಮಸ್ಥರ ಆರೋಗ್ಯದ ಮೇಲಾಗುತ್ತಿರುವ ದುಷ್ಪರಿಣಾಮ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೩ (೭೮೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಸ್ಥಾಪಿಸಲಾಗಿರುವ ಸ್ಪಾಂಜ್ ಐರನ್ ಉತ್ಪಾದನಾ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಸದರಿ ಸ್ಪಾಂಜ್ ಐರನ್ ಘಟಕಗಳಿಂದ ಹೊರ ಸೂಸುವ ಅಪಾಯಕಾರಿ ವಿಷಾನಿಲಗಳಿಂದ ಸುತ್ತಮುತ್ತಲಿನ ಗ್ರಾಮಸ್ಥರ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಕೈಗಾರಿಕೋದ್ಯಮಗಳು ಅನುಸರಿಸುತ್ತಿರುವ ಮಾಲಿನ್ಯ ನಿಯಂತ್ರಣ ಕ್ರಮಗಳ ಕುರಿತು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ವಿಶೇಷ ತಂಡದ ವತಿಯಿಂದ ಪರಿಶೀಲನೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಅದರ ವರದಿಯನ್ನು ಒದಗಿಸುವುದು ;

(ಈ) ವಿಶೇಷ ತಂಡದ ವತಿಯಿಂದ ಪರಿಶೀಲನೆ ಮಾಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; (ವಿವರ ಒದಗಿಸುವುದು)

(ಉ) ಈ ವರದಿಯಲ್ಲಿ ಉಲ್ಲೇಖಿಸಿದಂತೆ ಪರಿಸರ ಮಾಲಿನ್ಯ ನಿಯಂತ್ರಣ ಕ್ರಮಗಳನ್ನು ಅನುಸರಿಸದೇ ಇರುವ ಕಂಪನಿಗಳ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ? (ವಿವರ ಒದಗಿಸುವುದು)

## ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಪೌರಸೇವಾ ನೌಕರರ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೪ (೭೪೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮರ್ಪಕ ಸಂಖ್ಯೆಯಲ್ಲಿ ಪೌರಸೇವಾ ನೌಕರರು ಕಾರ್ಯ ನಿರ್ವಹಿಸುತ್ತಿರುವರೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ ಪ್ರಸ್ತುತ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮಂಜೂರಾದ ಪೌರಸೇವಾ ನೌಕರರ ಹುದ್ದೆಗಳ ಸಂಖ್ಯೆ ಎಷ್ಟು ; ಅದರಲ್ಲಿ ಭರ್ತಿ ಮಾಡಿದ ಹುದ್ದೆಗಳು ಎಷ್ಟು ; ಬಾಕಿ ಇರುವ ಹುದ್ದೆಗಳು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಪೌರಸೇವಾ ನೌಕರರ ಕೊರತೆ ಇದ್ದರೆ ಅದನ್ನು ಸರಿಪಡಿಸಲು ಸರ್ಕಾರದಿಂದ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ಒದಗಿಸುವುದು)

## ಮೈಸೂರು ಸ್ಯಾಂಡಲ್ ಸೋಪಿನ ಬ್ರಾಂಡ್ ಅಂಬಾಸಿಡರ್ ಆಯ್ಕೆ ಪ್ರಕ್ರಿಯೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೫ (೭೪೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದ ಹೆಮ್ಮೆಯ ಕೆ.ಎಸ್.ಡಿ.ಎಲ್ KSDL ಸಂಸ್ಥೆಯ ಮೈಸೂರು ಸ್ಯಾಂಡಲ್ ಸೋಪಿನ ರಾಯಭಾರಿಯಾಗಿ (BRAND

Ambassador) ಬಹುಭಾಷಾ ನಟಿಯನ್ನು ಆಯ್ಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ರಾಯಭಾರಿಯ ಆಯ್ಕೆಗಾಗಿ ಸರ್ಕಾರ ಅನುಸರಿಸಿದ ಮಾನದಂಡಗಳೇನು ; ಅವರಿಗೆ ಪಾವತಿಸಲಾಗುತ್ತಿರುವ ಸಂಭಾವನೆ ಎಷ್ಟು ;

(ಆ) ಕನ್ನಡ ಚಿತ್ರರಂಗದಲ್ಲಿ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿಗಳಿಸಿದ ನಟಿಯರಿದ್ದರೂ, ಹೊರಗಿನವರನ್ನು ಆಯ್ಕೆ ಮಾಡಲು ಕಾರಣವೇನು ;

(ಇ) ರಾಜ್ಯದ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಪ್ರಚಾರಕ್ಕೆ ಸ್ಥಳೀಯ ಪ್ರತಿಭೆಗಳನ್ನು ಮತ್ತು ಕನ್ನಡದ ಕಲಾವಿದರನ್ನು ಕಡೆಗಣಿಸಿರುವುದು ಕನ್ನಡ ವಿರೋಧಿ ನೀತಿಯಲ್ಲವೇ ;

(ಈ) ಈ ನೇಮಕಾತಿಗೆ ಸಂಬಧಿಸಿದಂತೆ ಸಾರ್ವಜನಿಕ ವಲಯದಲ್ಲಿ ಮತ್ತು ಜನಪ್ರತಿನಿಧಿಗಳಲ್ಲಿ ವ್ಯಕ್ತವಾಗುತ್ತಿರುವ ತೀವ್ರ ಆಕ್ಷೇಪಗಳ ಬಗ್ಗೆ ಸರ್ಕಾರವು ಮರುಪರಿಶೀಲನೆ ನಡೆಸುವುದೇ ?

## ರೈತರಿಗೆ ಕಾರ್ಯಾದೇಶ ನೀಡದೇ ಇರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೬ (೮೨೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ತೋಟಗಾರಿಕೆ ಇಲಾಖೆಯಲ್ಲಿ ತುಂತುರು ಹನಿ ನೀರಾವರಿ ಯೋಜನೆ ಅಡಿಯಲ್ಲಿ ಸಬ್ಸಿಡಿ ಸಲುವಾಗಿ ಜಿಲ್ಲೆಯ ರೈತರು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ್ದು ಇಲ್ಲಿಯವರೆಗೆ ಕಾರ್ಯದೇಶ ನೀಡದೇ ಇರುವುದರಿಂದ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; ಯಾವಾಗ ಕಾರ್ಯಾದೇಶ ನೀಡಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕೈಗಾರಿಕೋದ್ಯಮಗಳಿಂದ ಬೇಡಿಕೆ ಇರುವ ಭೂಮಿ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೬೩೭ (೮೧೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಗಾರಿಕೋದ್ಯಮಗಳಿಂದ ಯಾವ ಪ್ರದೇಶಗಳಲ್ಲಿ ಭೂಮಿಗೆ ಬೇಡಿಕೆ ಯಾವ ಪ್ರಮಾಣದಲ್ಲಿದೆ ; ಇದನ್ನು ಹೊಂದಿಸಲು ಕೆ.ಐ.ಎ.ಡಿ.ಬಿ ಯ ಪ್ರಯತ್ನಗಳೇನು ; (ವಿವರ ಒದಗಿಸುವುದು)

(ಆ) ರಿಯಲ್ ಎಸ್ಟೇಟ್ ಮಾಫಿಯಾ ಮತ್ತು ಕೆ.ಐ.ಎ.ಡಿ.ಬಿ ಅಭಿವೃದ್ಧಿ ಪಡಿಸುವ ಖರ್ಚು ವಿಪರೀತವಾಗಿರುವುದರಿಂದ ಉದ್ದಿಮೆದಾರರಿಗೆ ಹೆಚ್ಚುವರಿ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಇ) ಕೈಗಾರಿಕಾ ಪ್ರದೇಶವನ್ನಾಗಿ ಅಭಿವೃದ್ಧಿಪಡಿಸಲು ಉದ್ದೇಶಿತ ಭೂಮಿಯನ್ನು ಗುರುತಿಸಿದ ನಂತರ ರೈತರು ಹಾಗೂ ಉದ್ದಿಮೆದಾರರೇ ನೇರವಾಗಿ ಬೆಲೆ ನಿಶ್ಕರ್ಷ ಮಾಡಿಕೊಂಡು ಖರೀದಿ ಪ್ರಕ್ರಿಯೆ ಮುಗಿಸುವ ವ್ಯವಸ್ಥೆ ಸೃಜಿಸಲು ಸರ್ಕಾರ ಅಗತ್ಯವಿರುವ ಭೂಮಿಕೆಯನ್ನು ಸಿದ್ಧಪಡಿಸಲು ಯಾವ ರೀತಿಯ ಕ್ರಮ ಕೈಗೊಳ್ಳುತ್ತಿದೆ ;

(ಈ) ಹೀಗೆ ಖರೀದಿಗೊಳಪಟ್ಟ ಭೂಮಿಯಲ್ಲಿ ಅಗತ್ಯವಿರುವ ರಸ್ತೆ, ನೀರು ಒಳಚಂರಂಡಿ, ವಿದ್ಯುತ್ ದೀಪ ಅಳವಡಿಸಿಕೊಳ್ಳುವ ಬಗ್ಗೆ ಉದ್ದಿಮೆದಾರರೊಂದಿಗೆ ಸಹಾಭಾಗಿತ್ವ ಹೊಂದಲು ಮಾತ್ರ ಸರ್ಕಾರ

ತನ್ನ ಪಾತ್ರ ಸೀಮಿತಗೊಳಿಸಿಕೊಳ್ಳಲು ಸರ್ಕಾರದ ಮುಂದಿರುವ ಅಡಚಣೆಗಳೇನು ? (ವಿವರವಾಗಿ ಮಾಹಿತಿ ಒದಗಿಸುವುದು)

## ಹಜ್ ಭವನಗಳ ಮಾಹಿತಿ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೬೩೮ (೮೨೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಎಷ್ಟು ಹಜ್ ಭವನಗಳ ಕಾಮಗಾರಿ ಪೂರ್ಣಗೊಂಡಿವೆ ; ಹಾಗೂ ಹಜ್ ಭವನ ನಿರ್ಮಿಸಲು ಎಷ್ಟು ಮೊತ್ತದ ಅನುದಾನ ನೀಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಳೆದ ೨ ವರ್ಷಗಳಲ್ಲಿ ಹಜ್ ಯಾತ್ರೆಗಾಗಿ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ; ಇದರಲ್ಲಿ ಹಜ್ ಯಾತ್ರೆ ಕೈಗೊಂಡಿರುವವರ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ಒದಗಿಸುವುದು)

## ಅಮೃತ್ ೨.೦ ಯೋಜನೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೯ (೭೪೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಮೃತ್ ೨.೦ ಯೋಜನೆಯಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಬಹುದು ; ಹಾಗೂ ಅಮೃತ ಮಿತ್ರ ಯೋಜನೆಯಲ್ಲಿ ಪಾರ್ಕ್‌ಗಳನ್ನು ನಿರ್ವಹಣೆ/ಅಭಿವೃದ್ಧಿ ಪಡಿಸಬಹುದೇ ;

(ಆ) ಅಮೃತ್ ೨.೦ ಯೋಜನೆಯಲ್ಲಿ ಮಹಿಳಾ ಸ್ತ್ರೀ ಶಕ್ತಿ ಮತ್ತು ಸ್ವ–ಸಹಾಯ ಸಂಘಗಳಿಗೆ ಪಾರ್ಕ್ ನಿರ್ವಹಣೆ ಮತ್ತು ಅಭಿವೃದ್ಧಿ

ಪಡಿಸುವ ಜವಾಬ್ದಾರಿಯನ್ನು ನೀಡಲಾಗುವುದೇ ; ನೀಡಿದ್ದರೆ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮಹಿಳಾ ಮತ್ತು ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳಿಗೆ ಪಾರ್ಕ್‌ಗಳನ್ನು ನಿರ್ವಹಣೆ ಮತ್ತು ಅಭಿವೃದ್ಧಿಪಡಿಸಲು ಮತ್ತು ನಿರ್ವಹಣೆ ಮಾಡುವ ಜವಾಬ್ದಾರಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಪಾರ್ಕ್‌ಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಮಹಿಳಾ ಸಂಘಗಳಿಗೆ ನೀಡಿರುವ ಅನುದಾನವೆಷ್ಟು; ಅದರಲ್ಲಿ ಈಗಾಗಲೇ ಪಾವತಿ ಮಾಡಿರುವ ಹಾಗೂ ಪಾವತಿಗೆ ಬಾಕಿ ಇರುವ ಮೊತ್ತವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಹಜ್ ಯಾತ್ರೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೪೦ (೭೪೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೫-೨೬ ನೇ ಸಾಲಿನಲ್ಲಿ ಹಜ್ ಯಾತ್ರೆಗೆ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ಮತ್ತು ಲಾಟರಿ ಪ್ರಕ್ರಿಯೆಯಲ್ಲಿ ಆಯ್ಕೆಯಾದವರ ಸಂಖ್ಯೆ ಎಷ್ಟು ;

(ಆ) ಮಂಗಳೂರು ಮತ್ತು ಹುಬ್ಬಳ್ಳಿ ವಿಮಾನ ನಿಲ್ದಾಣಗಳಿಂದ ನೇರವಾಗಿ ಹಜ್ ಯಾತ್ರೆಗೆ ತೆರಳಲು ವಿಮಾನಯಾನ ವ್ಯವಸ್ಥೆ ಕಲ್ಪಿಸಲಾಗಿದೆಯೇ ;

(ಇ) ಹಜ್ ಯಾತ್ರೆಗೆ ತೆರಳುವ ಯಾತ್ರಾರ್ಥಿಗಳಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಮತ್ತು ಸಹಾಯಧನ (subsidy) ಎಷ್ಟು; ಸಹಾಯಧನದ ಮೊತ್ತವೆಷ್ಟು ; ಹೆಚ್ಚುವರಿ ಮಾಡುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ಬೆಂಗಳೂರಿನ ಹಜ್ ಭವನದಲ್ಲಿ ಯಾತ್ರಾರ್ಥಿಗಳಿಗೆ ಸಮರ್ಪಕ ಸೌಲಭ್ಯ ಹಾಗು ತರಬೇತಿ ಶಿಬಿರಗಳನ್ನು ನೀಡಲಾಗುತ್ತಿದೆಯೇ ? (ವಿವರ ಒದಗಿಸುವುದು)

## ನಗರೋತ್ಥಾನ ಯೋಜನೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೧ (೭೫೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯ ವ್ಯಾಪ್ತಿಯಲ್ಲಿರುವ ನಗರಸಭೆ, CMC, ಪುರಸಭೆ TMC ಮತ್ತು ಪಟ್ಟಣ ಪಂಚಾಯಿತಿಗಳಿಗೆ (TP) ಕಳೆದ ಎರಡು ವರ್ಷಗಳಲ್ಲಿ (೨೦೨೩–೨೪ ಮತ್ತು ೨೦೨೪–೨೫) ನಗರೋತ್ಥಾನ ಯೋಜನೆಯಡಿ ಮಂಜೂರಾದ ಒಟ್ಟು ಅನುದಾನ ಎಷ್ಟು ; (ನಗರವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಅನುದಾನದಲ್ಲಿ ಈವರೆಗೆ ಸರ್ಕಾರದಿಂದ ಬಿಡುಗಡೆಯಾದ ಮೊತ್ತವೆಷ್ಟು ; ಇದರಲ್ಲಿ ಆಯಾ ಸ್ಥಳೀಯ ಸಂಸ್ಥೆಗಳು ಎಷ್ಟು ಮೊತ್ತವನ್ನು ಯಾವ ಯಾವ ಕಾಮಗಾರಿಗಳಿಗಾಗಿ ವೆಚ್ಚ ಮಾಡಿವೆ ಹಾಗೂ ಅವುಗಳಲ್ಲಿ ಪೂರ್ಣಗೊಂಡಿರುವ, ಪ್ರಗತಿಯಲ್ಲಿರುವ ಮತ್ತು ಇನ್ನೂ ಪ್ರಾರಂಭವಾಗದ ಕಾಮಗಾರಿಗಳ ಸಂಖ್ಯೆ ಎಷ್ಟು ; ಕಾಮಗಾರಿಗಳು ವಿಳಂಬವಾಗಲು ಕಾರಣಗಳೇನು ;

(ಇ) ನಗರೋತ್ಥಾನ ಯೋಜನೆಯಡಿ ನಡೆದ ಕಾಮಗಾರಿಗಳ ಗುಣಮಟ್ಟವನ್ನು ಪರಿಶೀಲಿಸಲು ಇರುವ ಮಾನದಂಡವೇನು ; ಕಳಪೆ ಕಾಮಗಾರಿ ಕಂಡುಬಂದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸಿಂಧನೂರು ನಗರಕ್ಕೆ ಹೊಂದಿಕೊಂಡಿರುವ ತೋಟಗಾರಿಕೆ ಇಲಾಖೆಯ ಜಾಗದಲ್ಲಿ ಸುಸಜ್ಜಿತವಾದ ಪಾರ್ಕ್ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೨ (೮೪೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ನಗರಕ್ಕೆ ಹೊಂದಿಕೊಂಡಂತೆ ಇರುವ ತೋಟಗಾರಿಕೆ ಇಲಾಖೆಯ ಸುಮಾರು ೨೨ ಎಕರೆ ೧೧ ಗಂಟೆ ಜಾಗದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸುಸಜ್ಜಿತವಾದ ಹಾಗೂ ವಿಸ್ತಾರವಾದ ಪಾರ್ಕ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ;

(ಆ) ಯಾವ ಕಾಲಮಿತಿಯೊಳಗೆ ಸದರಿ ಸ್ಥಳದಲ್ಲಿ ಸುಸಜ್ಜಿತವಾದ ಪಾರ್ಕ್ ನಿರ್ಮಾಣ ಮಾಡಿ, ಸಾರ್ವಜನಿಕ ಬಳಕೆಗೆ ಒದಗಿಸಲಾಗುವುದು ?

## ಸಿಂಧನೂರು ತಾಲ್ಲೂಕಿನಲ್ಲಿ ನಡೆಯುವ ಅಕ್ರಮ ಗಣಿಗಾರಿಕೆ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೩ (೮೪೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಲೈಸೆನ್ಸ್ ಪಡೆದಿರುವ ಸಣ್ಣ ಖನಿಜ ಗಣಿಗಳ (ಮರಳು, ಗ್ರಾನೈಟ್, ಕಲ್ಲುಕ್ವಾರಿ) ಸಂಖ್ಯೆ ಎಷ್ಟು ;

(ಆ) ಕಳೆದ ಮೂರು ವರ್ಷಗಳಲ್ಲಿ ಈ ಪ್ರದೇಶದಲ್ಲಿ ಗಣಿಗಾರಿಕೆಯಿಂದ ಸರ್ಕಾರಕ್ಕೆ ಬಂದಿರುವ ರಾಯಲ್ಟಿ ಆದಾಯ ಎಷ್ಟು ;

(ಇ) ಅನಧಿಕೃತ ಗಣಿಗಾರಿಕೆ ಬಗ್ಗೆ ಸರ್ಕಾರಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು ; ಅದರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; (ವಿವರ ನಿಡುವುದು)

(ಈ) ಗಣಿಗಾರಿಕೆಯಿಂದ ಪರಿಸರದ ಮೇಲೆ ಉಂಟಾಗುತ್ತಿರುವ ಪರಿಣಾಮಗಳನ್ನು ತಗ್ಗಿಸಲು ಸರ್ಕಾರ ಕೈಗೊಂಡಿರುವ ಪರಿಸರ ಸಂರಕ್ಷಣಾ ಕ್ರಮಗಳೇನು ?

## ಸಿಂಧನೂರು ತಾಲ್ಲೂಕಿನ ಸಣ್ಣ / ಗುಡಿ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೪ (೮೪೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ಸಿಂಧನೂರು ತಾಲ್ಲೂಕಿನಲ್ಲಿ ಮುಚ್ಚಲ್ಪಟ್ಟ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಕೈಗಾರಿಕೆಗಳು ಮುಚ್ಚಲು ನಿಖರವಾದ ಕಾರಣವೇನು ;

(ಇ) ಸಣ್ಣ ಕೈಗಾರಿಕೆ/ಉದ್ಯಮಗಳಿಗೆ ಸರ್ಕಾರದಿಂದ ನೀಡಲಾಗುವ ಪ್ರೋತ್ಸಾಹಗಳೇನು ;

(ಈ) ಸಣ್ಣ / ಗುಡಿ ಕೈಗಾರಿಕೆಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರ ಇನ್ನೂ ಹೆಚ್ಚು ವಿನೂತನ ಯೋಜನೆಗಳನ್ನು ರೂಪಿಸುವುದೇ ?

# ಸಿಂಧನೂರು 'ಎಪಿಎಂಸಿ' ಯಲ್ಲಿ ನೂತನ ಸುಸಜ್ಜಿತವಾದ ಗೋದಾಮುಗಳನ್ನು ನಿರ್ಮಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೫ (೮೪೬) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ಎಪಿಎಂಸಿ ಆವರಣದಲ್ಲಿರುವ ಗೋದಾಮುಗಳ ಸಂಗ್ರಹಣಾ ಸಾಮರ್ಥ್ಯವೆಷ್ಟು;

(ಆ) ಪ್ರಸ್ತುತ ಬೇಡಿಕೆಗೆ ಹೋಲಿಸಿದರೆ ರೈತರು ಬೆಳೆದ ಆಹಾರ ಪದಾರ್ಥಗಳ ಸಂಗ್ರಹಣೆಗೆ ಅಗತ್ಯ ಗೋದಾಮುಗಳ ಕೊರತೆಯಿದೆಯೇ ;

(ಇ) ಇದ್ದಲ್ಲಿ, ಈ ಸಂಬಂಧ ಸರ್ಕಾರದಿಂದ ಯಾವ ಕ್ರಮವಹಿಸಲಾಗಿದೆ ;

(ಈ) ಯಾವ ಕಾಲಮಿತಿಯೊಳಗೆ ಸಿಂಧನೂರು ಎಪಿಎಂಸಿಯಲ್ಲಿ ನೂತನ ಸುಸಜ್ಜಿತವಾದ ಗೋದಾಮುಗಳನ್ನು ನಿರ್ಮಿಸಲಾಗುವುದು ?

# ನಗರಾಭಿವೃದ್ಧಿ ಇಲಾಖೆಯಿಂದ ರಾಜಕೀಯ ಪಕ್ಷಗಳಿಗೆ ಜಮೀನು/ ಸೈಟ್ ಮಂಜೂರು ಮಾಡಿರುವ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೬ (೮೧೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭, ೨೦೧೭–೧೮, ೨೦೧೮–೧೯, ೨೦೧೯–೨೦, ೨೦೨೦–೨೧ ಸಾಲಿನಲ್ಲಿ ಇಲಾಖೆಯಿಂದ ಸರ್ಕಾರಿ ಜಮೀನು/

ಸಿ.ಎ ಸೈಟ್/ಜಾಗವನ್ನು ರಾಜಕೀಯ ಪಕ್ಷಗಳಿಗೆ/ಕಛೇರಿಗಳಿಗೆ ನೀಡಲಾಗಿದೆಯೇ ; ನೀಡಿದ್ದರೆ, ಯಾವ ಸ್ಥಳದಲ್ಲಿ, ಎಷ್ಟು ಜಮೀನುಗಳನ್ನು ಯಾವ ರಾಜಕೀಯ ಪಕ್ಷಕ್ಕೆ ನೀಡಲಾಗಿದೆ ; ನೀಡಿರುವ ಜಮೀನಿನ ಮೌಲ್ಯವೆಷ್ಟು ; ಸದರಿ ಜಮೀನುಗಳನ್ನು ನೀಡಲು ಸರ್ಕಾರ ಅನುಸರಿಸಿರುವ ಕ್ರಮಗಳೇನು ; ಯಾವ ಇಲಾಖೆಯ ಪೂರ್ವಾನುಮತಿ ಪಡೆಯಲಾಗಿದೆ ; ಯಾವ ಉದ್ದೇಶಕ್ಕಾಗಿ ಸರ್ಕಾರಿ ಜಮೀನನ್ನು ರಾಜಕೀಯ ಪಕ್ಷಗಳಿಗೆ/ ಕಛೇರಿಗಳಿಗೆ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೧-೨೨, ೨೦೨೨-೨೩, ೨೦೨೩-೨೪, ೨೦೨೪-೨೫, ೨೦೨೫-೨೬ನೇ ಸಾಲಿನಲ್ಲಿ ಸರ್ಕಾರ ಇಲಾಖೆಯಿಂದ ರಾಜಕೀಯ ಪಕ್ಷಗಳಿಗೆ ಜಮೀನನ್ನು ಹಂಚಿಕೆ ಮಾಡಿದ್ದು, ಸಂಪೂರ್ಣ ವಿವರಗಳನ್ನೊಳಗೊಂಡ ಜಮೀನು ಹಂಚಿಕೆ ಪತ್ರಗಳನ್ನು ನೀಡುವುದು ಯಾವ ಮಾನದಂಡಗಳನುಸಾರ ಜಮೀನನ್ನು ಹಂಚಿಕೆ ಮಾಡಲಾಗಿದೆ ? (ಸರ್ಕಾರದ ಸುತ್ತೋಲೆ, ಕಾಯ್ದೆಗಳ ಪ್ರತಿ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳ C.A ನಿವೇಶನಗಳ ಹಂಚಿಕೆಯ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೬೪೭ (೮೩೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಸ್ಥಳೀಯ ಸಂಸ್ಥೆಗಳಿಗೆ ಸೇರಿದ ಸಿ.ಎ. ನಿವೇಶನವನ್ನು ಯಾವ ಉದ್ದೇಶಗಳಿಗೆ ಮತ್ತು ಯಾರಿಗೆ ಮಂಜೂರು ಮಾಡಬಹುದು ; ಯಾರಿಗೆ ಮಂಜೂರು ಮಾಡಲು ಅವಕಾಶವಿರುವುದಿಲ್ಲ ;

(ಆ) ಮಂಜೂರು ಮಾಡಲು ಅನುಸರಿಸುವ ಕ್ರಮ/ವಿಧಾನ ಯಾವುವು ;

(ಇ) ಪೌರಾಡಳಿತ ಇಲಾಖೆ ವ್ಯಾಪ್ತಿಯಲ್ಲಿಯ ಎಷ್ಟು ಸಿ.ಎ. ನಿವೇಶನಗಳನ್ನು ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡುವಂತೆ ಕೇಳಲಾಗಿತ್ತು ; ಎಷ್ಟು ನಿವೇಶನವನ್ನು ನೀಡಲಾಗಿದೆ ; (ವಿವರ ನೀಡುವುದು)

(ಈ) ಸಿ.ಎ. ನಿವೇಶನಗಳನ್ನು ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡುವ ಕುರಿತು ಕಾನೂನು ಇಲಾಖೆ ನೀಡಿದ ಅಭಿಪ್ರಾಯವೇನು ; (ಅಭಿಪ್ರಾಯದ ಪ್ರತಿಯನ್ನು ನೀಡುವುದು)

(ಉ) ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡಲಾದ ಸಿ.ಎ. ನಿವೇಶನಗಳ ಮಾರುಕಟ್ಟೆ ಮೌಲ್ಯವೆಷ್ಟು ; ಎಷ್ಟು ಮೊತ್ತ ರಿಯಾಯಿತಿಯನ್ನು ನೀಡಲಾಗಿದೆ ; ಇದರಿಂದ ಸರ್ಕಾರಕ್ಕೆ ಸ್ಥಳೀಯ ಸಂಸ್ಥೆಗಳಿಗೆ ಉಂಟಾ ನಷ್ಟವೆಷ್ಟು ;

(ಊ) ನಗರ ಸಭೆಗಳ ಸಾಮಾನ್ಯ ಸಭೆಯಲ್ಲಿ ಸಿ.ಎ. ನಿವೇಶನಗಳನ್ನು ಕಾಂಗ್ರೆಸ್ ಭವನಕ್ಕೆ ನೀಡುವ ಕುರಿತು ಮಾಡಲಾದ ನಿರ್ಣಯವೇನು ? (ಸದರಿ ನಿರ್ಣಯದ ಪ್ರತಿಯನ್ನು ನೀಡುವುದು)

## ಪೌರಾಡಳಿತ ಇಲಾಖೆಯ ಸಿಬ್ಬಂದಿ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೬೪೮ (೮೩೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಪಟ್ಟಣ ಪಂಚಾಯತಿ ಮತ್ತು ಪುರಸಭೆಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಮುಖ್ಯಾಧಿಕಾರಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಐದು ವರ್ಷದಲ್ಲಿ ಎಷ್ಟು ಮುಖ್ಯಾಧಿಕಾರಿಗಳ ಮೇಲೆ ಹಣದುರುಪಯೋಗ, ಅವ್ಯವಹಾರ ಇತರೆ ಕಾರಣಗಳ ಮೇಲೆ ಇಲಾಖಾ ವಿಚಾರಣೆಗೆ ಆದೇಶಿಸಲಾಗಿದೆ ಮತ್ತು ಅಮಾನತ್ತು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ನಿಯೋಜನೆ/ಸ್ವಂತ ಶ್ರೇಣಿಯು ಮೇಲಿರುವ ಹಲವು ಮುಖ್ಯಾಧಿಕಾರಿಗಳು ಅವ್ಯವಹಾರದಲ್ಲಿ ತೊಡಗಿದ ಆರೋಪ ಬಂದರೂ ಸಹ ಮಾತೃ ಇಲಾಖೆ ಅಥವಾ ಮೂಲ ಹುದ್ದೆಗೆ ಹಿಂತಿರುಗಿಸದೆ ಮುಖ್ಯಾಧಿಕಾರಿ ಹುದ್ದೆಯಲ್ಲೇ ಮುಂದುವರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರನ್ನು ಮಾತೃ ಇಲಾಖೆಗೆ ಅಥವಾ ಮೂಲ ಹುದ್ದೆಗೆ ಹಿಂತಿರುಗಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ನಗರಗಳಲ್ಲಿನ ಕುಡಿಯುವ ನೀರಿನ ಗುಣಮಟ್ಟವನ್ನು ಕಾಪಾಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೬೪೯ (೮೪೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ  ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರಗಳಲ್ಲಿನ ನೀರು ಸರಬರಾಜು ಘಟಕಗಳಲ್ಲಿ ಕುಡಿಯುವ ನೀರಿನ ಗುಣಮಟ್ಟವನ್ನು WHO ಹಾಗೂ BIS ಮಾನದಂಡಗಳಂತೆ ನಿಯಮಿತವಾಗಿ ಪರೀಕ್ಷಿಸಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಆ) ಜನರಿಗೆ ಯಾವ–ಯಾವ ಮೂಲದಿಂದ ಹಾಗೂ ಯಾವ ವಿಧಾನಗಳಲ್ಲಿ ನೀರನ್ನು ಸರಬರಾಜು ಮಾಡಲಾಗುತ್ತಿದೆ ; ಯಾವ ರೀತಿಯ ಶುದ್ಧೀಕರಣ ಪ್ರಕ್ರಿಯೆಗಳನ್ನು ನಡೆಸಲಾಗುತ್ತಿದೆ ;

(ಇ) ರಾಜ್ಯದ ಪ್ರತಿ ಜಿಲ್ಲೆಗಳಲ್ಲಿಯೂ ಸುಸಜ್ಜಿತ ನೀರಿನ ಗುಣಮಟ್ಟ ಪರೀಕ್ಷಾ ಪ್ರಯೋಗಾಲಯಗಳನ್ನು ಸ್ಥಾಪಿಸಲು ಸರ್ಕಾರ ಯಾವ ಯೋಜನೆ ರೂಪಿಸಿದೆ ; (ರೂಪಿಸಿದ್ದಲ್ಲಿ ವಿವರ ನೀಡುವುದು)

(ಈ) ನೀರು ಶುದ್ಧೀಕರಣ ಘಟಕಗಳಲ್ಲಿ ಪ್ರಿ–ಕ್ಲೋರಿನೇಷನ್ ಮತ್ತು ಪೋಸ್ಟ್ ಕ್ಲೋರಿನೇಷನ್ ಹಂತಗಳಲ್ಲಿ ಬಳಸುವ ಕ್ಲೋರಿನ್ ಪ್ರಮಾಣವನ್ನು ವೈಜ್ಞಾನಿಕವಾಗಿ ಅಳೆಯಲು ಆಧುನಿಕ ಉಪಕರಣಗಳನ್ನು ಹಾಗೂ ತರಬೇತಿ ಪಡೆದ ಸಿಬ್ಬಂದಿಯನ್ನು ನೇಮಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ನೀರು ಸರಬರಾಜು ಓವರ್‌ಹೆಡ್ ಟ್ಯಾಂಕ್‌ಗಳನ್ನು ಎಷ್ಟು ದಿನಗಳಿಗೊಮ್ಮೆ ಸ್ವಚ್ಛ ಮಾಡಲಾಗುತ್ತಿದೆ ಹಾಗೂ ಇದಕ್ಕೆ ಇರುವ ಮಾನದಂಡಗಳೇನು ; ಯಾರಿಂದ–ಯಾವ ರೀತಿಯಲ್ಲಿ ಸ್ವಚ್ಛ ಮಾಡಲಾಗುತ್ತಿದೆ ;

(ಊ) ಕುಡಿಯುವ ನೀರಿನಿಂದ ಉಂಟಾಗುವ ರೋಗಗಳನ್ನು ತಡೆಗಟ್ಟುವ ಉದ್ದೇಶದಿಂದ ರಾಜ್ಯಮಟ್ಟದಲ್ಲಿ ಸಮಗ್ರ "Water Quality Monitoring and Public Health Protection Program" ಜಾರಿಗೆ ತರಲು ಸರ್ಕಾರ ಉದ್ದೇಶಿಸಿದೆಯೇ ? (ಇದ್ದಲ್ಲಿ, ವಿವರ ನೀಡುವುದು)

# ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲ್ಲೂಕು ಜಿಗಣಿ ಹೋಬಳಿ ಭೂ ಸ್ವಾಧೀನ ಪ್ರಕ್ರಿಯೆ ಕುರಿತು

**ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೦ (೭೫೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಬೂಮ್ಮಸಂದ್ರ ೪ನೇ ಹಂತ ಮತ್ತು ಎಲೆಕ್ಟ್ರಾನಿಕ್ ಸಿಟಿ ಸಂಪರ್ಕ ರಸ್ತೆ ಅಧಿಸೂಚನೆ ಹೊರಡಿಸಿರುವ ಹುಲಿಮಂಗಲ ಮತ್ತು ತಿರುಪಾಳ್ಯ ಗ್ರಾಮಗಳಲ್ಲಿನ ಒಟ್ಟು ೬–೧/೨ ಎಕರೆ ಜಮೀನನ್ನು ಭೂ ಸ್ವಾಧೀನದಿಂದ ಕೈ ಬಿಡುವ ತೀರ್ಮಾನವನ್ನು ಬೋರ್ಡ್ ಮೀಟಿಂಗ್‌ನಲ್ಲಿ ಕ್ರಮ ಕೈಗೊಂಡಿದ್ದರೂ ಇದುವರೆಗೂ ಸರ್ಕಾರದ ಅಧಿಕೃತ ಆದೇಶ ಹೊರಡಿಸದಿರಲು ಕಾರಣವೇನು ; (ವಿವರ ನೀಡುವುದು)

(ಆ) ಇದು ಸರ್ಕಾರದ ಗಮನಕ್ಕೆ ಬಂದಿದ್ದರೂ ಸಹ ಈ ಬಗ್ಗೆ ಯಾವುದೇ ರೀತಿ ಕ್ರಮ ಕೈಗೊಳ್ಳದೆ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಪ್ರಾಥಮಿಕ ಅಧಿಸೂಚನೆ ಸರ್ಕಾರ ಕೈ ಬಿಟ್ಟಿರುವ ಆದೇಶವಿದ್ದರೂ ಇನ್ನು ಸರ್ಕಾರ ಯಾವುದೇ ಅಧಿಕೃತ ಆದೇಶ ಅಥವಾ ಗೆಜೆಟ್ ನೋಟಿಫಿಕೇಶನ್ ಹೊರಡಿಸದೆ ಇರಲು ಕಾರಣವೇನು ; (ಸಂಪೂರ್ಣ ವಿವರ ನೀಡುವುದು)

(ಈ) ಇದನ್ನು ಯಾವ ಕಾಲಮಿತಿಯೊಳಗೆ ಗೆಜೆಟ್ ನೋಟಿಫಿಕೇಶನ್ ಹೊರಡಿಸಲಾಗುವುದು ? (ವಿವರ ನೀಡುವುದು)

# ಕೆ.ಎಸ್.ಡಿ.ಎಲ್. ಸಂಸ್ಥೆಯ ಉತ್ಪಾದನೆ ವಹಿವಾಟು ಮಾರುಕಟ್ಟೆ ಕುರಿತು

**ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೧ (೭೫೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ಲಿಮಿಟೆಡ್ (ಕೆ.ಎಸ್.ಡಿ.ಎಲ್) ಸಂಸ್ಥೆಯು ಪ್ರಸ್ತುತ ಎಷ್ಟು ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದೆ ; ಹೊಸದಾಗಿ ಯಾವುದಾದರೂ ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಲು ಯೋಜಿಸಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ಅವಧಿಯಲ್ಲಿ ಕೆ.ಎಸ್.ಡಿ.ಎಲ್ ಸಂಸ್ಥೆಯ ಉತ್ಪಾದಾನೆ, ವಹಿವಾಟು ಮತ್ತು ನಿವ್ವಳ ಲಾಭದ ಪ್ರಮಾಣವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಈ ಸಂಸ್ಥೆಯ ಉತ್ಪನ್ನಗಳು ಈಗಗಾಲೇ ಭಾರತದ ಎಷ್ಟು ರಾಜ್ಯಗಳಲ್ಲಿ ಮತ್ತು ಜಗತ್ತಿನ್ಯಾದ್ಯಂತ ಎಷ್ಟು ರಾಷ್ಟ್ರಗಳಲ್ಲಿ ಮಾರುಕಟ್ಟೆ ವಿಸ್ತರಿಸಿಕೊಂಡಿವೆ ಹಾಗೂ ವಿಸ್ತರಿಸಲು ಯೋಜನೆ ರೂಪಿಸಲಾಗಿದೆಯೇ ; (ರಾಜ್ಯ ಮತ್ತು ರಾಷ್ಟ್ರಗಳ ಹೆಸರಿನೊಂದಿಗೆ ಸಂಪೂರ್ಣ ವಿವರ ನೀಡುವುದು)

(ಈ) ಕೆ.ಎಸ್.ಡಿ.ಎಲ್ ಸಂಸ್ಥೆಯ ಉತ್ಪನ್ನಗಳ ಹೆಸರಿನಲ್ಲಿ ಮಾರುಕಟ್ಟೆ ಪ್ರವೇಶಿಸಿದ್ದ ಎಷ್ಟು ಕೋಟಿ ಮೌಲ್ಯದ ನಕಲಿ/ಸೋಪು ಉತ್ಪನ್ನಗಳನ್ನು ಈವರೆವಿಗೂ ವಶಪಡಿಸಿಕೊಳ್ಳಲಾಗಿದೆ ; ದುರುಪಯೋಗ ತಡೆಯುವ ನಿಟ್ಟಿನಲ್ಲಿ ಸಂಸ್ಥೆಯು ಕೈಗೊಂಡಿರುವ ಕ್ರಮಗಳೇನು ;

(ಉ) ಬಹುಭಾಷ ನಟಿಯವರನ್ನು ಕೆ.ಎಸ್.ಡಿ.ಎಲ್ ಸಂಸ್ಥೆಯ ಯಾವ ಉತ್ಪನ್ನಕ್ಕೆ ರಾಯಬಾರಿ/ರೂಪದರ್ಶಿಯಾಗಿ ಆಯ್ಕೆ ಮಾಡಿದೆ ; ಎಷ್ಟು ಅವಧಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ ಹಾಗೂ ಇವರಿಗೆ ಪಾವತಿಸುತ್ತಿರುವ ಮೊತ್ತ ಎಷ್ಟು ? (ವಿವರ ನೀಡುವುದು)

## ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮೀಣ ಜಿಲ್ಲೆಗಳಲ್ಲಿ ಸ್ಥಾಪಿಸಲಾಗಿರುವ ಸಣ್ಣ ಕೈಗಾರಿಕೆಗಳ ಬಗ್ಗೆ

**ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೨ (೭೫೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಜಿಲ್ಲೆಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲಾಗಿದೆ ; ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ;

(ಆ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಯಾವುದಾದರೂ ಯೋಜನೆಯನ್ನು ಕೈಗೊಂಡಿದೆಯೇ ; ಇಲ್ಲದೆ ಹೋದಲ್ಲಿ ; ಯೋಜನೆಗಳನ್ನು ಕೈಗೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಇ) ಈಗಾಗಲೇ ಸ್ಥಾಪಿಸಲಾಗಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಸಹಾಯಧನ ನೀಡಲಾಗಿದೆಯೇ ? (ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಿರುವ ಸೆಸ್ ಹಣದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೩ (೭೬೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾಗಿರುವ ಆರೋಗ್ಯ ಉಪಕರ, ಗ್ರಂಥಾಲಯ ಉಪಕರ ಮತ್ತು ಭಿಕ್ಷಾಟನಾ ಉಪಕರಗಳ ಹಣವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಸಂಗ್ರಹಿಸಲಾಗಿರುವ ಸೆಸ್ ಹಣವನ್ನು ಸಂಬಂಧಪಟ್ಟ ಇಲಾಖೆಗಳಿಗೆ ವರ್ಗಾಹಿಸಲಾಗಿದೆಯೇ ; (ಇದರ ಪೂರ್ಣ ವಿವರ ಒದಗಿಸುವುದು)

(ಇ) ಈ ರೀತಿ ಸಂಗ್ರಹಿಸಲಾದ ಉಪಕರವನ್ನು ಯಾವ ಯಾವ ಕಾರ್ಯಗಳಿಗೆ ಎಷ್ಟೆಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಿಂದ ಸ್ಥಳೀಯ ಸಂಸ್ಥೆಗಳು ರೂ.೫೦೪.೦೦ ಕೋಟಿ ಆರೋಗ್ಯ ಸೆಸ್, ರೂ ೫೪.೦೦ ಕೋಟಿ ಗ್ರಂಥಾಲಯ ಉಪಕರ ಮತ್ತು ರೂ.೩೦.೦೦ ಕೋಟಿ ಭಿಕ್ಷಾಟನಾ ಸೆಸ್ ಹಣವನ್ನು ಇದುವರೆಗೂ ಸಂಬಂಧಪಟ್ಟ ಇಲಾಖೆಗಳ ಖಾತೆಗೆ ವರ್ಗಾಯಿಸಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು ಹಾಗೂ ಇದು ಕಾಯ್ದೆಯ ನಿಬಂಧನೆಗಳ ಉಲ್ಲಂಘನೆಯಾಗುವುದಿಲ್ಲವೇ ?

## ಕೋಲಾರ ನಗರದಲ್ಲಿ ಒಳಚರಂಡಿ ಕಾಮಾಗಾರಿಯು ಅವೈಜ್ಞಾನಿಕವಾಗಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೪ (೭೬೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ನಗರದಲ್ಲಿ ಈಗಾಗಲೇ ಕೈಗೊಳ್ಳಲಾಗಿರುವ ಒಳಚರಂಡಿ ಕಾಮಗಾರಿಗಳು ಅವೈಜ್ಞಾನಿಕವಾಗಿದ್ದು, ಇವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ಒಳ ಚರಂಡಿಗಳು ತುಂಬಿ, ಪಟ್ಟಣದ ರಸ್ತೆಗಳಲ್ಲಿ ಕೊಳಚೆ ನೀರು ಹರಿದು ಸೊಳ್ಳೆಗಳು ಉತ್ಪತ್ತಿಯಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪ್ರಭಾವ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ನಗರದಲ್ಲಿ ಒಳಚರಂಡಿಯಿಂದ ಕೊಳಚೆ ನೀರು ತುಂಬಿ ರಸ್ತೆ ಮೇಲೆ ಹರಿಯುತ್ತಿರುವ ಮಾರ್ಗಗಳ ದುರಸ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದ ನಗರಸಭೆ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪ್ರಸ್ತುತ ರಾಜ್ಯದಲ್ಲಿ ಗಣಿಗಾರಿಕೆ ಮಾಡಲು ಪರವಾನಗಿ ಪಡೆದ ಕಂಪನಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೫ (೭೯೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿ ಗಣಿಗಾರಿಕೆ ಮಾಡಲು ಪರವಾನಗಿ ಪಡೆದ ಕಂಪನಿಗಳ ಸಂಖ್ಯೆ ಎಷ್ಟು ; ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವ ಕಂಪನಿಗಳ ಸಂಖ್ಯೆ ಎಷ್ಟು ; ಗಣಿಗಾರಿಕೆ ಮಾಡುವಾಗ ಸರ್ಕಾರದ ನಿಯಮಗಳನ್ನು ಪಾಲಿಸದೇ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಗಣಿಗಾರಿಕೆ ಮಾಡಿದ ಮೇಲೆ ಉಪಯೋಗಕ್ಕೆ ಬಾರದ ಮಣ್ಣು ಮತ್ತು ಕಲ್ಲುಗಳನ್ನು ರಾಶಿ ರಾಶಿಯಾಗಿ ಅನುಮತಿ ನೀಡಿದ ಗಣಿಗಾರಿಕೆ ಪ್ರದೇಶಕ್ಕಿಂತ ಇತರೆ ಜಮೀನಿನಲ್ಲಿ ಹಾಕಿರುವುದರಿಂದ ಅಕ್ಕ ಪಕ್ಕದ ರೈತರ ಜಮೀನಿಗೆ, ಅವರು ಬೆಳೆಯುವ ಬೆಳೆಗಳು

ನಾಶವಾಗುವಂತಹ ಪರಿಸ್ಥಿತಿ ನಿರ್ಮಾಣವಾಗಿರುವುದು ಕೆಲವು ಕಡೆ ಕಂಡು ಬಂದಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ?

## ನೇಕಾರರಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳು, ಸಹಾಯಧನಗಳು ಇತ್ಯಾದಿ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೬ (೭೯೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೈಮಗ್ಗದಿಂದ ತಯಾರಾದ ವಸ್ತುಗಳನ್ನು ಮಾರಾಟ ಮಾಡಲು ಮತ್ತು ಸಾರ್ವಜನಿಕರು ಬಳಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಆ) ನೇಕಾರರಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳು, ಸಹಾಯಧನಗಳು ಇತ್ಯಾದಿಗಳ ವಿವರಗಳನ್ನು ನೀಡುವುದು ; (ಯಾವ ಆಧಾರದ ಮೇಲೆ ಅವರಿಗೆ ಸವಲತ್ತುಗಳು ದೊರೆಯುತ್ತವೆ)

(ಇ) ನೇಕಾರರಿಗೆ ನೂತನ ತಂತ್ರಜ್ಞಾನದ ಕೊರತೆ ಇದ್ದು, ಅದನ್ನು ಸರಿಪಡಿಸಲು ಮತ್ತು ನೂತನ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

## ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೭ (೭೯೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿರುವ ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಗಳು ಯಾವುವು ; ಹೊಸದಾಗಿ ಸ್ಥಾಪನೆ ಮಾಡಲು ಉದ್ದೇಶಿಸಿರುವ ಕಾರ್ಖಾನೆಗಳ ಮಾಹಿತಿ ನೀಡುವುದು ;

(ಆ) ಪ್ರಸ್ತುತ ಲಾಭ ಮತ್ತು ನಷ್ಟದಲ್ಲಿರುವ ಕಾರ್ಖಾನೆಗಳು ಯಾವುವು ;

(ಇ) ಸಕ್ಕರೆಯ ಗುಣಮಟ್ಟವನ್ನು ಕಾಯ್ದುಕೊಳ್ಳುವಲ್ಲಿ ವಿಫಲವಾಗಿದ್ದು, ಸರ್ಕಾರ ಇದರ ಬಗ್ಗೆ ಕೈಗೊಂಡಿರುವ ಕ್ರಮವೇನು ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಒಳಚರಂಡಿ ವ್ಯವಸ್ಥೆ ಸರಿಪಡಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೮ (೭೧೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಒಳಚರಂಡಿ ವ್ಯವಸ್ಥೆ, ತೀವ್ರ ಹದಗೆಟ್ಟಿದ್ದು, ಈ ವ್ಯವಸ್ಥೆ ಸರಿಪಡಿಸಲು ರೂ.೧೨೫೦ ಕೋಟಿ ಅನುದಾನ ಬೇಡಿಕೆ ಇರುವುದರಿಂದ ಈ ಸಮಸ್ಯೆಯನ್ನು ಸರ್ಕಾರ ಯಾವ ರೀತಿ ಪರಿಹರಿಸುವುದು ; (ವಿವರ ನೀಡುವುದು)

(ಆ) ಮಂಗಳೂರು ನಗರದಲ್ಲಿ ಸುಮಾರು ೫೦ ವರ್ಷಕ್ಕಿಂತ ಹಳೆಯದಾದ ಒಳಚರಂಡಿ ಇದ್ದು, ಇದು ಸಂಪೂರ್ಣ ಹದಗೆಟ್ಟಿ ಒಳಚರಂಡಿ ನೀರನ್ನು ಸಾರ್ವಜನಿಕರ ತೊಡುಗಳಲ್ಲಿ ಹರಿಯುತ್ತಿದ್ದು, ಮಂಗಳೂರು ನಗರದ ಕೆರೆ, ಬಾವಿ ಮತ್ತು ನದಿಗಳ ನೀರು ಸಂಪೂರ್ಣ ಹಾಳಾಗಿದ್ದು, ಈ ಬಗ್ಗೆ ಸಮಗ್ರ ವರದಿ ಪಡೆದು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಒಳಚರಂಡಿ ನೀರು ಶುದ್ಧೀಕರಿಸಿ ಕಾರ್ಖಾನೆಗಳ ಜೊತೆ ಒಪ್ಪಂದ ಮಾಡಿಕೊಂಡು

ಒಳಚರಂಡಿ ನೀರನ್ನು ಶುದ್ದೀಕರಿಸಲು ಕೈಗಾರಿಕೆಗಳಿಗೆ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಈಗಾಗಲೇ ಒಂದು ಕೈಗಾರಿಕೆಗೆ ಈ ಮಾದರಿಯ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಉಳಿದ ಕಡೆಗಳ ಒಳಚರಂಡಿ ನೀರನ್ನು ಶುದ್ದೀಕರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಈ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರು ಘಟಕ ರಚಿಸಲು ಸರ್ಕಾರ ಹಾಗೂ ೨೪x೭ ಶುದ್ಧ ನೀರು ಒದಗಿಸಲು ಸರ್ಕಾರದ ಮುಂದಿರುವ ಸವಾಲುಗಳು ಏನು ? (ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಿಸಲಾದ ಮಾರುಕಟ್ಟೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೯ (೭೨೦) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಿಸಲಾದ ಮಾರುಕಟ್ಟೆ ಕಾಮಗಾರಿಗಳು ಯಾವ ಹಂತದಲ್ಲಿದೆ ; ಇದಕ್ಕೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಬಾಕಿ ಇರುವ ಹಣ ಎಷ್ಟು ; (ವಿವರ ನೀಡುವುದು)

(ಆ) ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಾರುಕಟ್ಟೆಗಳಿಗೆ ವಿನಿಯೋಗಿಸಿರುವ ಹಣವು ಯಾವುದೇ ಆದಾಯ ಇಲ್ಲದೆ ಸರ್ಕಾರದ ಹಣ ಪೋಲು ಮಾಡುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲಿ ೬ ಮಾರುಕಟ್ಟೆಗಳ ಸ್ಥಳಾವಕಾಶವನ್ನು ಗ್ರಾಹಕರಿಗೆ ವಹಿಸಿಕೊಡದೆ ಕಾಮಗಾರಿಗಳನ್ನು

ನಿಲ್ಲಿಸಿ ಸಾರ್ವಜನಿಕರ ಹಣ ಪೋಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ಮಾರ್ಟ್ ಸಿಟಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೦ (೭೨೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿ ಕಳಪೆ ಗುಣಮಟ್ಟದ್ದಾಗಿದ್ದು, ಅನೇಕ ಕಾಮಗಾರಿಗಳು ಮಳೆಗಾಲದಲ್ಲಿ ಕುಸಿದು ಬಿದ್ದು ಅಪಾರ ಹಾನಿಗಳು ಉಂಟಾಗಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಸ್ಮಾರ್ಟ್ ಸಿಟಿ ಮೂಲ ಉದ್ದೇಶವನ್ನು ಬಿಟ್ಟು ರಸ್ತೆ ಮತ್ತು ಚರಂಡಿಗಳಿಗೆ ಹಣ ವಿನಿಯೋಗಿಸಲಾಗಿದೆ ಎಂಬ ದೂರುಗಳಿದ್ದು ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಸ್ಮಾರ್ಟ್ ಸಿಟಿ ಯೋಜನೆ ಅನ್ವಯ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೈಗೊಂಡಿರುವ ಯೋಜನೆಗಳಾವುವು ; ಅವುಗಳಿಗೆ ವಿನಿಯೋಗಿಸಿದ ಹಣ ಎಷ್ಟು ? (ವಿವರ ನೀಡುವುದು)

## ಬೈಕಂಪಾಡಿ ಮಾರುಕಟ್ಟೆ ಕಾಮಗಾರಿಗಳ ಹಂತಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೧ (೭೨೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಮಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಬೈಕಂಪಾಡಿ ಮಾರುಕಟ್ಟೆ ಕಾಮಗಾರಿ ಯಾವ ಹಂತದಲ್ಲಿದೆ ; ಇದಕ್ಕೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಮಂಗಳೂರು ನಗರದಲ್ಲಿ ಕೃಷಿ ಮಾರಾಟ ಇಲಾಖೆಯಿಂದ ಮಾರುಕಟ್ಟೆ ಪ್ರಾಂಗಣದಲ್ಲಿ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಕಾಮಗಾರಿಗೆ ವೆಚ್ಚ ಮಾಡಿದ ಹಣ ಎಷ್ಟು ; (ವಿವರ ನೀಡುವುದು)

(ಇ) ಮಾರುಕಟ್ಟೆ ನಿರ್ಮಿಸುವಾಗ ೦೮ ಅಂತಸ್ತಿನ ಮಾರುಕಟ್ಟೆಯನ್ನು ಅವೈಜ್ಞಾನಿಕವಾಗಿ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರಕ್ಕೆ ಉಂಟಾಗಿರುವ ನಷ್ಟ ಎಷ್ಟು ? (ವಿವರ ನೀಡುವುದು)

## ಪುರಸಭೆ, ನಗರಸಭೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೨ (೭೨೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆಯಿಂದ ಮೇಲ್ದರ್ಜೆಗೇರಿಸಲು ಪುರಸಭೆ ಪಟ್ಟಣ ಪಂಚಾಯತ್ ನಗರ ಸಭೆಗಳಲ್ಲಿ ೪/೫ ವರ್ಷಗಳಿಂದ ಚುನಾವಣೆ ನಡೆಸದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಆ) ಚುನಾವಣೆ ನಡೆಸದೇ ನಗರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಇಲಾಖೆ ಮೇಲ್ದರ್ಜೆಗೆ ಏರಿಸಲು ಎಷ್ಟು ಪುರಸಭೆ, ನಗರಸಭೆಗಳ ಪ್ರಸ್ತಾವನೆಗಳು ಇದೆ ; (ವಿವರ ನೀಡುವುದು)

(ಈ) ಇಲಾಖೆಯಲ್ಲಿ ಎಷ್ಟು ಮಂದಿ ನೌಕರರಿಗೆ ಅರ್ಹತೆ ಇಲ್ಲದೆ ಮೇಲ್ದರ್ಜೆಯ ಹುದ್ದೆಗೆ ಅನುಮತಿ ನೀಡಲಾಗಿದೆ ? (ವಿವರ ನೀಡುವುದು)

## ರಾಷ್ಟ್ರೀಯ ಕೈಗಾರಿಕೆ ಕಾರಿಡಾರ್ ಅಭಿವೃದ್ಧಿ ಯೋಜನೆ ಕುರಿತು

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೩ (೭೭೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೈಗಾರಿಕೆ ಅಭಿವೃದ್ಧಿಗೆ “ಮಂಡ್ಯ, ಮೈಸೂರು, ಚಾಮರಾಜನಗರ, ಕೋಲಾರ, ಹಾಸನ, ಮಂಗಳೂರು, ಹುಬ್ಬಳ್ಳಿ–ಧಾರವಾಡ, ರಾಯಚೂರು ಮತ್ತು ಬೀದರ್” ಸೇರಿದಂತೆ ೯ ಜಿಲ್ಲೆಗಳನ್ನೊಳಗೊಂಡ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಯೋಜನೆಯನ್ನು ಹಾಕಿಕೊಳ್ಳಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಇಲ್ಲಿಯುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಯೋಜನೆಯಿಂದ ಕರ್ನಾಟಕದ ಉದ್ದಗಲಕ್ಕೂ ಬೃಹತ್ ಪ್ರಮಾಣದಲ್ಲಿ ಉದ್ಯೋಗಾವಕಾಶ ಸೃಷ್ಟಿಸಲು ಕಾರಣವಾಗುವುದರಿಂದ ಈ ೯ ಜಿಲ್ಲೆಗಳಲ್ಲಿರುವ ಕೌಶಲ್ಯಾಭಿವೃದ್ಧಿ ವಿದ್ಯಾವಂತರಿಗೆ, ಉದ್ಯಮಶೀಲತೆಯ ಉದ್ಯಮಗಳಿಗೆ ಹಾಗೂ ಕರ್ನಾಟಕದ ಬೆಳವಣಿಗೆಗೆ ಅನುಕೂಲವಾಗುವ ಹಿತದೃಷ್ಟಿಯಿಂದ ಈ ಯೋಜನೆಯನ್ನು ಕಾರ್ಯಗತಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

## ಬೆಂಗಳೂರಿನಲ್ಲಿ ಉದ್ದೇಶಿತ ೨ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನೆ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೪ (೭೮೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜಧಾನಿ ಬೆಂಗಳೂರಿನ ಉದ್ದೇಶಿತ ೨ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಯೋಜನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಉದ್ದೇಶಿತ ಯೋಜನೆಯ ಸ್ಥಳಗಳಿಗೆ ಸಂಬಂಧಿಸಿದಂತೆ ಫಿಜಿಬಿಲಿಟಿ ಅಧ್ಯಯನ ನಡೆಸಲು ಸಮಾಲೋಚಕರ ಕಂಪನಿಗಳನ್ನು ಆಯ್ಕೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಆ ಕಂಪನಿಗಳು ಯಾವುವು ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ಬೆಂಗಳೂರು ದಕ್ಷಿಣ ಭಾಗದಲ್ಲಿರುವ ಅತ್ಯಧಿಕ ಪ್ರಯಾಣಿಕರು ಮತ್ತು ಕಾರ್ಗೋ ಪ್ರಮಾಣವನ್ನು ಗುರಿಯಾಗಿಸಿಕೊಂಡು ಗಡಿಭಾಗದ ಹೊಸೂರಿನಲ್ಲಿ ಅತ್ಯಧಿಕ ಸಾಮರ್ಥ್ಯದ ನೂತನ ವಿಮಾನ ನಿಲ್ದಾಣಕ್ಕೆ ತಮಿಳುನಾಡು ಶರವೇಗದಲ್ಲಿ ಕಾರ್ಯ ಪ್ರವೃತ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ವಿಳಂಬ ಮಾಡುತ್ತಿರಲು ಕಾರಣವೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಕೃಷಿ ಮಾರುಕಟ್ಟೆಗಳ ಸೌಲಭ್ಯ ಕುರಿತು

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೫ (೭೮೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ರೈತರಿಗೆ ಯಾವುದೇ ರೀತಿಯ ಮೂಲ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಮಾರುಕಟ್ಟೆಗಳಲ್ಲಿ ರೈತರಿಗೆ ತೂಕದಲ್ಲಿ ಮಾಡುತ್ತಿರುವ ಮತ್ತು ದಲ್ಲಾಳಿಗಳಿಂದ ಆಗುತ್ತಿರುವ ಮೋಸದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರ ನೀಡುವುದು ;

(ಈ) ನಗರದ ಮದ್ಯಭಾಗದಲ್ಲಿ ಸಂಚಾರ ದಟ್ಟಣೆಯ ಹಾಗೂ ಇಕ್ಕಟ್ಟಿನ ಪ್ರದೇಶದಲ್ಲಿರುವ ಯಶವಂತಪುರ ಕೃಷಿ ಉತ್ಪನ್ನ ಮಾರುಕಟ್ಟೆಯನ್ನು ಸಂಪೂರ್ಣವಾಗಿ ದಾಸನಪುರಕ್ಕೆ ಸ್ಥಳಾಂತರ ಮಾಡದಿರಲು ಕಾರಣವೇನು ; (ವಿವರ ನೀಡುವುದು)

(ಉ) ಈ ಮಾರುಕಟ್ಟೆಯನ್ನು ಎಷ್ಟು ದಿನಗಳೊಳಗಾಗಿ ಸಂಪೂರ್ಣವಾಗಿ ದಾಸನಪುರಕ್ಕೆ ಸ್ಥಳಾಂತರಿಸಲಾಗುವುದು ? (ಮಾಹಿತಿ ನೀಡುವುದು)

## ತೋಟಗಾರಿಕೆ ಇಲಾಖೆಯಿಂದ ಹೊಸದಾಗಿ ಪಾರ್ಕ್‌ಗಳ ನಿರ್ಮಾಣದ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೬ (೭೮೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಿಂದ ಬೆಂಗಳೂರು ನಗರದಲ್ಲಿ ಹೊಸದಾಗಿ ನಿಮಿಸುತ್ತಿರುವ ಪಾರ್ಕ್‌ಗಳ ಸಂಖ್ಯೆ ಎಷ್ಟು ; ಈ ಪಾರ್ಕ್‌ಗಳನ್ನು

ಯಾವ ಯಾವ ಪ್ರದೇಶದಲ್ಲಿ ನಿರ್ಮಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಈ ಪಾರ್ಕ್‌ಗಳನ್ನು ನಿರ್ಮಿಸಲು ಸರ್ಕಾರ ಖರ್ಚು ಮಾಡುತ್ತಿರುವ ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಇ) ಇಲ್ಲಿಯ ತನಕ ಈ ಕುರಿತು ಆಗಿರುವ ಬೆಳವಣಿಗೆಗಳ ವಿವರವನ್ನು ನೀಡುವುದು ;

(ಈ) ಬೆಂಗಳೂರಿನ ಲಾಲ್‌ಬಾಗ್ ಮತ್ತು ಕಬ್ಬನ್ ಪಾರ್ಕ್‌ಗಳ ನಿರ್ವಹಣೆಗಾಗಿ ೨೦೨೫–೨೬ನೇ ಸಾಲಿನಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು ; (ಮಾಹಿತಿ ಒದಗಿಸುವುದು)

(ಉ) ಖರ್ಚು ಮಾಡಿರುವ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಹಾಗೂ ಸಾರ್ವಜನಿಕರಿಗೆ ಒದಗಿಸಿರುವ ಮೂಲಸೌಕರ್ಯಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳ ಕುರಿತು

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೭ (೭೮೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಬೆಳವಣಿಗೆಗೆ ಉತ್ತೇಜನ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಹೊಸದಾಗಿ ಸಣ್ಣ ಕೈಗಾರಿಗಳ ವಸಾಹತುಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಲವಾರು ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳ ವಸಾಹತ್ತುಗಳನ್ನು (ಶೆಡ್‌ಗಳು) ನಿರ್ಮಿಸಿದ್ದು, ನಿರ್ಮಿಸಿರುವ ಶೆಡ್‌ಗಳಿಗೆ ಮೂಲಭೂತ

ಸೌಕರ್ಯಗಳನ್ನು ಒದಗಿಸದೆ ಇರುವುದರಿಂದ ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಬೆಂಗಳೂರು ನಗರ ಜಿಲ್ಲೆ ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಯಾವ ಯಾವ ಪ್ರದೇಶಗಳಲ್ಲಿ ವಸಾಹತುಗಳನ್ನು ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಊ) ಸಣ್ಣ ಕೈಗಾರಿಕಾ ವಸಾಹತುಗಳಿಂದ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಋ) ಈ ಸಣ್ಣ ಕೈಗಾರಿಕಾ ವಸಾಹತುಗಳಿಂದ ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಸೃಷ್ಟಿಯಾಗಿರುವ ಉದ್ಯೋಗಗಳ ಸಂಖ್ಯೆ ಎಷ್ಟು ? (ಮಾಹಿತಿ ಒದಗಿಸುವುದು)

## ಇ–ಆಸ್ತಿ ನಿರ್ಮಾಣ್ ೨.೦ ತಂತ್ರಾಂಶ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೮ (೭೯೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕರಿಗೆ ವಿವಿಧ ಆನ್‌ಲೈನ್ ಸೇವೆಗಳನ್ನು ಒದಗಿಸಲು ಸರ್ಕಾರ ಜಾರಿಗೊಳಿಸಿರುವ ಇ–ಆಸ್ತಿ ನಿರ್ಮಾಣ್ ೨.೦ ತಂತ್ರಾಂಶಗಳಲ್ಲಿ ತಾಂತ್ರಿಕ ಸಮಸ್ಯೆಯಿಂದ ಸಾರ್ವಜನಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಇ–ಆಸ್ತಿಯಡಿ ವಿತರಿಸುವ ವಿವಿಧ ಸೇವೆಗಳನ್ನು ಕೋರಿ ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿ ಕಳೆದ

ಮೂರು ವರ್ಷಗಳಲ್ಲಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ವಿಲೇಯಾದ ಮತ್ತು ಬಾಕಿ ಇರುವ ಅರ್ಜಿಗಳು ಎಷ್ಟು ; (ನಗರ ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ನಿರ್ಮಾಣ್ ೨.೦ ತಂತ್ರಾಂಶದಲ್ಲಿ ೨೦೨೩-೨೪ನೇ ಸಾಲಿನಿಂದ ಇಲ್ಲಿಯವರೆಗೆ ಕಟ್ಟಡ ಪರವಾನಿಗೆ ಕೋರಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ಪರವಾನಿಗೆ ನೀಡಿದ ತಿರಸ್ಕೃತ ಮತ್ತು ಬಾಕಿ ಅರ್ಜಿಗಳು ಎಷ್ಟು ; (ನಗರ ಸ್ಥಳೀಯ ಸಂಸ್ಥೆವಾರು ವಿವರ ನೀಡುವುದು)

(ಈ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕರಿಗೆ ಸೇವೆ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳಿಗೆ ಮಂಜೂರಾದ, ಭರ್ತಿಯಾದ ಮತ್ತು ಪ್ರಸ್ತುತ ಖಾಲಿಯಿರುವ ವಿವಿಧ ದರ್ಜೆ ಹುದ್ದೆಗಳು ಎಷ್ಟು ; ಬೇರೆ ಇಲಾಖೆಯಿಂದ ನಿಯೋಜನೆ ಮೇರೆಗೆ ಎಷ್ಟು ನೌಕರರು/ ಅಧಿಕಾರಿಗಳು ಪೌರಾಡಳಿತ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ಹುದ್ದೆವಾರು ಮಾಹಿತಿ ನೀಡುವುದು)

## ಹವಾಮಾನ ಆಧಾರಿತ ಬೆಳೆ ವಿಮೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೬೬೯ (೭೯೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೨೦೨೪-೨೫ನೇ ಸಾಲಿಗೆ ಸಂಬಂಧಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ಅಡಿ ರೈತರಿಗೆ

ವಿಮಾ ಪರಿಹಾರ ಮೊತ್ತ ಪಾವತಿಸುವ ಸಂದರ್ಭದಲ್ಲಿ ಅನ್ಯಾಯವಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಸಾಲಿನಲ್ಲಿ ಎಷ್ಟು ರೈತರು ಯೋಜನೆಗೆ ನೋಂದಾಯಿಸಿಕೊಂಡಿದ್ದರು ಮತ್ತು ಎಷ್ಟು ರೈತರಿಗೆ ಪರಿಹಾರ ಮೊತ್ತ ಪಾವತಿಸಲಾಗಿದೆ ; ಪರಿಹಾರ ಪಾವತಿಸಲು ಬಾಕಿ ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಪಾವತಿಸಲಾಗುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಹವಾಮಾನ ದತ್ತಾಂಶ ಆಧಾರದಲ್ಲಿ ಬೆಳೆ ಹಾನಿ ನಿರ್ಧಾರ ಮಾಡುವ ವೇಳೆ ಮಳೆ ಮಾಪನಗಳ ತಾಂತ್ರಿಕ ದೋಷಗಳು, ಅಸಮರ್ಪಕ ಅಳತೆ ವಿಧಾನಗಳಿಂದ ರೈತರಿಗೆ ಕಡಿಮೆ ಪರಿಹಾರ ನೀಡಿರುವ ಬಗ್ಗೆ ರೈತರು ಪ್ರತಿಭಟಿಸಿ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ದೂರುಗಳು ಬಂದಿವೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕಳೆದ ಸಾಲಿನಲ್ಲಿ ಎಷ್ಟು ರೈತರು ಪರಿಹಾರ ಮೊತ್ತದ ಬಗ್ಗೆ ಆಕ್ಷೇಪಣೆ ಸಲ್ಲಿಸಿದ್ದಾರೆ ; ಆಕ್ಷೇಪಣೆಗಳ ನಿವಾರಣೆ ಯಾವ ಹಂತದಲ್ಲಿದೆ ;

(ಉ) ಹವಾಮಾನ ಮಾಪನ ಕೇಂದ್ರಗಳ ನಿರ್ವಹಣೆ, ಅಪೂರ್ಣತೆ ಅಥವಾ ದತ್ತಾಂಶದ ವ್ಯತ್ಯಾಸದಿಂದ ಉಂಟಾದ ಸಮಸ್ಯೆಯನ್ನು ಸರಿಪಡಿಸಲು ಮತ್ತು ರೈತರಿಗೆ ಸಮರ್ಪಕ ಹಾಗೂ ನ್ಯಾಯಸಮ್ಮತ ಪರಿಹಾರ ದೊರಕುವಂತೆ ಮರುಪರಿಶೀಲನೆ ನಡೆಸುವ ಹಾಗೂ ಅಗತ್ಯವಿದ್ದಲ್ಲಿ ಹೆಚ್ಚುವರಿ ಪರಿಹಾರ ಬಿಡುಗಡೆ ಮಾಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; ಮುಂದಿನ ವರ್ಷಗಳಲ್ಲಿ ಇಂತಹ ಅನ್ಯಾಯ ಮರುಕಳಿಸುವುದನ್ನು ತಡೆಯಲು ಸರ್ಕಾರ ಕ್ರಮ ವಹಿಸುವುದೇ ?

# ಗಣಿಗಾರಿಕೆಯಿಂದ ರಾಜಧನ ಸಂಗ್ರಹ

## ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–

೬೭೦ (೭೯೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :– ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಗಣಿಗಳಿಂದ ಸರ್ಕಾರಕ್ಕೆ ಸಂಗ್ರಹವಾಗಿರುವ ಒಟ್ಟು ರಾಜಧನದ (ರಾಯಲ್ಟಿ) ಮತ್ತು ಇತರ ಶುಲ್ಕಗಳ ಮೊತ್ತ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆ, ರಾಯಲ್ಟಿ (ರಾಜಧನ) ಸೋರಿಕೆ ಹಾಗೂ ಮೇಲ್ವಿಚಾರಣೆಯ ಕೊರತೆ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಂಗ್ರಹವಾಗಿರುವ ರಾಜಧನದಲ್ಲಿ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗಾಗಿ, ವಿಶೇಷವಾಗಿ ಗಣಿಗಾರಿಕೆ ಬಾಧಿತ ಪ್ರದೇಶಗಳ ಗ್ರಾಮ ಪಂಚಾಯತ್‌ಗಳಿಗೆ ಹಂಚಿಕೆ ಮಾಡಿರುವ ಮೊತ್ತ ಎಷ್ಟು; ಅದರ ಮಾನದಂಡಗಳು ಯಾವುವು ;

(ಈ) ಗಣಿಗಾರಿಕೆ ಪ್ರದೇಶಗಳ ಪರಿಸರ ಹಾನಿ, ರಸ್ತೆ ಹಾನಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ಸಾರ್ವಜನಿಕ ಆರೋಗ್ಯ ಸಮಸ್ಯೆಗಳ ನಿವಾರಣೆಗೆ ರಾಜಧನದಿಂದ ಪ್ರತ್ಯೇಕ ನಿಧಿ ಮೀಸಲಿಡಲಾಗಿದೆಯೇ ;

(ಉ) ರಾಜಧನ ಸಂಗ್ರಹ ಮತ್ತು ಹಂಚಿಕೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರಲು ಸರ್ಕಾರ ಯಾವ ತಂತ್ರಾಂಶ/ಆನ್‌ಲೈನ್ ವ್ಯವಸ್ಥೆಗಳನ್ನು ಜಾರಿಗೆ ತಂದಿದೆ ; ಗಣಿಗಾರಿಕೆ ಸಂಬಂಧಿತ ದೌರ್ಬಲ್ಯಗಳನ್ನು ಸರಿಪಡಿಸಲು ಹಾಗೂ ಗ್ರಾಮ ಪಂಚಾಯತ್ ಗಳಿಗೆ ನ್ಯಾಯಸಮ್ಮತ ರಾಜಧನ ಹಂಚಿಕೆಯುನ್ನು ಖಚಿತಪಡಿಸಲು ಸರ್ಕಾರ ಕೈಗೊಂಡಿರುವ ತಕ್ಷಣದ ಮತ್ತು ದೀರ್ಘಕಾಲೀನ ಕ್ರಮಗಳು ಯಾವುವು ;

(ಊ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ೨೦೨೨-೨೩ರ ನಂತರ ಕಲ್ಲು, ಮಣ್ಣು, ಮರಳು ಗಣಿಗಾರಿಕೆ ನಡೆಸಲು ಅನುಮತಿ ನೀಡಿದ ಪ್ರದೇಶ, ವಿಸ್ತೀರ್ಣ ಮತ್ತು ಅನುಮತಿ ಪಡೆದವರ ವಿವರ ಮತ್ತು ಪರವಾನಿಗೆ ಅವಧಿಯ ವಿವರ ನೀಡುವುದು; ಉಭಯ ಜಿಲ್ಲೆಗಳಲ್ಲಿ ವಿವಿಧ ಇಲಾಖೆಗಳಿಗೆ ಕಾಯ್ದಿರಿಸಿದ ಮರಳು ಬ್ಲಾಕ್‌ಗಳು ಯಾವುವು ? (ಅವುಗಳ ವಿಸ್ತೀರ್ಣ, ಸರ್ವೆ ನಂಬರ್ ಸಹಿತ, ತಾಲ್ಲೂಕುವಾರು ಮಾಹಿತಿ ನೀಡುವುದು)

## ಸ್ಥಳೀಯ ನಗರ ಸಂಸ್ಥೆಗಳಲ್ಲಿ ಸ್ವಚ್ಛತೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೬೭೧ (೮೦೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಮತ್ತು ಬಳಸಿದ ಸ್ಯಾನಿಟರಿ ಪ್ಯಾಡ್‌ಗಳನ್ನು ರಸ್ತೆ ಬದಿಯಲ್ಲಿ ಮತ್ತು ಎಲ್ಲೆಂದರಲ್ಲಿ ಬಿಸಾಡುತ್ತಿರುವುದರಿಂದ ಸಾರ್ವಜನಿಕ ಆರೋಗ್ಯಕ್ಕೆ ಹಾಗೂ ಪರಿಸರಕ್ಕೆ ಗಂಭೀರ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಯಂತ್ರಣ ಹಾಗೂ ನಿಷೇಧವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ಬಳಸಿದ ಸ್ಯಾನಿಟರಿ ಪ್ಯಾಡ್‌ಗಳ ವೈಜ್ಞಾನಿಕ ವಿಲೇವಾರಿ ಮಾಡಲು ವಿಶೇಷ ವ್ಯವಸ್ಥೆ ಕಲ್ಪಿಸುವ ಯೋಜನೆ ಇದೆಯೇ ; ರಾಜ್ಯದ ಎಷ್ಟು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ಯಾನಿಟರಿ ಪ್ಯಾಡ್‌ಗಳನ್ನು ಸಂಗ್ರಹಿಸಿ ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡುವ ವ್ಯವಸ್ಥೆ ಇದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ಲಾಸ್ಟಿಕ್ ತ್ಯಾಜ್ಯ ಹಾಗೂ ಸ್ಯಾನಿಟರಿ ತ್ಯಾಜ್ಯ ವಿಲೇವಾರಿಗೆ ವಿಶೇಷ ಅನುದಾನ ಮತ್ತು ಜಾಗೃತಿ ಅಭಿಯಾನ ಹಮ್ಮಿಕೊಳ್ಳುವ ಉದ್ದೇಶ ಸರ್ಕಾರಕ್ಕಿದೆಯೇ ;

(ಉ) ನಿಯಮ ಉಲ್ಲಂಘನೆ ಮಾಡುವವರ ವಿರುದ್ಧ ಕಠಿಣ ದಂಡ ವಿಧಿಸಲು ಸರ್ಕಾರ ಕೈಗೊಂಡ ಕ್ರಮಗಳು ಏನು ; ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿ ನಿಯಮ ಉಲ್ಲಂಘಿಸಿದ ಬಗ್ಗೆ ಕಂಡುಬಂದ ಪ್ರಕರಣ ಮತ್ತು ಸಂಗ್ರಹಿಸಿದ ದಂಡನಾ ಶುಲ್ಕದ ಮೊತ್ತ ಎಷ್ಟು ; ಎಷ್ಟು FIR ದಾಖಲಿಸಲಾಗಿದೆ ; (ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಊ) ಪ್ಲಾಸ್ಟಿಕ್ ಹಾಗೂ ಸ್ಯಾನಿಟರ್ ಪ್ಯಾಡ್ ಮತ್ತು ಇ–ವೇಸ್ಟ್‌ಗಳನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಿ ಸಮಸ್ಯೆಯನ್ನು ಪರಿಹರಿಸಿ ನಗರ ಪರಿಸರ ಕಾಪಾಡಲು ಸರ್ಕಾರವು ಪ್ರಮಾಣಿತ ಕಾರ್ಯನಿರ್ವಹಣಾ ವಿಧಾನವನ್ನು (SOP) ತಯಾರಿಸಿದೆಯೆ; ಇಲ್ಲದಿದ್ದಲ್ಲಿ, ಈವರೆಗೂ ಸರ್ಕಾರ ಈ ವಿಷಯವನ್ನು ಏಕೆ ಗಂಭೀರವಾಗಿ ಪರಿಗಣಿಸಿರುವುದಿಲ್ಲ ?

## ಆಸ್ತಿ ತಿದ್ದುಪಡಿಗೆ ಇರುವ ನಮೂನೆ–೩ರ ಮಿತಿಯನ್ನು ಹೆಚ್ಚಿಸುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೬೭೨ (೮೧೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಇ–ತಂತ್ರಾಂಶದ ಮೂಲಕ ನಮೂನೆಂ೩ (ಆಸ್ತಿ) ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆಯೇ ; ಇದಕ್ಕಿರುವ ನಿಯಮ ಮತ್ತು ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ನಮೂನೆ–೩ ತಿದ್ದುಪಡಿಗೆ ಶೇ ೧೦ ರಷ್ಟು ಮಿತಿ ನಿಗದಿಪಡಿಸಿರುವುದರಿಂದ ಅನೇಕ ಅರ್ಹ ಪ್ರಕರಣಗಳಲ್ಲಿ ತಿದ್ದುಪಡಿಗೆ ಅವಕಾಶವಿಲ್ಲದೇ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅರ್ಹ ಪ್ರಕರಣಗಳಲ್ಲಿ ಸಾರ್ವಜನಿಕರಿಗೆ ನೆರವಾಗುವಂತೆ ತಿದ್ದುಪಡಿ ಮಿತಿಯನ್ನು ೧೦ ರಿಂದ ಶೇಕಡ ೩೦ ರಷ್ಟು ಹೆಚ್ಚಿಸುವಲ್ಲಿ ಸರ್ಕಾರದ ನಿಲುವೇನು ?

## ಹಟ್ಟಿ ಚಿನ್ನದ ಗಣಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೩ (೭೪೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :– ತಿಳಿಸುವರೆ :–

(ಅ) ಹಟ್ಟಿ ಚಿನ್ನದ ಗಣಿಯನ್ನು ಆಧುನೀಕರಣಗೊಳಿಸಿ, ಚಿನ್ನದ ಉತ್ಪಾದನೆಯನ್ನು ಹೆಚ್ಚಿಸಲು ಸರ್ಕಾರ ರೂಪಿಸಿರುವ ಹೊಸ ಕ್ರಿಯಾ ಯೋಜನೆ ಯಾವುದು ;

(ಆ) ಹಟ್ಟಿ ಪಟ್ಟಣಕ್ಕೆ ಪ್ರತ್ಯೇಕ ಬಸ್ ಡಿಪೋ (Bus Depot) ಮಂಜೂರು ಮಾಡಬೇಕೆಂಬ ಸಾರ್ವಜನಿಕರ ದೀರ್ಘಕಾಲದ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಗಣಿ ಪ್ರದೇಶದ ಸುತ್ತಮುತ್ತಲ ಪರಿಸರ ಮಾಲಿನ್ಯ ತಡೆಗಟ್ಟಲು ಮತ್ತು ಅಲ್ಲಿನ ಕಾರ್ಮಿಕರ ಆರೋಗ್ಯ ರಕ್ಷಣೆಗಾಗಿ ಗಣಿ ಕಂಪನಿಯು ಕೈಗೊಂಡಿರುವ ಮುನ್ನೆಚ್ಚರಿಕೆ ಕ್ರಮಗಳೇನು ;

(ಈ) ಈ ಕಳೆದ ಮೂರು ವರ್ಷಗಳಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯ ಲಾಭಾಂಶದಲ್ಲಿ ಸ್ಥಳೀಯ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ (CSR Funds) ವ್ಯಯಿಸಲಾದ ಮೊತ್ತವೆಷ್ಟು ?

## ಸರ್ಕಾರಿ ನೌಕರರ ಖಾದಿ ಉಡುಪು ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೪ (೭೪೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರ ಪ್ರತಿ ತಿಂಗಳ ಮೊದಲ ಶನಿವಾರ ಸ್ವಯಂ ಪ್ರೇರಣೆಯಿಂದ ಖಾದಿ ಉಡುಪು ಧರಿಸಬೇಕೆಂಬ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ರಾಜ್ಯದ ಲಕ್ಷಾಂತರ ನೌಕರರ ಬೇಡಿಕೆಗೆ ತಕ್ಕಂತೆ 'ಅಸಲಿ ಖಾದಿ' ಯನ್ನು ಪೂರೈಸುವಷ್ಟು ಉತ್ಪಾದನಾ ಸಾಮರ್ಥ್ಯ ರಾಜ್ಯದ ಖಾದಿ ಗ್ರಾಮೋದ್ಯೋಗ ಸಂಘಗಳಿಗಿದೆಯೇ ;

(ಆ) ಮಾರುಕಟ್ಟೆಯಲ್ಲಿ ಗಿರಣಿ ನೂಲಿನ 'ನಕಲಿ ಖಾದಿ'ಯ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನೌಕರರು ಅರಿಯದೆ ನಕಲಿ ಖಾದಿ ಖರೀದಿಸಿ ಮೋಸ ಹೋಗುವುದನ್ನು ತಡೆಯಲು ಮತ್ತು ಅವರು ಖರೀದಿಸುವ ಹಣ ನೇರವಾಗಿ ನೇಕಾರರಿಗೆ ತಲುಪುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಮುನ್ನೆಚ್ಚರಿಕಾ ಕ್ರಮಗಳೇನು ;

(ಇ) ರಾಜ್ಯದ ಖಾದಿ ಸಂಸ್ಥೆಗಳಲ್ಲಿ ಪ್ರಸ್ತುತ ಇರುವ ಬಟ್ಟೆಗಳ ಗುಣಮಟ್ಟ, ಬಣ್ಣ ಮತ್ತು ವಿನ್ಯಾಸಗಳು ಇಂದಿನ ಮಾರುಕಟ್ಟೆಯ ಸ್ಪರ್ಧೆಗೆ ಸಾಲದಾಗಿದ್ದು ಖಾದಿ ಉಡುಪುಗಳನ್ನು ಹೆಚ್ಚು ಆಕರ್ಷಕವಾಗಿಸಲು ಮತ್ತು ಆಧುನಿಕ ವಿನ್ಯಾಸಗಳನ್ನು ಅಳವಡಿಸಲು ಸರ್ಕಾರ ನೇಕಾರರಿಗೆ ಯಾವ ತಾಂತ್ರಿಕ ನೆರವು ನೀಡುತ್ತಿದೆ ;

(ಈ) ಈ ಸರ್ಕಾರಿ ನೌಕರರಿಗೆ ಖಾದಿಯ ಮೌಲ್ಯ ಮತ್ತು ಗ್ರಾಮೀಣ ಆರ್ಥಿಕತೆಯ ಮೇಲೆ ಅದರ ಪ್ರಭಾವದ ಕುರಿತು ಅರಿವು ಮೂಡಿಸಲು ಸರ್ಕಾರವು ಯಾವುದಾದರೂ ವಿಶೇಷ ಕಾರ್ಯಗಾರ ಅಥವಾ ಸಂವಾದಗಳನ್ನು ಆಯೋಜಿಸಲು ಯೋಜಿಸಿದೆಯೇ ;

(ಉ) ರಾಜ್ಯದ ಖಾದಿ ಸಂಸ್ಥೆಗಳ ಅಭಿವೃದ್ಧಿಗಾಗಿ ಮತ್ತು ನೇಕಾರರ ಆರ್ಥಿಕ ಸಬಲೀಕರಣಕ್ಕಾಗಿ ಕಳೆದ ಎರಡು ವರ್ಷಗಳಲ್ಲಿ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ? (ವಿವರ ನೀಡುವುದು)

## ಜಿಲ್ಲಾ ಖನಿಜ ಪ್ರತಿಷ್ಠಾನಗಳ (DMF) ಕಾರ್ಯನಿರ್ವಹಣೆ ಮತ್ತು ನಿಧಿ ಬಳಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೫ (೮೩೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನಮಂತ್ರಿ ಖನಿಜ ಕ್ಷೇತ್ರ ಕಲ್ಯಾಣ ಯೋಜನೆ (PMKKKY) ಅಡಿಯಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನಗಳ (DMF) ಕಾರ್ಯನಿರ್ವಹಣೆ ಮತ್ತು ನಿಧಿ ಬಳಕೆಗೆ ಸಂಬಂಧಿಸಿದಂತೆ (CAG) ೨೦೨೫ನೇ ಸಾಲಿನ ೭ನೇ ವರದಿಯಲ್ಲಿ ಉಲ್ಲೇಖಿಸಲಾದ ಪ್ರಮುಖ ಲೋಪಗಳು ಯಾವುವು ; ಈ ಲೋಪಗಳನ್ನು ಸರಿಪಡಿಸಲು ಸರ್ಕಾರದ ಕ್ರಮಗಳೇನು ;

(ಆ) ವಿವಿಧ ಜಿಲ್ಲೆಗಳಲ್ಲಿ ೨೦೧೮–೨೩ರ ಅವಧಿಯಲ್ಲಿ ಸಂಗ್ರಹವಾದ DMF ನಿಧಿಯ ಮೊತ್ತವೆಷ್ಟು ; ಬಳಕೆಯಾಗದ ಮೊತ್ತವೆಷ್ಟು ; ವೈಯಕ್ತಿಕ ಖಾತೆಗಳಲ್ಲಿ ಠೇವಣಿ ಇಟ್ಟು ನಷ್ಟ ಉಂಟಾಗಿರುವ ಬಗ್ಗೆ ಸರ್ಕಾರದ ಕ್ರಮಗಳೇನು ; ಜಿಲ್ಲಾ ಖನಿಜ ಪ್ರತಿಷ್ಠಾನಗಳ ನಿಧಿ ಬಳಕೆಯ ಆದ್ಯತಾ ನಿಯಮಗಳೇನು ; ಜಿಲ್ಲಾ ಖನಿಜ ಪ್ರತಿಷ್ಠಾನಗಳಿರುವ ಜಿಲ್ಲೆಗಳಲ್ಲಿ ಈ ಮೊತ್ತವನ್ನು ಯಾವ ಮಾರ್ಗಸೂಚಿಗಳಂತೆ ಯಾವ ಉದ್ದೇಶಗಳಿಗೆ ವೆಚ್ಚ ಮಾಡಲಾಗಿದೆ ;

(ಇ) ದಕ್ಷಿಣ ಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲಾ ಖನಿಜ ಪ್ರತಿಷ್ಠಾನಗಳಲ್ಲಿ ಸಂಗ್ರಹಿಸಿದ ಮೊತ್ತ ಹಾಗೂ ವೆಚ್ಚ ಮಾಡಿದ ಮೊತ್ತವೆಷ್ಟು ; ಯಾವ ಅಧಿಕಾರ ಮತ್ತು ಮಾರ್ಗಸೂಚಿಗಳಡಿ ಈ ಮೊತ್ತವನ್ನು ಖರ್ಚು ಮಾಡಲಾಗಿದೆ ;

(ಈ) ಗಣಿಗಾರಿಕೆ ಬಾಧಿತ ಪ್ರದೇಶಗಳಲ್ಲಿ ತ್ಯಾಜ್ಯ ಸಂಸ್ಕರಣೆ, ಅಂತರ್–ಜಲಮೂಲಗಳ ಸಂರಕ್ಷಣೆ, ಶಾಲಾ ಸೌಕರ್ಯಗಳು, ಸೇತುವೆಗಳು, ರೈಲ್ವೆ, ಜಲಮಾರ್ಗ ಮುಂತಾದ ಪರಿಸರ ಪುನಃಶ್ಚೇತನ ಕಾಮಗಾರಿಗಳ ಬದಲಿಗೆ ಉದ್ಯಾನವನ/ಸಭಾಂಗಣ, ಕಛೇರಿ ಕಟ್ಟಡ, ಕ್ರೀಡಾಂಗಣ, ಹಾಸ್ಟೆಲ್, ಹೈಮಾಸ್ಕ್, ಮಿನಿಸೌಧಕ್ಕೆ ಭೂಸ್ವಾಧೀನ ಇತ್ಯಾದಿಗಳಿಗೆ ನಿಧಿಯ ಹಣ ವಿನಿಯೋಗಿಸಿರುವುದರ ಬಗ್ಗೆ ಸರ್ಕಾರದ ನಿಲುವೇನು ;

(ಉ) ಮುಂದಿನ ದಿನಗಳಲ್ಲಿ ಗಣಿಗಾರಿಕೆ ಬಾಧಿತ ಪ್ರದೇಶಗಳಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಮತ್ತು ಪರಿಸರ ಪುನಃಶ್ಚೇತನ ಉದ್ದೇಶಗಳಿಗೆ ಮಾತ್ರ ನಿಧಿ ಬಳಸಲು ಮತ್ತು ನಿಧಿ ಬಳಕೆಯ ಮಾರ್ಗಪಲ್ಲಟ ತಡೆಯಲು ಸರ್ಕಾರ ಯಾವ ಮಾರ್ಗಸೂಚಿಗಳನ್ನು ಜಾರಿಗೊಳಿಸಲಿದೆ ?

## ರಾಜ್ಯದಲ್ಲಿ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯ ಮೂಲಕ ಭೂಸ್ವಾಧೀನ ಮತ್ತು ಅನುದಾನ ಹಂಚಿಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೬ (೮೩೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯ ಮೂಲಕ ರಸ್ತೆ, ರೈಲು ಹಾಗೂ ವೈಮಾನಿಕ ಮೂಲಸೌಲಭ್ಯ ಯೋಜನೆಗಳಿಗೆ

ಸಂಬಂಧಿಸಿದಂತೆ ಎಷ್ಟು ಯೋಜನೆಗಳಿಗಾಗಿ ಭೂ ಸ್ವಾಧೀನ ಪ್ರಕ್ರಿಯೆ ಜಾರಿಯಲ್ಲಿದೆ ; ಅವುಗಳಿಗೆ ಅಗತ್ಯವಿರುವ ಭೂಮಿ ಪ್ರಮಾಣ ಹಾಗೂ ಭೂ ಸ್ವಾಧೀನ ಪ್ರಗತಿಯ ವಿವರವೇನು ;

(ಆ) ಸರ್ವ ವಿಧ ಸಾರಿಗೆ ಸಂಪರ್ಕಕ್ಕೆ ಅವಕಾಶವಿರುವ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ರಸ್ತೆ, ರೈಲು, ವೈಮಾನಿಕ ಹಾಗೂ ಕಡಲ ಸಂಪರ್ಕ ಅಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ನಡುವೆ ಸಮನ್ವಯ ಸಾಧಿಸಲಾಗುತ್ತಿದೆಯೇ ;

(ಇ) ರಾಜ್ಯದಲ್ಲಿ ರೈಲ್ವೆ ಯೋಜನೆಗಳು ಭೂಸ್ವಾಧೀನ ಪ್ರಕ್ರಿಯೆ, ಅನುದಾನ ಹಂಚಿಕೆ ಹಾಗೂ ರಾಜ್ಯದ ಪಾಲಿನ ನಿಧಿ ಬಿಡುಗಡೆ ವಿಳಂಬದಿಂದ ರೈಲ್ವೆ ಯೋಜನೆಗಳು ತಡವಾಗುತ್ತಿದೆಯೇ ; ಸಮಪಾಲು ವೆಚ್ಚ ಹಂಚಿಕೆ (Cost Sharing) ವ್ಯವಸ್ಥೆಯಡಿ ಯೋಜನೆಗಳಿಗೆ ರಾಜ್ಯ ಸರ್ಕಾರ ತನ್ನ ಪಾಲಿನ ಅನುದಾನವನ್ನು ಸಂಪೂರ್ಣವಾಗಿ ಬಿಡುಗಡೆ ಮಾಡಿರುವುದೇ ;

(ಈ) ಪ್ರಸ್ತುತ ರೈಲ್ವೆ ಯೋಜನೆಗಳಿಗೆ ಒಟ್ಟಾರೆ ಎಷ್ಟು ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳಬೇಕಾಗಿದೆ ; ಇನ್ನೂ ಹಸ್ತಾಂತರಿಸಬೇಕಿರುವ ಭೂಮಿಯ ಪ್ರಮಾಣ ಎಷ್ಟು ; ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದ್ದರೂ ಪರಿಹಾರ ವಿತರಣೆ ಬಾಕಿಯಿದೆಯೇ ; ಇದ್ದಲ್ಲಿ, ವಿಳಂಬಕ್ಕೆ ಕಾರಣವೇನು ; ರೈಲ್ವೆ ಇಲಾಖೆ ಅಗತ್ಯಕ್ಕಿಂತ ಹೆಚ್ಚುವರಿ ಭೂಮಿ ಸ್ವಾಧೀನಪಡಿಸಿಕೊಳ್ಳುತ್ತಿರುವುದರಿಂದ ಪರಿಹಾರ ಮೊತ್ತ ಹೆಚ್ಚಾಗಿ ಯೋಜನೆ ವೆಚ್ಚ ಏರಿಕೆಯಾಗಿರುವುದೇ ;

(ಉ) ಕರಾವಳಿ ಭಾಗದ ಜನವಸತಿ ಪ್ರದೇಶದಲ್ಲಿ ರೈಲ್ವೆ ಲೆವೆಲ್ ಕ್ರಾಸಿಂಗ್, ಮೇಲ್ಸೇತುವೆ, ಕೆಳಸೇತುವೆ, ಸರಕು ಶೆಡ್, ರೈಲ್ವೆ ನಿಲ್ದಾಣಗಳ ಅಭಿವೃದ್ಧಿ, ಇತ್ಯಾದಿಗಳ ಕುರಿತಂತೆ ಮತ್ತು ಪ್ರಮುಖ ರೈಲ್ವೆ

ಯೋಜನೆಗಳು ವಿಳಂಬವಾಗದಂತೆ ಭೂಸ್ವಾಧೀನ ಮತ್ತು ಅನುದಾನ ಬಿಡುಗಡೆ ಪ್ರಕ್ರಿಯೆಯನ್ನು ವೇಗಗೊಳಿಸಲು ಸರ್ಕಾರ ಯಾವ ರೀತಿಯ ಕ್ರಮಕೈಗೊಳ್ಳಲಿದೆ ?

## ನಗರಾಭಿವೃದ್ಧಿ ಇಲಾಖೆಯಲ್ಲಿ ಕಟ್ಟಡ ಪರವಾನಿಗೆ ಮತ್ತು ಇ–ಆಸ್ತಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೭ (೮೩೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯ ಹಾಲಿ ಕಾರ್ಯನಿರ್ವಹಿಸುತ್ತಿದ್ದ ನಿರ್ಮಾಣ್ ULMS-2 (United Land Management System) ತಂತ್ರಾಂಶದ ಬದಲಿಗೆ ಹೊಸ ತಂತ್ರಾಂಶ ಜಾರಿ ನಂತರ, ಕಟ್ಟಡ ಪರವಾನಿಗೆ ಸ್ಥಗಿತವಾಗಿದೆಯೇ ; ಕಳೆದ ಎಷ್ಟು ಅವಧಿಯಿಂದ ಸ್ಥಗಿತವಾಗಿದೆ ; ಮಂಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಕಟ್ಟಡ ಪರವಾನಿಗೆಗಳ ವಿತರಣೆಗೆ ಬಾಕಿಯಿವೆ ;

(ಆ) ಕಟ್ಟಡ ಪರವಾನಿಗೆ ಸ್ಥಗಿತದಿಂದಾಗಿ ಮನೆ ನಿರ್ಮಾಣಕ್ಕೆ ಸಿದ್ಧತೆ ಮಾಡಿಕೊಂಡ ನಾಗರೀಕರು, ಕಾರ್ಮಿಕರು ಹಾಗೂ ಕಟ್ಟಡ ನಿರ್ಮಾಣ ಸಂಬಂಧಿತ ಉದ್ಯಮ ವಲಯ (ಕಟ್ಟಡ ಸಾಮಗ್ರಿ) ಗಂಭೀರ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವುದನ್ನು ನಿವಾರಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ಕಟ್ಟಡ ನಿರ್ಮಾಣ ಪರವಾನಿಗೆಯಿಂದ ಸರ್ಕಾರಕ್ಕೆ ಕಾರ್ಮಿಕ ಸೆಸ್ ಸೇರಿದಂತೆ ವಿವಿಧ ಸೆಸ್ ಹಾಗೂ ಜಿಎಸ್‌ಟಿ ಮುಖಾಂತರ ನೂರಾರು ಕೋಟಿ ರೂಪಾಯಿ ಆದಾಯ ಬರುತ್ತಿದ್ದು, ಪರವಾನಿಗೆ ನೀಡುವ ಪ್ರಕ್ರಿಯೆ ಸ್ಥಗಿತದಿಂದಾಗಿ ಸರ್ಕಾರಕ್ಕೆ ಎಷ್ಟು ಆದಾಯ ನಷ್ಟವಾಗುತ್ತಿದೆ ;

(ಈ) ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಇ–ಆಸ್ತಿ ತಂತ್ರಾಂಶವು ತುಂಬಾ ನಿಧಾನಗತಿಯಲ್ಲಿದ್ದು ಎಷ್ಟು ಅರ್ಜಿಗಳು ವಿಲೇವಾರಿಗೆ ಬಾಕಿಯಿವೆ ; ಇ–ಆಸ್ತಿ ತಂತ್ರಾಂಶವನ್ನು ಸುಧಾರಿಸಲು ಇಲಾಖೆ ಯಾವ ರೀತಿಯ ಕ್ರಮವಹಿಸುತ್ತಿದೆ ;

(ಉ) ಈ ತಂತ್ರಾಂಶ ದೋಷಗಳನ್ನು ಸರಿಪಡಿಸಲು ಬೇಕಾಗುವ ಕಾಲಾವಧಿ ಎಷ್ಟು ; ಇಂತಹ ತಾಂತ್ರಿಕ ಸಮಸ್ಯೆಗಳು ಉಂಟಾಗದಂತೆ ತಂತ್ರಾಂಶ ನಿರ್ವಹಣೆ ಮತ್ತು ಸುಧಾರಣೆ ಪ್ರಕ್ರಿಯೆಯಲ್ಲಿ ಯಾವ ರೀತಿಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ?

## ಯೋಜನಾ ಪ್ರಾಧಿಕಾರಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೮ (೮೩೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಯೋಜನಾ ಪ್ರಾಧಿಕಾರಗಳ (Planning Authorities) ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ನಾಗರಿಕ ಸೌಲಭ್ಯಗಳನ್ನು ಒದಗಿಸಲು ಸರ್ಕಾರವು ಯಾವ ರೀತಿಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುತ್ತಿದೆ ; ಈ ಸಂಬಂಧ ಜಾರಿಯಲ್ಲಿರುವ ಮಾರ್ಗಸೂಚಿಗಳು, ಮಾನದಂಡಗಳು ಯಾವುವು ; ಯಾವ ಅಂಶಗಳಿಗೆ ಆದ್ಯತೆ ನೀಡಲಾಗುತ್ತಿದೆ ;

(ಆ) ರಾಜ್ಯದ ಮಹಾನಗರ ಪಾಲಿಕೆಗಳು, ಸ್ಥಳೀಯ ನಗರ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಆಯಾ ಸ್ಥಳೀಯ ಯೋಜನಾ ಪ್ರಾಧಿಕಾರಿಗಳು ನಾಗರೀಕ ಸೌಲಭ್ಯಗಳನ್ನು ಒದಗಿಸಲು ಅವಕಾಶವಿದೆಯೇ ; ಎಷ್ಟು ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ನಾಗರಿಕ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಲಾಗಿದೆ ;

(ಇ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಯೋಜನಾ ಪ್ರಾಧಿಕಾರಿಗಳ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಈವರೆಗೆ ಯಾವ ಯಾವ ನಾಗರಿಕ ಸೌಲಭ್ಯಗಳಾದ ರಸ್ತೆ, ಒಳಚರಂಡಿ, ಕುಡಿಯುವ ನೀರು, ವಿದ್ಯುತ್, ಉದ್ಯಾನವನ, ಸಮುದಾಯ ಭವನ ಇತ್ಯಾದಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಈ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿಯಲ್ಲಿ ಅಭಿವೃದ್ಧಿ ಚಟುವಟಿಕೆಗಳಿಗಾಗಿ ಈವರೆಗೆ ಬಿಡುಗಡೆಯಾಗಿರುವ ಒಟ್ಟು ಅನುದಾನ ಎಷ್ಟು ; ಯೋಜನಾ ಪ್ರಾಧಿಕಾರಗಳ ಸ್ವಂತ ಆದಾಯವೆಷ್ಟು ; ಇದರಲ್ಲಿ ಬಳಕೆಯಾಗಿರುವ ಮೊತ್ತ ಹಾಗೂ ಬಾಕಿಯಿರುವ ಮೊತ್ತ ಎಷ್ಟು ; ಬಾಕಿಯಿರುವ ಮೊತ್ತವನ್ನು ಯಾವಾಗ ಉಪಯೋಗಿಸಲಾಗುವುದು ;

(ಉ) ಮುಂದಿನ ಅವಧಿಯಲ್ಲಿ ಸ್ಥಳೀಯ ಯೋಜನಾ ಪ್ರಾಧಿಕಾರಗಳ ಮೂಲಕ ನಾಗರಿಕ ಸೌಲಭ್ಯಗಳ ಅಭಿವೃದ್ಧಿಗೆ ಪ್ರಮಾಣೀಕೃತ ಮಾರ್ಗಸೂಚಿಗಳನ್ನು (ಎಸ್.ಓ.ಪಿ) ರಚಿಸಿ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಸರ್ಕಾರ ಯಾವ ರೀತಿ ಕ್ರಮವಹಿಸುತ್ತಿದೆ ?

## ಪೌರಾಡಳಿತ ಸಂಸ್ಥೆಗಳಲ್ಲಿ ಸಿಬ್ಬಂದಿ ಕೊರತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೯ (೮೪೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೌರಾಡಳಿತ ಸಂಸ್ಥೆಗಳಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಅದರಲ್ಲಿ ಪ್ರಸ್ತುತ ಭರ್ತಿಯಾಗಿರುವ ಹುದ್ದೆಗಳ ಸಂಖ್ಯೆ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಪೌರಾಡಳಿತ ಸಂಸ್ಥೆಗಳಲ್ಲಿ ಮುಖ್ಯಾಧಿಕಾರಿ, ಸಹಾಯಕ ಇಂಜಿನಿಯರ್, ರೆವೆನ್ಯೂ ಇನ್ಸ್‌ಪೆಕ್ಟರ್, ಹೆಲ್ತ್ ಇನ್ಸ್‌ಪೆಕ್ಟರ್, ಎಸ್.ಡಿ.ಎ, ಬಿಲ್ ಕಲೆಕ್ಟರ್ ಸೇರಿದಂತೆ ಪ್ರಮುಖ ಹುದ್ದೆಗಳಿಗೆ ಡಬಲ್ ಚಾರ್ಜ್ ನೀಡಲಾಗಿದೆಯೇ ; ಹೌದಾದಲ್ಲಿ, ಇಂತಹ ವ್ಯವಸ್ಥೆಯಿಂದ ಆಡಳಿತದ ದಕ್ಷತೆ ಹಾಗೂ ಸಾರ್ವಜನಿಕ ಸೇವೆಗೆ ವ್ಯತ್ಯಾಯ ಉಂಟಾಗುತ್ತಿರುವುದರಿಂದ ಸರ್ಕಾರ ಗಮನಿಸಿ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಪೌರಾಡಳಿತ ಸಂಸ್ಥೆಗಳಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಪೈಕಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ವಿವಿಧ ವಿಭಾಗದಲ್ಲಿ ಖಾಯಂ, ನೇರ ಪಾವತಿ ಹಾಗೂ ಹೊರಗುತ್ತಿಗೆ ಆಧಾರದ ಸಿಬ್ಬಂದಿಗಳೆಷ್ಟು ; ಸ್ವಚ್ಛತಾ ವಾಹನ, ಚಾಲಕರು, ವಾಟರ್‌ಮ್ಯಾನ್ ಹಾಗೂ ಇತರೆ ಹುದ್ದೆಗಳಿಗೆ ಹೊರಗುತ್ತಿಗೆ ಸಿಬ್ಬಂದಿಯನ್ನು ನಿಯೋಜಿಸಲು ನಿಯಮಗಳಲ್ಲಿ ಅವಕಾಶವಿದೆಯೇ ;

(ಈ) ಕಳೆದ ಮೂರು ವರ್ಷಗಳಲ್ಲಿ ಪೌರಾಡಳಿತ ಸಂಸ್ಥೆಗಳಲ್ಲಿ ಎಷ್ಟು ಮುಖ್ಯಾಧಿಕಾರಿಗಳು ಹಾಗೂ ಪ್ರಮುಖ ಸಿಬ್ಬಂದಿಗಳು ವರ್ಗಾವಣೆಗೊಂಡಿದ್ದಾರೆ ; ಇದರಿಂದ ಈ ಸಂಸ್ಥೆಗಳ ಆಡಳಿತದಲ್ಲಿ ಉದ್ಭವವಾಗಿರುವ ತೊಂದರೆಯನ್ನು ನಿವಾರಿಸಲಾಗಿದೆಯೆ ;

(ಉ) ಪೌರಾಡಳಿತ ಸಂಸ್ಥೆಗಳು ತೀವ್ರ ಸಿಬ್ಬಂದಿ ಕೊರತೆಯಿಂದ ಕಾರ್ಯನಿರ್ವಹಿಸುತ್ತಿರುವ ಹಿನ್ನೆಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳು ಹಾಗೂ ನಾಗರಿಕ ಸೇವೆಗಳು ಪರಿಣಾಮಕಾರಿಯಾಗಿ ನಡೆಯಲು ಸರ್ಕಾರ ತಕ್ಷಣದ ನೇಮಕಾತಿ ಅಥವಾ ಪರ್ಯಾಯ ಕ್ರಮಗಳನ್ನು ಕೈಗೊಳ್ಳಲಿದೆಯೇ ; ಇದ್ದಲ್ಲಿ, ಈ ಕುರಿತಂತೆ ಯಾವ ಕಾಲಮಿತಿಯಲ್ಲಿ ಕ್ರಮ ಜರುಗಿಸಲಾಗುವುದು ?

## ಪೌರಕಾರ್ಮಿಕರಿಗೆ ವಿಶ್ರಾಂತಿ ಗೃಹ ನಿರ್ಮಿಸಿಕೊಡುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೮೦ (೮೦೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ (ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ) ವ್ಯಾಪ್ತಿಯಲ್ಲಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಸ್ಥಳೀಯ ಸಂಸ್ಥೆವಾರು ಹಾಗೂ ಖಾಯಂ ಮತ್ತು ನೇರ ಪಾವತಿ ಪೌರಕಾರ್ಮಿಕರ (ಪುರುಷರು/ ಮಹಿಳೆಯರು) ಸಂಪೂರ್ಣ ವಿವರ ನೀಡುವುದು)

(ಆ) ಪೌರಕಾರ್ಮಿಕರ ವಿಶ್ರಾಂತಿಗಾಗಿ ಯಾವ ಯಾವ ಜಿಲ್ಲೆಗಳ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿಶ್ರಾಂತಿ ಗೃಹ (ಶಾಶ್ವತ ಅಥವಾ ಮೊಬೈಲ್ ಸಂಚಾರಿ) ನಿರ್ಮಾಣ ಮಾಡಲಾಗಿದೆ ಅಥವಾ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಶಾಶ್ವತ ಅಥವಾ ಸಂಚಾರಿ ವಿಶ್ರಾಂತಿ ಗೃಹ ನಿರ್ಮಾಣಕ್ಕೆ ಯಾವ ಜಿಲ್ಲೆಗಳಲ್ಲಿ ಕ್ರಮವಹಿಸಲಾಗಿದೆ ; ಇದಕ್ಕಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಪೌರಕಾರ್ಮಿಕರಿಗೆ ವಿಶ್ರಾಂತಿ ಗೃಹ ನಿರ್ಮಾಣ ಮಾಡುವ ಕುರಿತು ಸರ್ಕಾರದ ನಿಲುವೇನು ?

## ಇಂದಿರಾ ಕ್ಯಾಂಟೀನ್ ಆಹಾರ ಸರಬರಾಜುದಾರರಿಗೆ ಹಣ ಪಾವತಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೮೧ (೮೦೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ಥಾಪಿಸಿರುವ ಇಂದಿರಾ ಕ್ಯಾಂಟೀನ್‌ಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಪ್ರಸ್ತುತ ಎಷ್ಟು ಕಾರ್ಯನಿರ್ವಹಿಸುತ್ತಿವೆ ; ಎಷ್ಟು ಆರಂಭಿಸಬೇಕಿದೆ ; ಎಷ್ಟು ಮುಚ್ಚಲ್ಪಟ್ಟಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಹೊಸದಾಗಿ ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲು ಉದ್ದೇಶಿಸಲಾಗಿದೆಯೇ ; ಇದ್ದಲ್ಲಿ, ಎಲ್ಲೆಲ್ಲಿ ; ಎಷ್ಟು ಸಂಖ್ಯೆಯ ಕ್ಯಾಂಟೀನ್‌ಗಳನ್ನು ಆರಂಭಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ಸರ್ಕಾರ ಆಹಾರ ಸರಬರಾಜುದಾರರಿಗೆ ಪಾವತಿಸಲು ಬಾಕಿ ಉಳಿಸಿಕೊಂಡಿರುವ ಮೊತ್ತ ಎಷ್ಟು ; (ಜಿಲ್ಲಾ ನಗರಾಭಿವೃದ್ಧಿ ಕೋಶ ಮತ್ತು ಕಾರ್ಮಿಕ ಇಲಾಖೆಯಿಂದ ಪಾವತಿಸಲು ಬಾಕಿಯಿರುವ ಮೊತ್ತ ಮತ್ತು ಮಾಹೆಗಳ ಸಂಖ್ಯೆಯೊಂದಿಗೆ ಸಂಪೂರ್ಣ ವಿವರ ನೀಡುವುದು ;

(ಈ) ಇಂದಿರಾ ಕ್ಯಾಂಟೀನ್‌ಗಳಲ್ಲಿ ಪ್ರಾದೇಶಿಕತೆಗೆ ಅನುಸಾರವಾಗಿ ಉಪಹಾರ ಮತ್ತು ಊಟದ ಮೆನುವಿನಲ್ಲಿ ಮತ್ತೊಮ್ಮೆ ಬದಲಾವಣೆ ತರಲು ಸರ್ಕಾರ ಉದ್ದೇಶಿಸಿದೆಯೇ ; ಇದ್ದಲ್ಲಿ, ಮಾಹಿತಿ ನೀಡುವುದು ;

(ಉ) ಅಸಂಘಟಿತ ಕಾರ್ಮಿಕರು, ಬಡವರಿಗೆ ವರದಾನವಾಗಿರುವ ಇಂದಿರಾ ಕ್ಯಾಂಟೀನ್‌ಗಳಲ್ಲಿನ ಉಪಹಾರ ಮತ್ತು ಊಟದ ದರವನ್ನು ಪರಿಷ್ಕರಿಸಲು ಸರ್ಕಾರ ಉದ್ದೇಶಿಸಿದೆಯೇ ?

## ಪೌರ ಕಾರ್ಮಿಕರ ಖಾಯಂ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೮೨ (೮೦೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು, ಹಾಸನ, ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; ಇದರಲ್ಲಿ ಖಾಯಂ ಮತ್ತು ನೇರ ಪಾವತಿ ಪೌರಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಎಷ್ಟು ಸಂಖ್ಯೆಯ ಪೌರಕಾರ್ಮಿಕರನ್ನು ಯಾವ ಯಾವ ವರ್ಷ ಖಾಯಂ ಮಾಡಲಾಗಿದೆ ಹಾಗೂ ನೇರ ನೇಮಕಾತಿಗೆ ಒಳಪಡಿಸಲಾಗಿದೆ ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಇ) ಮೇಲ್ಕಾಣಿಸಿದ ಜಿಲ್ಲೆಗಳಲ್ಲಿ ವಿಶೇಷ ನೇಮಕಾತಿಯಡಿ ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆಯೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ಜಿಲ್ಲೆಗಳಲ್ಲಿರುವ ತ್ಯಾಜ್ಯ ವಿಲೇವಾರಿ ವಾಹನ ಚಾಲಕರು, ಸಹಾಯಕರು ಹಾಗೂ ಆಪರೇಟರ್ಸ್‌ಗಳ ಸಂಖ್ಯೆ ಎಷ್ಟು ; ಇವರನ್ನು ಖಾಯಂ ಮಾಡುವ ಕುರಿತು ಸರ್ಕಾರದ ನಿಲುವೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೮೩ (೮೦೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ

ಕೈಗಾರಿಕಾ ಪ್ರದೇಶಕ್ಕಾಗಿ ಸ್ವಾಧೀನಪಡಿಸುತ್ತಿರುವ ಜಮೀನಿನ ಸಂಖ್ಯೆ ಎಷ್ಟು ; (ಜಿಲ್ಲೆ, ತಾಲ್ಲೂಕು, ಗ್ರಾಮಗಳು, ವಿಸ್ತೀರ್ಣವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಎಲ್ಲೆಲ್ಲಿ ರೈತರ ವಿರೋಧ ವ್ಯಕ್ತವಾಗಿತ್ತು, ಅಂತಿಮ ಅಧಿಸೂಚನೆ ಹೊರಡಿಸಿ ಪರಿಹಾರ ಪಾವತಿ ಹಾಗೂ ವಿಚಾರಣೆ ಮತ್ತು ಜಂಟಿ ಅಳತೆ ಕಾರ್ಯ ಪ್ರಗತಿಯಲ್ಲಿದೆಯೇ ; (ಜಿಲ್ಲಾವಾರು, ಯೋಜನೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕೈಗಾರಿಕಾ ಪ್ರದೇಶದ ಅಭಿವೃದ್ಧಿಯಿಂದಾಗಿ ಭೂಮಿ ಕಳೆದುಕೊಳ್ಳುವ ರೈತರಿಗೆ ನೀಡುವ ಪರಿಹಾರವೇನು ;

(ಈ) ಸದರಿ ಕೈಗಾರಿಕಾ ಪ್ರದೇಶಾಭಿವೃದ್ಧಿಯಿಂದ ಎಷ್ಟು ಜನರಿಗೆ ಉದ್ಯೋಗ ದೊರೆಯುವ ನಿರೀಕ್ಷೆಯನ್ನು ಹೊಂದಲಾಗಿದೆ ಹಾಗೂ ಯಾವ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ?

## SHG ಮೂಲಕ ಆಸ್ತಿ ತೆರಿಗೆ ಮತ್ತು ನೀರಿನ ತೆರಿಗೆ ವಸೂಲಾತಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೮೪ (೮೦೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಅಂದಾಜು ಜನಸಂಖ್ಯೆ ಹಾಗೂ ಮನೆಗಳ ಸಂಖ್ಯೆ ಎಷ್ಟು ; ಈ ಪೈಕಿ ಎಷ್ಟು ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲಾಗಿದೆ ಹಾಗೂ ಕಲ್ಪಿಸಲು ಬಾಕಿ ಇರುತ್ತದೆ ; (ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ನಗರ ಸ್ಥಳೀಯ ಸಂಸ್ಥೆಗಳಿಗೆ ಪ್ರತಿದಿನ ಅವಶ್ಯವಿರುವ ಕುಡಿಯುವ ನೀರಿನ ಪ್ರಮಾಣ ಎಷ್ಟು ; ಇದರಲ್ಲಿ ನದಿ, ಕೆರೆ ಮತ್ತು ಇನ್ನಿತರೆ ಮೂಲಗಳಿಂದ ಪೂರೈಸುತ್ತಿರುವ ನೀರಿನ ಪ್ರಮಾಣ ಎಷ್ಟು ;

(ಇ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಸೂಲಾತಿ ಮಾಡಬೇಕಾದ ನೀರಿನ ಬಳಕೆ ಶುಲ್ಕದ ಮೊತ್ತ ಎಷ್ಟು ; (ಜಿಲ್ಲಾವಾರು ಹಾಗೂ ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಈ) ಎಷ್ಟು ನಗರ ಸ್ಥಳೀಯ ಸಂಸ್ಥೆಗಳ ಪೈಕಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ನೀರಿನ ಸಂಪರ್ಕ, ನೀರಿನ ಶುಲ್ಕ ವಸೂಲಾತಿ ಮತ್ತು ಮೇಲ್ವಿಚಾರಣೆ ಎಲ್ಲೆಲ್ಲಿ ನಡೆಸಲಾಗುತ್ತಿದೆ ; (ವಿವರ ನೀಡುವುದು)

(ಉ) ಯಾವ ಯಾವ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ವಸೂಲಾತಿಗಾಗಿ ಸ್ಥಳೀಯ ಮಹಿಳಾ ಸ್ವ-ಸಹಾಯ ಗುಂಪುಗಳು, SHG/ಸರ್ಕಾರೇತರ ಸಂಸ್ಥೆಗಳು/ ಸ್ತ್ರೀಶಕ್ತಿ ಗುಂಪುಗಳ ಸೇವೆಯನ್ನು ಪಡೆಯಲಾಗಿರುತ್ತದೆ ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಗ್ರಾಮೀಣ ಕೈಗಾರಿಕೆಗಳ ಸ್ಥಾಪನೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೮೫ (೭೫೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು ಸರ್ಕಾರವು ಯಾವುದಾದರೂ ವಿಶೇಷ ಕ್ರಿಯಾ ಯೋಜನೆಯನ್ನು ರೂಪಿಸಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಣ್ಣ ಪ್ರಮಾಣದ ಕೈಗಾರಿಕೆಗಳ ಸಂಖ್ಯೆ ಎಷ್ಟು ಮತ್ತು ಕಳೆದ ಮೂರು ವರ್ಷಗಳಲ್ಲಿ ಮುಚ್ಚಿಹೋಗಿರುವ ಘಟಕಗಳೆಷ್ಟು ; (ಇವುಗಳ ಪುನಃಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಬೀದರ್ ಜಿಲ್ಲೆಯು ಜವಳಿ ಮತ್ತು ಕೃಷಿ ಆಧಾರಿತ ಉದ್ದಿಮೆಗಳಿಗೆ ಪೂರಕವಾಗಿದ್ದು ಕೇಂದ್ರ ಸರ್ಕಾರದ ಮಿತ್ರ (MITRA) ಅಥವಾ ರಾಜ್ಯದ ಜವಳಿ ನೀತಿಯಡಿ ಈ ಭಾಗಕ್ಕೆ ಒದಗಿಸಲಾದ ತಾಂತ್ರಿಕ ಮತ್ತು ಆರ್ಥಿಕ ನೆರವು ಎಷ್ಟು ;

(ಈ) ಇಂಜಿನಿಯರ್‌ಗಳ ದಿನಾಚರಣೆಯ ಸಂದರ್ಭದಲ್ಲಿ ವ್ಯಕ್ತವಾದ ಬೇಡಿಕೆಯಂತೆ, ಹಳ್ಳಿಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿ ಸ್ಥಳೀಯ ಇಂಜಿನಿಯರಿಂಗ್ ಪದವೀಧರರಿಗೆ ಉದ್ಯೋಗ ನೀಡಲು ಮತ್ತು ಗ್ರಾಮೀಣ ಮೂಲಸೌಕರ್ಯ ಬಲಪಡಿಸಲು ಸರ್ಕಾರವು ಕೈಗೊಂಡಿರುವ ನಿರ್ದಿಷ್ಟ ಉಪಕ್ರಮಗಳೇನು ?

## ಬೀದರ್ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ಅಕ್ರಮ ಲೇಔಟ್‌ಗಳ ನಿಯಂತ್ರಣ ಮತ್ತು ಮೂಲಸೌಕರ್ಯ ಸಂರಕ್ಷಣೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೬ (೭೫೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ಬೀದರ್ ಜಿಲ್ಲೆಯ ನಗರ ಮತ್ತು ಗ್ರಾಮೀಣ ವ್ಯಾಪ್ತಿಯಲ್ಲಿ ಪತ್ತೆಯಾದ ಅನಧಿಕೃತ ಬಡಾವಣೆಗಳ (Illegal Layout) ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ನಗರ ಹಾಗೂ ಗ್ರಾಮಾಂತರ ಯೋಜನಾ ಕಾಯ್ದೆ (KTCP Act) ಅಡಿಯಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ಮತ್ತು ಎಷ್ಟು ಅನಧಿಕೃತ ನಿರ್ಮಾಣಗಳನ್ನು ನೆಲಸಮಗೊಳಿಸಲಾಗಿದೆ ;

(ಇ) ಮೂಲಸೌಕರ್ಯಗಳಿಲ್ಲದ ಅಕ್ರಮ ಲೇಔಟ್‌ಗಳಿಂದಾಗಿ ಸಾರ್ವಜನಿಕರು ಅನುಭವಿಸುತ್ತಿರುವ ವಂಚನೆ ಮತ್ತು ಇದರಿಂದ ಸರ್ಕಾರಕ್ಕೆ ಉಂಟಾಗಿರುವ ಸ್ಟ್ಯಾಂಪ್ ಡ್ಯೂಟಿ ನಷ್ಟದ ಅಂದಾಜು ಮೊತ್ತ ಎಷ್ಟು ;

(ಈ) ರೇರಾ (RERA) ನಿಯಮಗಳನ್ನು ಗಾಳಿಗೆ ತೂರಿ ಲೇಔಟ್ ನಿರ್ಮಿಸಿದ ಡೆವಲಪರ್‌ಗಳ ಮೇಲೆ ವಿಧಿಸಿದ ದಂಡದ ಮೊತ್ತವೆಷ್ಟು ಮತ್ತು ಎಷ್ಟು ಸಂಸ್ಥೆಗಳ ಪರವಾನಿಗೆಯನ್ನು ರದ್ದುಪಡಿಸಲಾಗಿದೆ ;

(ಉ) ಇಂಜಿನಿಯರ್‌ಗಳ ದಿನಾಚರಣೆಯ ಸಂದರ್ಭದಲ್ಲಿ ಚರ್ಚೆಯಾದಂತೆ, ಗ್ರಾಮೀಣ ಭಾಗದ ವ್ಯವಸ್ಥಿತ ಅಭಿವೃದ್ಧಿಗಾಗಿ ಇಂಜಿನಿಯರ್‌ಗಳ ತಾಂತ್ರಿಕ ಸಲಹೆಯನ್ನು ಪಡೆದು ಅಕ್ರಮ ಲೇಔಟ್ ತಡೆಯಲು ಸರ್ಕಾರವು 'ಜಿಐಎಸ್ ಮ್ಯಾಪಿಂಗ್' (GIS Mapping) ಅಥವಾ ಕಟ್ಟುನಿಟ್ಟಿನ ಆನ್‌ಲೈನ್ ಮೇಲ್ವಿಚಾರಣಾ ವ್ಯವಸ್ಥೆಯನ್ನು ಜಾರಿಗೆ ತರುತ್ತಿದೆಯೇ ?

## ಕರ್ನಾಟಕದ ರೈಲ್ವೆ ನಿಲ್ದಾಣಗಳ ಆಧುನೀಕರಣ ಮತ್ತು ಅಭಿವೃದ್ಧಿಯ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೭ (೭೫೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ನಿಲ್ದಾಣಗಳು ಸೇರಿದಂತೆ ಕರ್ನಾಟಕದಲ್ಲಿ ಮೇಲ್ದರ್ಜೆಗೇರಿಸಲು ಉದ್ದೇಶಿಸಿರುವ ರೈಲ್ವೆ ನಿಲ್ದಾಣಗಳ ಸಂಖ್ಯೆ ಎಷ್ಟು ; (ವಿಶೇಷವಾಗಿ 'ಅಮೃತ್ ಭಾರತ್ ಸ್ಟೇಷನ್' ಯೋಜನೆಯಡಿ ಆಯ್ಕೆಯಾದ ನಿಲ್ದಾಣಗಳ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮತ್ತು ಪ್ರಸಕ್ತ ಸಾಲಿನಲ್ಲಿ ಕರ್ನಾಟಕದಲ್ಲಿ ಎಷ್ಟು ರೈಲ್ವೆ ನಿಲ್ದಾಣಗಳನ್ನು ನವೀಕರಿಸಲಾಗಿದೆ ಅಥವಾ ಮೇಲ್ದರ್ಜೆಗೇರಿಸಲಾಗಿದೆ ; ಆಯಾ ನಿಲ್ದಾಣವಾರು ವ್ಯಯಿಸಲಾದ ಒಟ್ಟು ಮೊತ್ತದ ವಿವರಗಳೇನು ;

(ಇ) ಪ್ರಸ್ತುತ ಪ್ರಗತಿಯಲ್ಲಿರುವ ಅಥವಾ ಬಾಕಿ ಇರುವ ರೈಲ್ವೆ ನಿಲ್ದಾಣಗಳ ಅಭಿವೃದ್ಧಿ ಕಾಮಗಾರಿಗಳು ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳಲಿವೆ ?

## ಬೀದರ್ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೮ (೭೫೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದ ಸದ್ಯದ ಜನಸಂಖ್ಯೆಗೆ ಪ್ರತಿದಿನ ಅಗತ್ಯವಿರುವ ೪೨.೩೬ MLD ನೀರಿನಲ್ಲಿ ಎಷ್ಟು ಪ್ರಮಾಣ ಪೂರೈಕೆಯಾಗುತ್ತಿದೆ ; ನಗರದ ೨೪x೭ ನೀರು ಪೂರೈಕೆ ಯೋಜನೆ ಕಳೆದ ೧೧ ವರ್ಷಗಳಿಂದ ವಿಳಂಬವಾಗಲು ಮತ್ತು ಪೈಪ್‌ಲೈನ್ ಸೋರಿಕೆಗೆ ಕಾರಣರಾದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮವೇನು ;

(ಆ) ನಾರಾಯಣಪುರ ಜಲಾಶಯದಿಂದ ಬೀದರ್ ಜಿಲ್ಲೆಗೆ ನೀರು ತರುವ ರೂ. ೧೬೦೦ ಕೋಟಿ ಮೊತ್ತದ ಬೃಹತ್ ಯೋಜನೆ ಮತ್ತು 'ಅಮೃತ್ ೨.೦' (AMRUT 2.0) ಅಡಿಯಲ್ಲಿ ನಗರದ ನೀರು ಸರಬರಾಜು ವ್ಯವಸ್ಥೆ ಸುಧಾರಿಸಲು ಮಂಜೂರಾದ ಅನುದಾನದ ಪ್ರಸಕ್ತ ಸ್ಥಿತಿಗತಿ ಏನು ?

# ಬೃಹತ್ ಕೈಗಾರಿಕೆ ಇಲಾಖೆಯ ಕೈಗಾರಿಕಾ ನೀತಿ ೨೦೨೫–೩೦ರ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೯ (೭೨೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಕೈಗಾರಿಕೆ ಇಲಾಖೆಯ ವತಿಯಿಂದ ರೂಪಿಸಲಾಗಿರುವ ಕೈಗಾರಿಕಾ ನೀತಿ ೨೦೨೫–೩೦ರಡಿ ಫೆಬ್ರವರಿ–೨೦೨೫ ರಿಂದ ಇಲ್ಲಿಯವರೆಗೆ ಎಷ್ಟು ಹೂಡಿಕೆ ಆಕರ್ಷಿಸಲಾಗಿದೆ ; (ವಿವರ ನೀಡುವುದು)

(ಆ) ಯಾವ ಯಾವ ರಾಜ್ಯ/ರಾಷ್ಟ್ರಗಳಿಂದ ಹೂಡಿಕೆ ಆಕರ್ಷಿಸಲಾಗಿದೆ ಮತ್ತು ಎಷ್ಟು ಮೊತ್ತ ಆಕರ್ಷಿಸಲಾಗಿದೆ ;

(ಇ) ಸದರಿ ನೀತಿಯಡಿ ಫೆಬ್ರವರಿ–೨೦೨೫ ರಿಂದ ಇಲ್ಲಿಯವರೆಗೆ ಎಷ್ಟು ಉದ್ಯೋಗವಕಾಶಗಳನ್ನು ಸೃಷ್ಟಿಸಲಾಗಿದೆ ;

(ಈ) ಕೈಗಾರಿಕಾ ನೀತಿ ೨೦೨೫–೩೦ರಡಿ ಫೆಬ್ರವರಿ–೨೦೨೫ ರಿಂದ ಇಲ್ಲಿಯವರೆಗೆ ಎಷ್ಟು ನವೋದ್ಯಮಗಳನ್ನು ಸ್ಥಾಪಿಸಲಾಗಿದೆ ಮತ್ತು ಬೆಂಗಳೂರನ್ನು ಹೊರತುಪಡಿಸಿ ಇತರೇ ಜಿಲ್ಲೆಗಳಲ್ಲಿ ಎಷ್ಟು ನವೋದ್ಯಮಗಳು ಪ್ರಾರಂಭಗೊಂಡಿವೆ ಎಂಬುದರ ಬಗ್ಗೆ ಮಾಹಿತಿ ನೀಡುವುದು ;

(ಉ) ಈ ನೀತಿಯಡಿ ಹೊಸ ಹೂಡಿಕೆ ವಲಯಗಳನ್ನು ಯೋಜಿಸಲಾಗಿದೆಯೇ ; ಇದ್ದಲ್ಲಿ, ಎಷ್ಟು ಹೂಡಿಕೆ ವಲಯಗಳನ್ನು ಪ್ರಾರಂಭಿಸಲಾಗುವುದು ಮತ್ತು ಈ ಯೋಜನೆಗೆ ಬೇಕಾಗಿರುವ ಒಟ್ಟು ಜಮೀನು ಎಷ್ಟು ?

# ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಸಂಸ್ಥೆಗೆ ನೀಡಲಾಗಿದ್ದ ಜಾಗದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೦ (೭೨೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ವಲಯ ಉದ್ಯಮಗಳ ಇಲಾಖೆಯ ಅಧೀನದಲ್ಲಿ ಬರುವ ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಸಂಸ್ಥೆಗೆ ಈ ಹಿಂದೆ ಕಲಬುರಗಿಯಲ್ಲಿ ಗೋದಾಮು ನಿರ್ಮಿಸಲು Lease Cum Sale Agreement ಆಧಾರದ ಮೇಲೆ ಒಂದು ಎಕರೆ ಜಮೀನು ಕೆ.ಐ.ಎ.ಡಿ.ಬಿ ವತಿಯಿಂದ ನೀಡಲಾಗಿತ್ತು, ಆದರೆ, ಎಂ.ಎಸ್.ಐ.ಎಲ್ ವತಿಯಿಂದ ನಿಗಧಿತ ಸಮಯದಲ್ಲಿ ಕಟ್ಟಡ ಪೂರ್ಣಗೊಳಿಸದೇ ಇರುವುದರಿಂದ ಏಪ್ರಿಲ್ ೨೦೧೬ ರಿಂದ ಸೆಪ್ಟೆಂಬರ್ ೨೦೨೩ ರವರೆಗೆ ಸುಮಾರ್ ೭೬ ಲಕ್ಷ ರೂ.ಗಳನ್ನು ಬಾಡಿಗೆ ರೂಪದಲ್ಲಿ ಕೆ.ಐ.ಎ.ಡಿ.ಬಿ ಪಾವತಿಸಿರುವುದು ನಿಜವೇ ;

(ಆ) ಈ ಹಿಂದೆ ೨೦೨೦ನೇ ಸಾಲಿನಲ್ಲಿ ವಾಸ್ತುಶಿಲ್ಪಿಗಳು ಸರಿಯಾದ Estimates ತಯಾರಿಸದೇ ಇದ್ದುದರಿಂದ ಸಂಸ್ಥೆಗೆ ಹೆಚ್ಚುವರಿಯಾಗಿ ೧,೮೮ ಕೋಟಿ ರೂ.ಗಳ ಆರ್ಥಿಕ ಹೊರೆ ಆಗುವುದಲ್ಲದೇ ಪರಿಷ್ಕೃತ ಕಾರ್ಯಾದೇಶ ನೀಡಲಾಗಿತ್ತು ಎಂಬ ಮಾಹಿತಿಯು ನಿಜವೇ ;

(ಇ) ಸದರಿ ಕಾಮಗಾರಿ ಇಷ್ಟೊಂದು ವಿಳಂಬವಾಗುವುದಕ್ಕೆ ಕಾರಣಗಳೇನು ಮತ್ತು ಸದರಿ ಗೋದಾಮು ನಿರ್ಮಾಣ ಕಾಮಗಾರಿಯ ಪ್ರಸ್ತುತ ಹಂತವೇನು ? (ಮಾಹಿತಿ ನೀಡುವುದು)

# ರಾಜ್ಯದಲ್ಲಿ ಪುರಾತತ್ವ ಪರಂಪರೆಯ ತಾಣಗಳಲ್ಲಿ ಗಣಿಗುತ್ತಿಗೆ ನೀಡುತ್ತಿರುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೧ (೭೨೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫ರಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:೩೧೧೦ರಲ್ಲಿ ಗಣಿಗುತ್ತಿಗೆ ಮಂಜೂರಾತಿ ನೀಡುವ ಪೂರ್ವದಲ್ಲಿ ಸಂಬಂಧಪಟ್ಟ ಇಲಾಖೆಗಳಿಂದ ದಾಖಲಾತಿಗಳನ್ನು ಪಡೆದು ನಂತರ ಕರಾರು ಒಪ್ಪಂದ ಜಾರಿ ಮಾಡಲಾಗುವುದು ಎಂದು ತಿಳಿಸಿದ್ದು ಮತ್ತು ಉದ್ದೇಶಿತ ಗಣಿಗುತ್ತಿಗೆ ಮಂಜೂರಾತಿ ಪ್ರದೇಶವು ಪುರಾತತ್ವ ಪರಂಪರೆಯ ತಾಣದ ವ್ಯಾಪ್ತಿಗೆ ಒಳಪಡುತ್ತಿದಲ್ಲಿ, ಮಾನ್ಯ ಸರ್ವೋಚ್ಚ ನ್ಯಾಯಾಲಯ/ಪುರಾತತ್ವ ಇಲಾಖೆಯ ನಿಯಮಗಳಂತೆ ನಿರ್ದಿಷ್ಟ ಪ್ರದೇಶವನ್ನು ಹೊರತುಪಡಿಸಿ ಗಣಿಗಾರಿಕೆಗೆ ಅನುಮತಿ ನೀಡಲಾಗುವುದು ಎಂದು ತಿಳಿಸಲಾಗಿರುತ್ತದೆ, ಆದರೆ ೨೦೨೫ನೇ ಸಾಲಿನಲ್ಲಿಯೇ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ವತಿಯಿಂದ ಬಳ್ಳಾರಿ ಜಿಲ್ಲೆಯ ಸಂಡೂರು ಪ್ರದೇಶದ ಸುಮಾರು ೧,೨೦೦ ವರ್ಷಗಳಷ್ಟು ಹಳೆಯದಾದ ಕುಮಾರಸ್ವಾಮಿ ದೇವಾಲಯದ ಬಳಿ ಗಣಿಗುತ್ತಿಗೆದಾರರಿಂದ ವಿಸ್ಫೋಟ ಕಾರ್ಯ ಕೈಗೊಂಡಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ವಿಸ್ಫೋಟ (Explosion) ಕಾರ್ಯ ಕೈಗೊಳ್ಳಲು ಸರ್ಕಾರದ ವತಿಯಿಂದ ಅನುಮತಿ ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ, ಗಣಿಗುತ್ತಿಗೆದಾರರು ಯಾರ ಅನುಮತಿಯೊಂದಿಗೆ ಈ ಪ್ರದೇಶದಲ್ಲಿ ವಿಸ್ಫೋಟ ಕಾರ್ಯ ಕೈಗೊಂಡಿತ್ತು ; (ಮಾಹಿತಿ ನೀಡುವುದು)

(ಇ) ಸರ್ಕಾರದ ಉತ್ತರದಲ್ಲಿ ತಿಳಿಸಿರುವಂತೆ ಈ ಕಾರ್ಯವು ಸರ್ವೋಚ್ಚ ನ್ಯಾಯಾಲಯದ/ಪುರಾತತ್ವ ಇಲಾಖೆಯ ನಿಯಮಗಳ ಉಲ್ಲಂಘನೆಯಾಗುವುದಿಲ್ಲವೇ ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಗ್ರಾಮಪಂಚಾಯಿತಿಗಳಲ್ಲಿ ನಡೆದ ಅವ್ಯವಹಾರಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೨ (೭೨೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆ ಅಧೀನದ ೦೫ ಗ್ರಾಮಪಂಚಾಯಿತಿಗಳು ಅಂದರೆ ಬೆಂಗಳೂರು ಪೂರ್ವ ತಾಲ್ಲೂಕಿನ ದೊಡ್ಡಬನಹಳ್ಳಿ, ಕಿತ್ತಗನೂರು, ಕನ್ನೂರು, ಆನೇಕಲ್ ತಾಲ್ಲೂಕಿನ ಮಾಯಸಂದ್ರ ಮತ್ತು ಮಂಡ್ಯ ತಾಲ್ಲೂಕಿನ ಮಂಡ್ಯ ಗ್ರಾಮಾಂತರ, ಗ್ರಾಮ ಪಂಚಾಯತ್‌ಗಳಲ್ಲಿ ಈ ಹಿಂದೆ ೨೦೨೧–೨೨ನೇ ಸಾಲಿನ ಕಟ್ಟಡ ಪರವಾನಗಿ ಶುಲ್ಕವನ್ನು ಸಂಗ್ರಹಿಸುವಲ್ಲಿ ವ್ಯತ್ಯಾಸ ಕಂಡಿರುವುದರಿಂದ ಸುಮಾರು ೮೬.೦೫ ಲಕ್ಷದಷ್ಟು ಮೊತ್ತ ಸರ್ಕಾರಕ್ಕೆ ನಷ್ಟ ಉಂಟು ಮಾಡಿದ್ದು ಸಿ.ಎ.ಜಿ. ಆಡಿಟ್ ವರದಿಯಲ್ಲಿ ಬಹಿರಂಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗೆಯೇ ದೇವನಹಳ್ಳಿ ತಾಲ್ಲೂಕಿನ ಆನೇಶ್ವರ ಗ್ರಾಮ ಪಂಚಾಯತ್, ಆನೇಕಲ್ ತಾಲ್ಲೂಕಿನ ಹುಲಿಮಂಗಳ ಮತ್ತು ಮುಗಳೂರು ಗ್ರಾಮ ಪಂಚಾಯತ್ ಮತ್ತು ಬೆಂಗಳೂರು ದಕ್ಷಿಣ ತಾಲ್ಲೂಕಿನ ಕಗ್ಗಲೀಪುರ ಗ್ರಾಮ ಪಂಚಾಯತ್‌ಗಳಲ್ಲಿ ೨೦೧೬–೧೭ ರಿಂದ ೨೦೧೯–೨೦ರವರೆಗೆ ಬ್ಯಾಂಕ್ ಚೆಕ್‌ಗಳಿಗೆ ಸಂಬಂಧಿಸಿದಂತೆ ೪೮.೭೪ ಲಕ್ಷ ರೂ.ಗಳ ಮೊತ್ತ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ನೀರು ಸರಬರಾಜು ಪೈಪ್‌ಲೈನ್ ಅಳವಡಿಕೆಗೆ ಆಗಿರುವ ಖರ್ಚುಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೩ (೭೨೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಈ ಹಿಂದೆ ಅಂದರೆ ೨೦೧೭ ರಿಂದ ೨೦೨೩ರವರೆಗೆ ಮಂಡ್ಯ, ಬೆಂಗಳೂರು ಮತ್ತು ಮೈಸೂರು ನಗರಗಳಲ್ಲಿ ನೀರು ಸರಬರಾಜು ಪೈಪ್‌ಲೈನ್‌ಗಳು ಅಗತ್ಯಕ್ಕಿಂತ ಹೆಚ್ಚಿನ ದಪ್ಪದ ಎಂ.ಎಸ್. ಪೈಪ್‌ಗಳನ್ನು ಅಳವಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಸರ್ಕಾರಕ್ಕೆ ೫.೧೨ ಕೋಟಿ ರೂ.ಗಳ ಹೆಚ್ಚಿನ ಹೊರೆಯಾಗಿದೆ ಎಂದು ಸಿ.ಎ.ಜಿ ವರದಿ ಬಹಿರಂಗಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ೨೦೨೩ ರಿಂದ ಇಲ್ಲಿಯವರೆಗೆ ಯಾವ ನಗರಗಳಲ್ಲಿ ಮಂಡಳಿ ವತಿಯಿಂದ ನೀರು ಸರಬರಾಜು ಪೈಪ್‌ಲೈನ್‌ಗಳ ಅಳವಡಿಕೆ ಕಾರ್ಯಗಳು ಕೈಗೊಂಡಿವೆ ಮತ್ತು ಈ ಪೈಪ್‌ಲೈನ್‌ಗಳನ್ನು ಚಾಲ್ತಿಯಲ್ಲಿರುವ ಮಾನದಂಡಗಳನ್ವಯ ಅಳವಡಿಸಲಾಗಿದೆಯೇ ಎಂಬುದರ ಬಗ್ಗೆ ವರ್ಷವಾರು ಮತ್ತು ನಗರವಾರು ಮಾಹಿತಿ ಒದಗಿಸುವುದು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಡಿ.ಎಂ.ಎಫ್ ನಿಧಿಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೪ (೭೮೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಿಂದ ಕಳೆದ ೫ ವರ್ಷಗಳಲ್ಲಿ ಸಂಗ್ರಹವಾದ ಮೊತ್ತ ಎಷ್ಟು; ಪ್ರಸ್ತುತ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ನಲ್ಲಿನ ಬ್ಯಾಂಕ್ ಖಾತೆಯಲ್ಲಿರುವ ಹಣವೆಷ್ಟು ; (ವಿವರ ನೀಡುವುದು)

(ಆ) ಈ ಮೇಲ್ಕಂಡ ಜಿಲ್ಲೆಗಳಲ್ಲಿರುವ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ಅಡಿಯಲ್ಲಿ ದತ್ತಿನಿರ್ಧಿಗೆ ಹಾಗೂ ಕುಡಿಯುವ ನೀರು ಸರಬರಾಜು ಪರಿಸರ ಸಂರಕ್ಷಣೆ, ಆರೋಗ್ಯ ರಕ್ಷಣೆ, ಶಿಕ್ಷಣ ಮುಂತಾದ ಯೋಜನೆ ವಲಯಗಳ ಕಾರ್ಯಗಳಿಗೆ ಹಂಚಿಕೆ ಮಾಡಲಾದ ಡಿ.ಎಂ.ಎಫ್ ಮೊತ್ತದ ವಿವರ ನೀಡುವುದು ;

(ಇ) ಡಿ.ಎಂ.ಎಫ್‌ರಡಿ ಸಂಗ್ರಹವಾಗುವ ನಿಧಿಯನ್ನು ಯಾವ ಮಾನದಂಡಗಳನ್ನು ಅನುಸರಿಸಿ ಅನುದಾನವನ್ನು ಹಂಚಿಕೆ ಮಾಡಲಾಗುತ್ತದೆ ; ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರತ್ಯಕ್ಷ ಹಾಗೂ ಪರೋಕ್ಷ ಗಣಿ ಬಾಧಿತ ಪ್ರದೇಶಗಳನ್ನು ಗುರುತಿಸಲಾಗಿದೆಯೇ ; ಅವು ಯಾವುವು ?

## ಕಲಬುರಗಿ ನಗರಕ್ಕೆ ವಿಶ್ವಬ್ಯಾಂಕ್ ಯೋಜನೆಯಡಿ ೨೪x೭ ನೀರು ಸರಬರಾಜು ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೫ (೭೮೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಕುಡಿಯುವ ನೀರನ್ನು ಪರೀಕ್ಷಿಸಲು ಸರ್ಕಾರಿ ಪ್ರಯೋಗಾಲಯವಿದೆಯೇ ; ಇದ್ದಲ್ಲಿ, ಎಲ್ಲಿದೆ ; ನೀರಿನ ಗುಣಮಟ್ಟ ಪರೀಕ್ಷಿಸಲಾಗುತ್ತಿದೆಯೇ ; ಎಷ್ಟು ದಿನಗಳಿಗೊಮ್ಮೆ ನೀರಿನ ಗುಣಮಟ್ಟವನ್ನು ಪರೀಕ್ಷಿಸಲಾಗುತ್ತಿದೆ ; ಹಾಗೂ ಸದರಿ ಪ್ರಯೋಗಾಲಯದಲ್ಲಿ ಎಷ್ಟು ಸಿಬ್ಬಂದಿಗಳನ್ನು ನೇಮಿಸಲಾಗಿದೆ ;

(ಆ) ಕಲಬುರಗಿ ನಗರದಲ್ಲಿ ವಿಶ್ವಬ್ಯಾಂಕ್ ಯೋಜನೆಯಡಿ ೨೪X೭ ನೀರು ಸರಬರಾಜು ಯೋಜನೆಯನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು ; ವಿಶ್ವಬ್ಯಾಂಕ್ ಯೋಜನೆಯಡಿ ಎಷ್ಟು ಅನುದಾನವನ್ನು ಪಡೆಯಲಾಗಿದೆ ; (ವಿವರ ನೀಡುವುದು)

(ಇ) ಕುಡಿಯುವ ನೀರಿನ ಘಟಕಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು ಯಾವ ಕಂಪನಿಗೆ ವಹಿಸಲಾಗಿದೆ ; ಇದಕ್ಕೆ ವಾರ್ಷಿಕ ತಗಲುವ ವೆಚ್ಚ ಎಷ್ಟು ?

## ಕಲಬುರಗಿ ನಗರದ ಒಳಚರಂಡಿ ವ್ಯವಸ್ಥೆಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೬ (೭೮೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರದಲ್ಲಿ ಈಗಾಗಲೇ ಕೈಗೊಳ್ಳಲಾಗಿರುವ ಒಳಚರಂಡಿ ಕಾಮಗಾರಿಗಳು ಯಾವುವು ; ಅದಕ್ಕೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಆ) ಈ ಕಾಮಗಾರಿಗಳು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ಒಳಚರಂಡಿಗಳು ತುಂಬಿ ಕೊಳಚೆ ನೀರು ರಸ್ತೆ ಮೇಲೆ ಹರಿಯುತ್ತಿದ್ದು, ಇದರಿಂದ ನಗರದ ರಸ್ತೆಗಳಲ್ಲಿನ ಕೊಳಚೆ ನೀರು ಹರಿದು ಸೊಳ್ಳೆಗಳು ಉತ್ಪತ್ತಿಯಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದ ಪಾಲಿಕೆ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

# ಬಾಗಲಕೋಟೆಯಲ್ಲಿ ಅಧಿಕೃತ ಪರವಾನಿಗೆ ಪಡೆಯದೇ ನಿಯಮ ಬಾಹಿರವಾಗಿ ಕಟ್ಟಲಾದ ಕಟ್ಟಡಗಳ ಮಾಹಿತಿ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೭ (೮೧೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪೌರಸಭೆಗಳ ಅಧಿನಿಯಮದ ಪ್ರಕಾರ ಯಾವುದೇ ನಗರ ವ್ಯಾಪ್ತಿಯಲ್ಲಿ ಕಟ್ಟಡ ಕಟ್ಟಬೇಕಾದರೆ ಅಧಿಕೃತ ಪರವಾನಿಗೆಯನ್ನು ಪಡೆದುಕೊಂಡು ಅನುಮತಿಸಿದ ನಕ್ಷೆಯ ಪ್ರಕಾರ ಕಟ್ಟಬೇಕಾದ ನಿಯಮಾವಳಿಗಳು ಯಾವುವು ; (ವಿವರ ನೀಡುವುದು)

(ಆ) ಬಾಗಲಕೋಟೆ ನಗರಸಭೆಯ ವ್ಯಾಪ್ತಿಯಲ್ಲಿ ನಗರಸಭೆಯಿಂದ ಕಟ್ಟಡ ಪರವಾನಿಗೆ ಪಡೆಯದೇ ಅಕ್ರಮವಾಗಿ ನಿರ್ಮಾಣಗೊಂಡಿರುವ ಕಟ್ಟಡಗಳ ಸಂಖ್ಯೆ ಎಷ್ಟು ; ಅಂತಹ ಅನಧಿಕೃತ ಕಟ್ಟಡಗಳ ಮಾಲೀಕರ ಹೆಸರು, ಆಸ್ತಿ ಸಂಖ್ಯೆ, ವಾರ್ಡ್ ಸಂಖ್ಯೆ, ಕಟ್ಟಡದ ವಿಸ್ತೀರ್ಣಗಳ ಮಾಹಿತಿಯನ್ನು ಸಂಪೂರ್ಣ ವಿವರಗಳೊಂದಿಗೆ ನೀಡುವುದು ;

(ಇ) ಪರವಾನಿಗೆ ಪಡೆಯದೆ ಕಟ್ಟಡಗಳನ್ನು ಕಟ್ಟಲಾಗಿದ್ದರೆ ಅವುಗಳಿಗೆ ರಸ್ತೆ, ಕುಡಿಯುವ ನೀರು, ವಿದ್ಯುತ್ ಮುಂತಾದ ಮೂಲಭೂತ ಸೌಕರ್ಯಗಳನ್ನು ಸ್ಥಗಿತಗೊಳಿಸಲಾಗಿದೆಯೇ ; ಅವುಗಳ ಕುರಿತಂತೆ ಕೈಗೊಳ್ಳಲಾಗುವ ಕಾನೂನಿನ ವಿವಿಧ ಕ್ರಮಗಳೇನು ;

(ಈ) ಬಾಗಲಕೋಟೆಯಲ್ಲಿ ಅಧಿಕೃತ ಪರವಾನಿಗೆ ಪಡೆಯದೆ ನಿಯಮ ಬಾಹಿರವಾಗಿ ಕಟ್ಟಲಾದ ಕಟ್ಟಡಗಳ ಕುರಿತಂತೆ ಇಲ್ಲಿಯವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಮುಖ್ಯಮಂತ್ರಿ ನಗರೋತ್ಥಾನ ಯೋಜನೆಯಡಿ ಧಾರವಾಡ ನಗರಕ್ಕೆ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೮ (೮೪೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ ನಗರ ಪ್ರದೇಶದಲ್ಲಿ ಮುಖ್ಯಮಂತ್ರಿ ನಗರೋತ್ಥಾನ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಸಂಕ್ಷಿಪ್ತ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷದಿಂದ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರಕ್ಕೆ ಸದರಿ ಯೋಜನೆಯಡಿ ಮಹಾನಗರ ಪಾಲಿಕೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ಹಾಗೂ ಸದರಿ ಕಾಮಗಾರಿಗಳಡಿ ಮಂಜೂರು ಮಾಡಲಾಗಿರುವ ಹಾಗೂ ಮಾಡಬೇಕಾಗಿರುವ ಅನುದಾನದ ಸಂಕ್ಷಿಪ್ತ ವಿವರ ನೀಡುವುದು ?

## ಧಾರವಾಡ ನಗರದಲ್ಲಿ ಮಂಜೂರಾಗಿರುವ ಇಂದಿರಾ ಕ್ಯಾಂಟೀನ್‌ಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೯ (೬೦೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ ನಗರದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳು ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಸಂಕ್ಷಿಪ್ತ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರು ಮಾಡಲಾಗಿರುವ ಇಂದಿರಾ ಕ್ಯಾಂಟೀನ್‌ಗಳು ಎಷ್ಟು ;

(ಇ) ಧಾರವಾಡ ನಗರದ ಕೆಲವು ಭಾಗಗಳಲ್ಲಿ ಜನರ ವಾಸಸ್ಥಾನ ಇಲ್ಲದಿರುವ ಕಡೆಯೂ ಇಂದಿರಾ ಕ್ಯಾಂಟೀನ್‌ಗಳಿದ್ದು, ಇಲ್ಲಿ ಪರಿಣಾಮಕಾರಿಯಾಗಿ ಯೋಜನೆ ಅನುಷ್ಠಾನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೋರ್ಡೋ ಮಿಶ್ರಣದ ಮೈಲುತುತ್ತ ದರ ದುಪ್ಪಟ್ಟು ಏರಿಕೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೦ (೮೨೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಕೊಳೆರೋಗ ನಿಯಂತ್ರಣಕ್ಕೆ ಬಳಸುವ ಬೋರ್ಡೋ ಮಿಶ್ರಣದ ಮೈಲುತುತ್ತ ದರ ದಿಢೀರನೆ ದುಪ್ಪಟ್ಟಾಗಿದ್ದು, ಇದರಿಂದ ರಾಜ್ಯದ ಅಡಿಕೆ ಬೆಳೆಗಾರರು ಅಕ್ಷರಶಃ ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೈಲುತುತ್ತ ದರ ದಿಢೀರನೆ ಏರಿಕೆಯಾಗಿರುವುದು ರೈತರಿಗೆ ಸಂಕಷ್ಟ ತಂದಿದ್ದರೂ ಸಹ ಸರ್ಕಾರ ಇದುವರೆಗೆ ದರ ನಿಯಂತ್ರಣಕ್ಕೆ ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಅಡಿಕೆ ಕೊಳೆರೋಗ ನಿಯಂತ್ರಣಕ್ಕೆ ಸರಿಸುಮಾರು ೪ ಬಾರಿ ಔಷಧ ಸಿಂಪಡಣೆ ಮಾಡುವುದು ಅನಿವಾರ್ಯವಾಗಿದ್ದು, ಅದಕ್ಕೆ ಅತ್ಯವಶ್ಯವಾಗಿ ಬೇಕಾಗಿರುವ ಮೈಲುತುತ್ತ ದರ ನಿಯಂತ್ರಣಕ್ಕೆ ಸರ್ಕಾರ ತಕ್ಷಣವೇ ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸುವುದೇ ;

(ಈ) ಆರ್ಥಿಕವಾಗಿ ಅತ್ಯಂತ ಸಂಕಷ್ಟದಲ್ಲಿರುವ ರಾಜ್ಯದ ಅಡಿಕೆ ಬೆಳೆಗಾರರ ಹಿತರಕ್ಷಣೆ ಮಾಡುವ ಸಲುವಾಗಿ ಬೋರ್ಡೋ ಮಿಶ್ರಣದ ಮೈಲುತುತ್ತವನ್ನು ಸಂಪೂರ್ಣವಾಗಿ ಉಚಿತವಾಗಿ ನೀಡುವ

ಅಥವಾ ಗರಿಷ್ಠ ಮಟ್ಟದ ಸಹಾಯಧನ ನೀಡುವ ಮೂಲಕ ಸಂಕಷ್ಟದಲ್ಲಿರುವ ಅಡಿಕೆ ಬೆಳೆಗಾರರ ಹಿತರಕ್ಷಣೆಗೆ ಸರ್ಕಾರ ಈ ಕೂಡಲೇ ಮುಂದಾಗುವುದೇ ?

## ಅಡಿಕೆ ಬೆಳೆ ಹಾನಿ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೧ (೮೨೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಅಡಿಕೆ ತೋಟಗಳ ಒಟ್ಟು ಬೆಳೆ ವಿಸ್ತೀರ್ಣವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

(ಆ) ಈ ಅಡಿಕೆ ತೋಟಗಳಿಗೆ ಎಲೆಚುಕ್ಕಿ ರೋಗ ಮತ್ತು ಕೊಳೆರೋಗ ವ್ಯಾಪಕವಾಗಿ ಹರಡಿರುವುದರಿಂದ ಅಡಿಕೆ ಬೆಳೆಗಾರರು ಆರ್ಥಿಕವಾಗಿ ತೀವ್ರ ನಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಡಿಕೆ ತೋಟಗಳಿಗೆ ಮಾರಕವಾಗಿ ಪರಿಣಮಿಸಿರುವ ಈ ರೋಗಗಳ ನಿಯಂತ್ರಣಕ್ಕೆ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಎಲೆಚುಕ್ಕಿ ರೋಗ ಮತ್ತು ಕೊಳೆರೋಗಗಳ ಬಾಧೆಯಿಂದ ೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನಲ್ಲಿ ಆಗಿರುವ ಅಡಿಕೆ ಬೆಳೆ ಹಾನಿಯ ವಿವರಗಳೇನು ಹಾಗೂ ಅಡಿಕೆ ಬೆಳೆ ಹಾನಿಗೆ ಸಂಬಂಧಿಸಿದಂತೆ ಇದುವರೆಗೆ ನೀಡಿರುವ ಪರಿಹಾರದ ವಿವರಗಳೇನು ; (ಜಿಲ್ಲಾವಾರು, ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

(ಉ) ಸದರಿ ಪರಿಹಾರದ ಮೊತ್ತವನ್ನು ಈಗಾಗಲೇ ಸಂಪೂರ್ಣವಾಗಿ ಅಡಿಕೆ ಬೆಳೆಗಾರರಿಗೆ ಪಾವತಿ ಮಾಡಲಾಗಿದೆಯೇ ; ಬಾಕಿ ಇದ್ದಲ್ಲಿ, ಆ ಮೊತ್ತವನ್ನು ಯಾವ ಕಾಲಮಿತಿಯೊಳಗೆ ಪಾವತಿ ಮಾಡಲಾಗುವುದು ?

## ಅಡಿಕೆ ತೋಟಗಳ ಪುನಃಶ್ಚೇತನ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೨ (೮೨೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ತೋಟಗಳಿಗೆ ಎಲೆಚುಕ್ಕಿ ರೋಗ ದೊಡ್ಡ ಪ್ರಮಾಣದಲ್ಲಿ ಹರಡಿರುವ ಕಾರಣದಿಂದ ಸಾಕಷ್ಟು ಅಡಿಕೆ ಮರಗಳು ನಾಶವಾಗಿದ್ದು, ಅಡಿಕೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಒಟ್ಟು ಎಷ್ಟು ಅಡಿಕೆ ಮರಗಳು ಹಾನಿಗೊಳಗಾಗಿವೆ ಅಥವಾ ಸಂಪೂರ್ಣವಾಗಿ ನಾಶವಾಗಿವೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಅಡಿಕೆ ಮರ ಹಾನಿಗೊಳಗಾಗಿರುವ ಅಥವಾ ನಾಶವಾಗಿರುವ ರೈತರಿಗೆ ಮರು ನಾಟಿ ಮಾಡಲು ಕೇರಳ ಮಾದರಿಯಲ್ಲಿ ಸಹಾಯ ಧನ ನೀಡಬೇಕೆ ಎಂಬ ಬೇಡಿಕೆ ತೀವ್ರವಾಗಿದ್ದು, ಸರ್ಕಾರ ಕೇರಳ ಮಾದರಿಯಲ್ಲಿ ಈಗಾಗಲೇ ಸಹಾಯ ಧನ ನೀಡಿದೆಯೇ ; ರೈತರಿಗೆ ಮರು ನಾಟಿ ಮಾಡಲು ಇದುವರೆಗೆ ನೀಡಿರುವ ಸಹಾಯಧನದ ವಿವರಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬಹುವಾರ್ಷಿಕವಾಗಿ ಫಸಲು ನೀಡುವ ಅಡಿಕೆ ಮರಗಳು ನಾಶವಾಗಿರುವ ಕಾರಣದಿಂದ ಬೆಳೆಗಾರರು ಆರ್ಥಿಕವಾಗಿ ಅತ್ಯಂತ

ಸಂಕಷ್ಟದ ಪರಿಸ್ಥಿತಿಗೆ ಸಿಲುಕಿದ್ದು ಹಾಳಾಗಿರುವ ಅಡಿಕೆ ತೋಟಗಳ ಪುನಃಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಒದಗಿಸಿರುವ ನೆರವುಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ರಸ್ತೆಗಳ ದುರಸ್ತಿ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೩ (೮೨೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ, ಪ್ರಸ್ತುತ ಅಸ್ತಿತ್ವದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ)ಗಳು ಯಾವುವು ; ಸದರಿ ನಗರ ಸ್ಥಳೀಯ ಸಂಸ್ಥೆಗಳ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ) ವ್ಯಾಪ್ತಿಯ ಬಹುತೇಕ ರಸ್ತೆಗಳು ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಹಾನಿಗೀಡಾದ ರಸ್ತೆಗಳ ದುರಸ್ತಿಗೆ ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ; ಸದರಿ ದುರಸ್ತಿ ಕಾಮಗಾರಿಗಳಿಗೆ ಪ್ರಸ್ತುತ ಆರ್ಥಿಕ ವರ್ಷದಲ್ಲಿ ಇದುವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು ಹಾಗೂ ಕೈಗೊಂಡಿರುವ ಕಾಮಗಾರಿಗಳ ವಿವರಗಳೇನು ; (ಪ್ರತಿಯೊಂದು ನಗರ ಸ್ಥಳೀಯ ಸಂಸ್ಥೆಯ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಇದುವರೆಗೂ ದುರಸ್ತಿಯಾಗದೇ ಇರುವ ರಸ್ತೆಗಳನ್ನು ಯಾವ ಕಾಲಮಿತಿಯೊಳಗೆ ದುರಸ್ತಿ ಮಾಡಲಾಗುವುದು ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ದುರಸ್ತಿ ಬಗ್ಗೆ

**ಶ್ರೀ ಪತ್ರಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೪ (೮೨೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಬಹುತೇಕ ರಸ್ತೆಗಳು ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಹಾನಿಗೀಡಾದ ರಸ್ತೆಗಳ ದುರಸ್ತಿಗೆ ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಕಳೆದ ೨ ವರ್ಷಗಳಲ್ಲಿ ಸದರಿ ರಸ್ತೆ ದುರಸ್ತಿ ಕಾಮಗಾರಿಗಳಿಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು ಹಾಗೂ ಕೈಗೊಂಡಿರುವ ಕಾಮಗಾರಿಗಳ ವಿವರಗಳೇನು ;

(ಇ) ಇದುವರೆಗೂ ದುರಸ್ತಿಯಾಗದೇ ಇರುವ ರಸ್ತೆಗಳ ದುರಸ್ತಿಗೆ ಅಗತ್ಯವಿರುವ ಅನುದಾನವನ್ನು ಈಗಾಗಲೇ ಒದಗಿಸಲಾಗಿದೆಯೇ ; ಮತ್ತು ಯಾವ ಕಾಲಮಿತಿಯೊಳಗೆ ಸದರಿ ಎಲ್ಲಾ ರಸ್ತೆಗಳನ್ನು ದುರಸ್ತಿ ಮಾಡಲಾಗುವುದು ?

## ವಿವಿಧ ಯೋಜನೆಯ ಕಾಮಗಾರಿಗಳ ವಿವರ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೭೦೫ (೮೩೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಪುರಸಭೆ ಮತ್ತು ಹುಳಿಯಾರ್ ಟೌನ್ ಪಂಚಾಯಿತಿಯಲ್ಲಿ ಎಸ್.ಎಫ್.ಸಿ ಯೋಜನೆಯ ಕಾಮಗಾರಿ, ಕೇಂದ್ರ ಹಣಕಾಸು ಆಯೋಗದ

ಕಾಮಗಾರಿ, ಅಮೃತ್ ಯೋಜನೆಯ ಕಾಮಗಾರಿ, ಪುರಸಭೆ ಸುಧಾರಣೆ ಯೋಜನೆಯ ಕಾಮಗಾರಿ, ಸಾಲಿಡ್ ವೇಸ್ಟ್ ಮ್ಯಾನೇಜ್‌ಮೆಂಟ್ ಕಾಮಗಾರಿ, ಸ್ವಚ್ಛ ಭಾರತ್ ಮಿಷನ್ ಕಾಮಗಾರಿ. ಇಂದಿರಾ ಕ್ಯಾಂಟೀನ್ ಯೋಜನೆಯ ಕಾಮಗಾರಿ, ಪೌರಕಾರ್ಮಿಕ ಗೃಹ ಭಾಗ್ಯ ಯೋಜನೆ ಕಾಮಗಾರಿಗಳ ವಿವರ ಒದಗಿಸುವುದು ;

(ಆ) ಈ ಯೋಜನೆಗಳ ೩ ವರ್ಷದ ಕಾಮಗಾರಿಗಳ ಪ್ರಗತಿ ಮತ್ತು ಬಾಕಿ ಇರುವ ಕಾಮಗಾರಿಗಳ ವಿವರಗಳನ್ನು ಹಂಚಿಕೆಯಾದ ಅನುದಾನ, ಬಿಡುಗಡೆಯಾದ ಅನುದಾನ, ಬಳಕೆಯಾದ ಅನುದಾನಗಳೆಷ್ಟು ; (ವಿವರ ಒದಗಿಸುವುದು)

(ಇ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ಪುರಸಭೆ ಮತ್ತು ಹುಳಿಯೂರು ಟೌನ್ ಪಂಚಾಯಿತಿಯಲ್ಲಿ ಜಲಜೀವನ್ ಯೋಜನೆಯ ಅಡಿಯಲ್ಲಿ ಕುಡಿಯುವ ನೀರಿನ ಸಂಪರ್ಕದ ಕಾಮಗಾರಿಯನ್ನು ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಕಾಮಗಾರಿ ಮೊತ್ತದ ಸಹಿತ ಗುತ್ತಿಗೆದಾರರ ಸಹಿತ ಪೂರ್ಣ ವಿವರಗಳನ್ನು ಒದಗಿಸುವುದು ;

(ಈ) ಚಿಕ್ಕನಾಯಕನಹಳ್ಳಿ ಪುರಸಭೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಯೋಜನೆಯ ಅಡಿಯಲ್ಲಿ ಕೆರೆಯ ಅಭಿವೃದ್ಧಿ ಮತ್ತು ನೀರು ಸಂಗ್ರಹಕ್ಕೆ ಕಾಮಗಾರಿ ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಯಾವ ಯೋಜನೆಯ ಅಡಿಯಲ್ಲಿ ಕೈಗೊಳ್ಳಲಾಗಿದೆ ? (ಕಾಮಗಾರಿಯ ಪೂರ್ಣ ವಿವರಗಳನ್ನು ಒದಗಿಸುವುದು)

## ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ವ್ಯಾಪ್ತಿಯ ಬಡಾವಣೆಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೭೦೬ (೮೩೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ನಿಯಮಾನುಸಾರ ಇಲ್ಲಿಯವರೆಗೆ ಎಷ್ಟು ಬಡಾವಣೆಗಳನ್ನು ಅನುಮೋದನೆ ಮಾಡಿರುತ್ತದೆ ಅನುಮೋದನೆಗೊಳ್ಳದ ಅನಧಿಕೃತ ಬಡಾವಣೆಗಳು ಎಷ್ಟು; ಅನುಮೋದನೆಗೆ ಬಾಕಿ ಇರುವ ಅರ್ಜಿಗಳು ಎಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಯೋಜನಾ ಪ್ರಾಧಿಕಾರ ಅನಧಿಕೃತ ಬಡಾವಣೆಗಳ ಪಟ್ಟಿಯನ್ನು ಹೊಂದಿರುತ್ತದೆಯೇ, ಹೊಂದಿದ್ದಲ್ಲಿ ಪ್ರತಿಯನ್ನು ಒದಗಿಸುವುದು ;

(ಇ) ಯೋಜನಾ ಪ್ರಾಧಿಕಾರ ಅನಧಿಕೃತ ಬಡಾವಣೆಗಳ ಮೇಲೆ ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ; ಎಷ್ಟು ಪ್ರಕರಣಗಳನ್ನು ಅವರ ವಿರುದ್ಧ ದಾಖಲು ಮಾಡಿರುತ್ತದೆ ; (ಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಪ್ರಾಧಿಕಾರವು ಅನಧಿಕೃತ ಬಡಾವಣೆಗಳ ಭೂಪರಿವರ್ತನೆ ರದ್ದುಪಡಿಸಲು ಸಂಬಂಧಪಟ್ಟ ಕಂದಾಯ ಅಧಿಕಾರಿಗಳಿಗೆ ಪತ್ರ ಬರೆದಿರುತ್ತದೆಯೇ ; ಬರೆದಿದ್ದಲ್ಲಿ, ಅದರ ಮೇಲೆ ಆಗಿರುವ ಕ್ರಮಗಳೇನು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಉ) ಕಳೆದ ಎರಡು ವರ್ಷಗಳಲ್ಲಿ ಪ್ರಾಧಿಕಾರವು ಅನುಮೋದನೆ ಮಾಡಿರುವ ಬಡಾವಣೆಗಳು ಎಷ್ಟು ? (ವಸತಿ ಬಡಾವಣೆ ನಿರ್ಮಿಸಿರುವ ಸಂಘ ಸಂಸ್ಥೆಗಳ, ವ್ಯಕ್ತಿಗಳ ಮತ್ತು ಸ್ವತ್ತಿನ ಪೂರ್ಣ ವಿವರಗಳನ್ನು ದಿನಾಂಕ ಸಹಿತವಾಗಿ ಒದಗಿಸುವುದು)

## ಚಿಕ್ಕನಾಯಕನಹಳ್ಳಿ ಎಪಿಎಂಸಿ ಮಾರುಕಟ್ಟೆ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೭೦೭ (೮೩೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಇರುವ ಕೃಷಿ ಮಾರುಕಟ್ಟೆ ಕೇಂದ್ರಗಳ ಸಂಖ್ಯೆ ಎಷ್ಟು ; ಚಿಕ್ಕನಾಯಕನಹಳ್ಳಿ ಪ್ರಮುಖ ಎಪಿಎಂಸಿ ಮಾರುಕಟ್ಟೆಯನ್ನು ಯಾವಾಗ ಉಪ ಮಾರುಕಟ್ಟೆಯಾಗಿ ಪರಿವರ್ತಿಸಲಾಯಿತು ; ಇದಕ್ಕೆ ಕಾರಣಗಳೇನು ;

(ಆ) ಚಿಕ್ಕನಾಯಕನಹಳ್ಳಿ ಎಪಿಎಂಸಿ ಮಾರುಕಟ್ಟೆಯ ಒಟ್ಟು ವಿಸ್ತೀರ್ಣ ಎಷ್ಟು ; ಎಷ್ಟು ಮಳಿಗೆಗಳನ್ನು ಹೊಂದಿರುತ್ತದೆ ; ಎಪಿಎಂಸಿ ವಿಸ್ತೀರ್ಣದಲ್ಲಿ ಇತರೆ ಯಾವ ಯಾವ ಸರ್ಕಾರಿ ಕಛೇರಿಗಳಿಗೆ ಜಾಗವನ್ನು ನೀಡಲಾಗಿರುತ್ತದೆ ; (ವಿವರ ನೀಡುವುದು)

(ಇ) ಚಿಕ್ಕನಾಯಕನಹಳ್ಳಿ ಎಪಿಎಂಸಿ ಮಾರುಕಟ್ಟೆಯ ವಾರ್ಷಿಕ ಆದಾಯ ಎಷ್ಟು ; ಹುಳಿಯಾರು ಎಪಿಎಂಸಿ ಮಾರುಕಟ್ಟೆಯ ವಾರ್ಷಿಕ ಆದಾಯ ಎಷ್ಟು ; ಈ ಎರಡು ಮಾರುಕಟ್ಟೆಯಲ್ಲಿ ಇರುವ ನೌಕರರು ಎಷ್ಟು ; ಇದರಲ್ಲಿ ಖಾಯಂ ಸಿಬ್ಬಂದಿ ಎಷ್ಟು ; ದಿನಗೂಲಿ ಸಿಬ್ಬಂದಿ ಎಷ್ಟು ; (ವಿವರಗಳನ್ನು ಒದಗಿಸುವುದು)

(ಈ) ಚಿಕ್ಕನಾಯಕನಹಳ್ಳಿ ಎಪಿಎಂಸಿ ಮಾರುಕಟ್ಟೆಯಲ್ಲಿ ಪ್ರತಿ ಸೋಮವಾರ ರೈತ ಸಂತೆ ಮಾಡಲಾಗುತ್ತಿದೆಯೇ ; ಎಂದಿನಿಂದ ಇಲ್ಲಿ ರೈತ ಸಂತೆ ಪ್ರಾರಂಭಿಸಲಾಗಿದೆ ; ಇದರಿಂದ ಸಂಗ್ರಹ ಆಗುತ್ತಿರುವ ಶುಲ್ಕ/ತೆರಿಗೆ ಎಷ್ಟು ; (ಮೂರು ವರ್ಷಗಳ ಅಂಕಿ–ಅಂಶಗಳನ್ನು ನೀಡುವುದು)

(ಉ) ಸೋಮವಾರ ನಡೆಯುವ ರೈತ ಸಂತೆಯಲ್ಲಿ ಪುರಸಭೆಯವರು ತೆರಿಗೆ ಸಂಗ್ರಹ ಮಾಡಲು ಅವಕಾಶ ನೀಡಲಾಗಿದೆಯೇ ; ಎಪಿಎಂಸಿ ಗೆ ಮೊದಲು ಪುರಸಭೆ ಇಲ್ಲಿ ಸಂತೆ ಮಾಡುತ್ತಿದ್ದುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಪಿಎಂಸಿ ಯಿಂದ ಚಿಕ್ಕನಾಯಕನಹಳ್ಳಿ ಪುರಸಭೆಗೆ ಆದಾಯ ಕುಂಠಿತ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಜನವರಿ ೨೦೨೬ರಲ್ಲಿ ದಾವೂಸ್‌ನಲ್ಲಿ ನಡೆದ ಪ್ರಪಂಚ ಆರ್ಥಿಕ ವೇದಿಕೆಯ ವಾರ್ಷಿಕ ಕಾರ್ಯಕ್ರಮದ ಬಗ್ಗೆ

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೭೦೮ (೮೨೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಾನ್ಯ ಬೃಹತ್ ಕೈಗಾರಿಕಾ ಸಚಿವರು ಮತ್ತು ಹಿರಿಯ ಅಧಿಕಾರಿಗಳು ಪ್ರಪಂಚ ಆರ್ಥಿಕ ವೇದಿಕೆ (World Economic Forum) ದಾವೂಸ್ ನಲ್ಲಿ ಜನವರಿ ೨೦೨೬ರಂದು ಆಯೋಜಿಸಿದ್ದ ವಾರ್ಷಿಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರೆ, ಭಾಗಿಯಾಗಿದ್ದಲ್ಲಿ ಈ ಕಾರ್ಯಕ್ರಮದ ಮೂಲಕ ಎಷ್ಟು ವಿದೇಶಿ ಕಂಪನಿಗಳನ್ನು ರಾಜ್ಯದಲ್ಲಿ ಬಂಡವಾಳ ಹೂಡಲು ಆಹ್ವಾನಿಸಲಾಗಿದೆ ;

(ಆ) ಪ್ರಪಂಚ ಆರ್ಥಿಕ ವೇದಿಕೆ (World Economic Forum) ದಾವೂಸ್ ಕಾರ್ಯಕ್ರಮದ ಮೂಲಕ ಬಂಡವಾಳ ಉತ್ತೇಜಿಸಲು ಎಷ್ಟು ಸಭೆಗಳನ್ನು ಆಯೋಜಿಸಲಾಗಿತ್ತು ಯಾವ ಯಾವ ವಿದೇಶಿ ಕಂಪನಿಗಳು ರಾಜ್ಯದಲ್ಲಿ ಬಂಡವಾಳ ಹೂಡಲು ಆಸಕ್ತಿಯನ್ನು ವ್ಯಕ್ತಪಡಿಸಿರುತ್ತವೆ ; ಇದರಿಂದ ರಾಜ್ಯದ ಎಷ್ಟು ಮಂದಿಗೆ ಉದ್ಯೋಗ ಅವಕಾಶಗಳು ದೊರೆಯಬಹುದು ;

(ಇ) ರಾಜ್ಯದ ಬೃಹತ್ ಕೈಗಾರಿಕಾ ಇಲಾಖೆಯ ವಿದೇಶಿ ಬಂಡವಾಳ ಹೂಡಿಕೆಗೆ ರಾಜ್ಯದಲ್ಲಿ ಕೈಗೊಂಡಿರುವ ನೀತಿ ಮತ್ತು ಯೋಜನೆಯೇನು ; ಈ ಸಂಬಂಧ ಕಳೆದ ೩ ವರ್ಷಗಳಲ್ಲಿ ಎಷ್ಟು ಉನ್ನತ ಸಮಿತಿಯ ಸಭೆಗಳನ್ನು ಆಯೋಜಿಸಲಾಗಿರುತ್ತದೆ ; (ವಿವರಗಳನ್ನು ಒದಗಿಸುವುದು)

(ಈ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಹೂಡಿಕೆಯಾಗಿರುವ ವಿದೇಶಿ ಬಂಡವಾಳ ಎಷ್ಟು ಮತ್ತು ಇದರಿಂದ ರಾಜ್ಯದಲ್ಲಿ ಎಷ್ಟು ಉದ್ಯೋಗ ಅವಕಾಶಗಳು ಸೃಷ್ಟಿಯಾಗಿರುತ್ತದೆ ?

## MSME ವಲಯದಲ್ಲಿ ಉದ್ಯೋಗಾವಕಾಶಗಳನ್ನು ಒದಗಿಸುತ್ತಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೭೦೯ (೭೧೪) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರುದ್ಯೋಗಿ ಯುವಕರೊಂದಿಗೆ MSME ಗಳನ್ನು ಸಂಪರ್ಕಿಸಲು ರಾಜ್ಯ ಸರ್ಕಾರ ಸ್ಮಾರ್ಟ್ ಡಿಜಿಟಲ್ ಪ್ಲಾಟ್ ಫಾರ್ಮ್‌ಗಳನ್ನು ಹೇಗೆ ಬಳಸುತ್ತಿದೆ ;

(ಆ) ನೈಜ ಸಮಯದ ಉದ್ಯೋಗ ಹೊಂದಾಣಿಕೆಗಾಗಿ ಏಕೀಕೃತ "MSME ಉದ್ಯೋಗ ಪೋರ್ಟಲ್" ಅನ್ನು ರಚಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಇ) MSME ವಲಯದಲ್ಲಿ ಪರಿಶೀಲಿಸಿದ ಉದ್ಯೋಗಾವಕಾಶಗಳನ್ನು ಒದಗಿಸುವಲ್ಲಿ ಪ್ರಸ್ತುತ ಸರ್ಕಾರಿ ಮೊಬೈಲ್ ಅಪ್ಲಿಕೇಶನ್‌ಗಳು ಎಷ್ಟು ಪರಿಣಾಮಕಾರಿಯಾಗಿವೆ ;

(ಈ) MSME ಗಳಿಗೆ ಸಂಬಂಧಿಸಿದ ಡಿಜಿಟಲ್ ಉದ್ಯೋಗ ವೇದಿಕೆಗಳಿಂದ ಗ್ರಾಮೀಣ ಯುವಕರು ಸಮರ್ಪಕವಾಗಿ ಪ್ರಯೋಜನ ಪಡೆಯುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಉದ್ಯೋಗ ಸಂಬಂಧಿತ ಅಪ್ಲಿಕೇಶನ್‌ಗಳಲ್ಲಿ ಪಾರದರ್ಶಕತೆಯನ್ನು ಸರ್ಕಾರ ಹೇಗೆ ಖಚಿತಪಡಿಸಿಕೊಳ್ಳುತ್ತಿದೆ ಮತ್ತು ನಕಲಿ ಉದ್ಯೋಗ ಪಟ್ಟಿಗಳನ್ನು ಹೇಗೆ ತಡೆಯುತ್ತಿದೆ ;

(ಊ) ಸರ್ಕಾರಿ ಸ್ಮಾರ್ಟ್ ಪ್ಲಾಟ್ ಫಾರ್ಮ್‌ಗಳ ಮೂಲಕ ಸ್ಥಳೀಯ ನಿರುದ್ಯೋಗಿ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳುವ MSME ಗಳಿಗೆ ಯಾವ ಪ್ರೋತ್ಸಾಹ ಧನವನ್ನು ನೀಡಲಾಗುತ್ತದೆ ?

## ಕರ್ನಾಟಕದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ನಿರುದ್ಯೋಗ ಸಮಸ್ಯೆ ಪರಿಹರಿಸುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೭೧೦ (೭೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿ ನಿರುದ್ಯೋಗ ಹೆಚ್ಚಾಗಲು ಪ್ರಮುಖ ಕಾರಣಗಳೇನು ;

(ಆ) ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಿಂದ ನಿರುದ್ಯೋಗವನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ರಾಜ್ಯದಲ್ಲಿ ಉದ್ಯೋಗ ಸೃಷ್ಟಿಗೆ MSME ಗಳು ಮತ್ತು ದೊಡ್ಡ ಕೈಗಾರಿಕೆಗಳು ಹೇಗೆ ವಿಭಿನ್ನವಾಗಿ ಕೊಡುಗೆ ನೀಡುತ್ತಿವೆ ; (ಮಾಹಿತಿ ನೀಡುವುದು)

(ಈ) ರಾಜ್ಯದಿಂದ ಕೈಗಾರಿಕೆಗಳ ಮುಚ್ಚುವಿಕೆ ಅಥವಾ ಸ್ಥಳಾಂತರವು ಸ್ಥಳೀಯ ಉದ್ಯೋಗದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಉ) ರಾಜ್ಯದಲ್ಲಿ ಹೆಚ್ಚಿನ ಸ್ಥಳೀಯ ಉದ್ಯೋಗಗಳನ್ನು ಸೃಷ್ಟಿಸಲು ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಮತ್ತು ನಿರುದ್ಯೋಗ ಸಮಸ್ಯೆ ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೆಐಎಡಿಬಿ ಸ್ವಾಧೀನ ಪಡಿಸಿಕೊಂಡಿರುವ ಭೂಮಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೭೧೧ (೭೧೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೆಐಎಡಿಬಿ ವತಿಯಿಂದ ಎಷ್ಟು ಭೂಮಿಯನ್ನು ಸ್ವಾಧೀನ ಪಡಿಸಿಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೂಮಿಯನ್ನು ಸ್ವಾಧೀನ ಪಡಿಸಿಕೊಂಡ ರೈತರಿಗೆ ಪರಿಹಾರವನ್ನು ಪಾವತಿಸುವಲ್ಲಿ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ನ್ಯಾಯಾಲಯದ ಆದೇಶಗಳ ಪ್ರಕಾರ ಇನ್ನು ಎಷ್ಟು ಭೂ ಮಾಲೀಕರು ಹೆಚ್ಚಿನ ಪರಿಹಾರಕ್ಕಾಗಿ ಕಾಯುತ್ತಿದ್ದಾರೆ ಮಾಹಿತಿ ನೀಡುವುದು ;

(ಈ) ಸ್ವಾಧೀನ ಪಡಿಸಿಕೊಳ್ಳುವ ಮೊದಲು ರೈತರಿಗೆ ಸ್ಪಷ್ಟ ಮಾಹಿತಿಯನ್ನು ನೀಡಿ ಒಪ್ಪಿಗೆಯನ್ನು ಪಡೆಯಲಾಗುತ್ತಿದೆಯೇ ;

(ಉ) KIADB ಸ್ವಾಧೀನ ಪಡಿಸಿಕೊಂಡ ಎಷ್ಟು ಭೂಮಿಗಳು ಕಾನೂನು ವಿವಾದ ಅಥವಾ ನ್ಯಾಯಾಲಯದ ತಡಯಾಜ್ಞೆಯಲ್ಲಿವೆ;

(ಊ) KIADB ವಿವರಗಳಿಗಾಗಿ ಒಂದೇ ಆನ್‌ಲೈನ್ ಪೋರ್ಟಲ್‌ನ್ನು ರಚಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

# ಪುರಸಭೆ ಆಡಳಿತ ಇಲಾಖೆಯಲ್ಲಿ ರಸ್ತೆ ದುರಸ್ತಿ ಮತ್ತು ಒಳಚರಂಡಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೭೧೨ (೭೧೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪುರಸಭೆ ಆಡಳಿತ ಇಲಾಖೆಯಲ್ಲಿ ರಸ್ತೆ ದುರಸ್ತಿ ಮತ್ತು ಒಳಚರಂಡಿ ಯೋಜನೆಗಳಂತಹ ಅನೇಕ ಪುರಸಭೆ ಕೆಲಸಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಗರ ಪ್ರದೇಶಗಳಲ್ಲಿ ಕಳಪೆ ಕುಡಿಯುವ ನೀರು ಪೂರೈಕೆಯ ಬಗ್ಗೆ ಹೆಚ್ಚುತ್ತಿರುವ ದೂರುಗಳನ್ನು ಸರ್ಕಾರ ಹೇಗೆ ಪರಿಹರಿಸುತ್ತಿದೆ ; (ಮಾಹಿತಿ ನೀಡುವುದು)

(ಇ) ಪುರಸಭೆಯ ಟೆಂಡರ್‌ಗಳಲ್ಲಿ ಭ್ರಷ್ಟಾಚಾರ ಅಥವಾ ಅಕ್ರಮಗಳ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗುತ್ತಿದೆ ;

(ಈ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ಸಂಗ್ರಹವನ್ನು ಎಷ್ಟು ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಉ) ಮಳೆಗಾಲದಲ್ಲಿ ಪಟ್ಟಣಗಳಲ್ಲಿ ಪ್ರವಾಹ ಮತ್ತು ನೀರು ನಿಲ್ಲುವುದನ್ನು ತಡೆಯಲು ಸರ್ಕಾರದಿಂದ ಯಾವ ಕ್ರಮಗಳನ್ನು ಜಾರಿಗೆ ತರಲಾಗುತ್ತಿದೆ ;

(ಊ) ವೇಗವಾಗಿ ಬೆಳೆಯುತ್ತಿರುವ ಪಟ್ಟಣಗಳಲ್ಲಿ ಮೂಲಸೌಕರ್ಯವನ್ನು ನವೀಕರಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ?

# ರಾಜ್ಯದಲ್ಲಿ KUWSDB & KUIDFC ಇಲಾಖೆಗಳ ಮೂಲಸೌಕರ್ಯ ಯೋಜನೆಗಳ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೭೧೩ (೭೧೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ KUIDFC ಅಡಿಯಲ್ಲಿ ಬರುವ ಹಲವಾರು ನಗರ ಮೂಲಸೌಕರ್ಯ ಯೋಜನೆಗಳು ದೀರ್ಘಕಾಲದಿಂದ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) KUIDFC ಅನುದಾನಿತ ಕಾಮಗಾರಿಗಳಲ್ಲಿ ಕಳಪೆ ಗುಣಮಟ್ಟದ ನಿರ್ಮಾಣವನ್ನು ತಡೆಯಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ;

(ಇ) KUWSDB ಅಡಿಯಲ್ಲಿ ಬರುವ ಹಲವಾರು ನಗರ ಕುಡಿಯುವ ನೀರು ಸರಬರಾಜು ಯೋಜನೆಗಳು ಅಪೂರ್ಣ ಅಥವಾ ಕಾರ್ಯನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ ಕಾರಣವೇನು ;

(ಈ) ಕಳಪೆ ಗುಣಮಟ್ಟದ ನೀರಿನ ಪೈಪ್‌ಲೈನ್ ಮತ್ತು ಒಳಚರಂಡಿ ಕಾಮಗಾರಿಗಳಿಗೆ ಕಾರಣರಾದ ಗುತ್ತಿಗೆದಾರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) KUWSDB ಯೋಜನೆಗಳಲ್ಲಿ ಹೆಚ್ಚಿನ ಶೇಕಡವಾರು ನೀರಿನ ಸೋರಿಕೆ (ಆದಾಯ ರಹಿತ) ನೀರು ಇದೆಯೇ ; ಅದನ್ನು ಕಡಿಮೆ ಮಾಡಲು ಸರ್ಕಾರದಿಂದ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ?

## ದಾಳಿಂಬೆ ಬೆಳೆಗೆ ಪಕ್ಷಿ ನಿರೋಧಕ ಬಲೆಗಳನ್ನು ಅಳವಡಿಸಲು ಸಹಾಯಧನ ಮಂಜೂರಾತಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೪ (೮೦೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಬಯಲುಸೀಮೆ ಭಾಗದಲ್ಲಿ ಇತ್ತೀಚಿನ ವರ್ಷಗಳಲ್ಲಿ ದಾಳಿಂಬೆ ಬೆಳೆಯನ್ನು ಹೆಚ್ಚಾಗಿ ಬೆಳೆಯುತ್ತಿದ್ದು, ಇದಕ್ಕಾಗಿ ಪಕ್ಷಿ ನಿರೋಧಕ ಬಲೆಗಳನ್ನು ಅಳವಡಿಸಲು ಸಹಾಯಧನ ಕೋರಿ ಹೆಚ್ಚಿನ ಸಂಖ್ಯೆಯ ಅರ್ಜಿಗಳು ಸಲ್ಲಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಪಕ್ಷಿ ನಿರೋಧಕ ಬಲೆಗಳನ್ನು ಅಳವಡಿಸಲು ಸಹಾಯಧನ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಎಷ್ಟು ಜನರಿಗೆ ಎಷ್ಟು ಸಹಾಯಧನ ಒದಗಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಇನ್ನೂ ಎಷ್ಟು ಜನ ಅರ್ಜಿದಾರರಿಗೆ ಸಹಾಯಧನ ನೀಡಲು ಬಾಕಿ ಇದೆ ; ಬಾಕಿ ಇರಲು ಕಾರಣಗಳೇನು ಹಾಗೂ ಬಾಕಿ ಇರುವ ಅರ್ಜಿದಾರರಿಗೆ ಯಾವಾಗ ಸಹಾಯಧನ ಒದಗಿಸಲಾಗುವುದು ?

## ರಾಜ್ಯದಲ್ಲಿ ಹೊಸದಾಗಿ ಕಿರು ವಿಮಾನ ನಿಲ್ದಾಣ ಮಂಜೂರಾತಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೫ (೮೦೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಕಿರು ವಿಮಾನ ನಿಲ್ದಾಣಗಳಿವೆ ; ಈ ಪೈಕಿ ಎಷ್ಟು ಕಿರು ವಿಮಾನ ನಿಲ್ದಾಣಗಳು ಕಾರ್ಯಾಚರಿಸುತ್ತಿವೆ ; (ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಿರು ವಿಮಾನ ನಿಲ್ದಾಣಗಳ ಅವಶ್ಯಕತೆ ಇದೆ ; ಈ ಕುರಿತು ಸರ್ಕಾರ ಮಾಹಿತಿ ಸಂಗ್ರಹಿಸಿದೆಯೇ : (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಎಷ್ಟು ಕಿರು ವಿಮಾನ ನಿಲ್ದಾಣಗಳ ಸ್ಥಾಪನೆಗೆ ಮಂಜೂರಾತಿ ನೀಡಿದೆ ; ಈ ವಿಮಾನ ನಿಲ್ದಾಣಗಳಿಗೆ ಅಗತ್ಯ ಭೂಮಿ ಹಸ್ತಾಂತರ ಆಗಿದೆಯೇ ? (ವಿವರ ನೀಡುವುದು)

## ಚಿಕ್ಕಮಗಳೂರು ನಗರದಲ್ಲಿ ನಿರ್ಮಿಸುತ್ತಿರುವ ಒಳಚರಂಡಿ ಕಾಮಗಾರಿ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೬ (೮೦೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ನಗರಕ್ಕೆ ಒಳಚರಂಡಿ ನಿರ್ಮಿಸುವ ಕಾಮಗಾರಿ ಮಂಜೂರಾಗಿದ್ದು ಯಾವಾಗ ; ಕಾಮಗಾರಿ ಪೂರ್ಣಗೊಂಡಿದೆಯೇ ; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ ;

(ಆ) ಈ ಕಾಮಗಾರಿಗೆ ಮಂಜೂರಾಗಿರುವ ಮತ್ತು ಬಿಡುಗಡೆಯಾಗಿರುವ ಅನುದಾನ ಎಷ್ಟು ; ಮಂಜೂರಾಗಿರುವ ಅನುದಾನದಲ್ಲಿ ಈವರೆಗೆ ಎಷ್ಟು ವೆಚ್ಚವಾಗಿದೆ ;

(ಇ) ಬಾಕಿ ಇರುವ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ಹಾಗೂ ಕಾಮಗಾರಿ ಪೂರ್ಣಗೊಂಡ ನಂತರ ಇದರ ನಿರ್ವಹಣೆಯನ್ನು ಯಾರು ಮಾಡುತ್ತಾರೆ ?

## ಎಸಿಸಿ ಕಂಪನಿಗೆ ಲೆಟರ್ ಆಫ್ ಇಂಟೆಂಟ್ ನೀಡಿರುವ ಕುರಿತು

**ಶ್ರೀ ಎನ್ ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೭ (೭೬೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೂ. ೮೫೦ ಕೋಟಿ ಬಾಕಿ ಇದ್ದರೂ ಎಸಿಸಿ ಕಂಪನಿಗೆ ಲೆಟರ್ ಆಫ್ ಇಂಟೆಂಟ್ ವಿಸ್ತರಿಸಲು ಕಾರಣವೇನು ;

(ಆ) ಕಣ್ಣೂರು ವಾಡಿ ಸುಣ್ಣದಕಲ್ಲು ಬ್ಲಾಕ್‌ಗೆ ಗಣಿ ಅಭಿವೃದ್ಧಿ ಮತ್ತು ಉತ್ಪಾದನಾ ಒಪ್ಪಂದ ಕಾರ್ಯಗತಗೊಳಿಸಲು ನ್ಯಾಯಾಲಯದ ಮುಂದೆ ಪ್ರಕರಣ ಬಾಕಿ ಇದ್ದಾಗಲೂ ಶಿಫಾರಸ್ಸು ಮಾಡಲು ಕಾರಣವೇನು ; (ವಿವರ ನೀಡುವುದು)

(ಇ) ೨೦೨೦ರ ಅಕ್ಟೋಬರ್ ನ ಅಧಿಸೂಚನೆಯ ಪ್ರಕಾರ ೨ ವರ್ಷಗಳ ಕಾಲ ಅಕ್ರಮ ಗಣಿಗಾರಿಕೆ ನಡೆಸಿದ ಕಂಪನಿಗೆ ಲೆಟರ್ ಆಫ್ ಇಂಟೆಂಟ್ ನೀಡಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಆರೋಗ್ಯಾಧಿಕಾರಿಗಳ ಕುರಿತು

**ಶ್ರೀ ಎನ್ ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೮ (೭೬೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆರೋಗ್ಯಾಧಿಕಾರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಆರೋಗ್ಯಾಧಿಕಾರಿಗಳ ಕರ್ತವ್ಯ ಮತ್ತು ಜವಾಬ್ದಾರಿಗಳೇನು ; (ವಿವರ ನೀಡುವುದು)

(ಇ) ಆರೋಗ್ಯಾಧಿಕಾರಿಗಳು ವೈದ್ಯಕೀಯ ಶಿಕ್ಷಣವನ್ನು ಹೊರತುಪಡಿಸಿ ಯಾವ ರೀತಿಯ ತರಬೇತಿಯನ್ನು ಪಡೆದಿರುತ್ತಾರೆ ; (ವಿವರ ನೀಡುವುದು)

(ಈ) ಆರೋಗ್ಯಾಧಿಕಾರಿಗಳು ಆಡಳಿತಾತ್ಮಕ ಹಾಗೂ ಕಾನೂನಾತ್ಮಕ ತರಬೇತಿಯನ್ನು ಪಡೆದಿರುತ್ತಾರೆಯೇ ; ಇಲ್ಲವಾದಲ್ಲಿ ಕಾನೂನಾತ್ಮಕ ಮತ್ತು ಆಡಳಿತಾತ್ಮಕ ವಿಷಯಗಳನ್ನು ಒಳಗೊಂಡ ಟ್ರೇಡ್ ಲೈಸೆನ್ಸ್ ನೀಡುವ ಅಧಿಕಾರ ಯಾವ ನಿಯಮದ ಅನ್ವಯ ಆರೋಗ್ಯಾಧಿಕಾರಿಗಳಿಗೆ ನೀಡಲಾಗಿದೆ ? (ವಿವರ ನೀಡುವುದು)

## ಹಟ್ಟಿ ಚಿನ್ನದ ಗಣಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೯ (೭೬೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಕಾರ್ಯದರ್ಶಿ ನೇತೃತ್ವದ ಪುನರ್ ಪರೀಶಿಲನಾ ಸಮಿತಿಯ ಮುಂದೆ ಪರಿಶೀಲನೆಗಾಗಿ ಎಷ್ಟು ಅರ್ಜಿಗಳು ಬಾಕಿ ಇವೆ ; ಯಾವ ದಿನಾಂಕದಿಂದ ಬಾಕಿ ಇವೆ ; ಯಾವ ಯಾವ ಕಂಪನಿಯ ಅರ್ಜಿಗಳು ಬಾಕಿ ಇವೆ ; ಎಷ್ಟು ಅರ್ಜಿಗಳು ತಿರಸ್ಕರಿಸಲ್ಪಟ್ಟಿವೆ ; (ವಿವರ ನೀಡುವುದು)

(ಆ) ತೆಲಂಗಾಣ ಮೂಲದ ರಿಷಿಕಾ ಕೆಮಿಕಲ್ಸ್ ಹಾಗೂ ಮುಂಬೈ ವಿಳಾಸದ ಶಕ್ತಿ ಫೋರ್ಜ್ ಇಂಡಿಯಾ ಕಂಪನಿಗಳು ಯಾವ ದಿನಾಂಕದಂದು ಪುನರ್ ಪರಿಶೀಲನಾ ಅರ್ಜಿಗಳನ್ನು ಸಲ್ಲಿಸಿವೆ ; ಸದರಿ ಅರ್ಜಿಗಳು ಯಾವ ದಿನಾಂಕದಂದು ಇತ್ಯರ್ಥವಾಗಿವೆ ; ಯಾವ ಆಧಾರದಲ್ಲಿ ಇತ್ಯರ್ಥವಾಗಿವೆ ; (ವಿವರ ನೀಡುವುದು)

(ಇ) ಹಟ್ಟಿ ಚಿನ್ನದ ಗಣಿಯು ೬೫ ಎಂ.ಎಂ ಫೋರ್ಸ್ಟ್ ಸ್ಟೀಲ್ ಗ್ರೆಂಡಿಂಗ್ ಮೀಡಿಯಾ ಬಾಲ್ಸ್ ಸರಬರಾಜಿಗೆ ಎಷ್ಟು ಮೊತ್ತದ ಟೆಂಡರ್

ಕರೆಯಲಾಗಿತ್ತು, ಈ ಅನರ್ಹ ಕಂಪನಿಗಳಿಗೆ ಟೆಂಡರ್ ಒದಗಿಸಲು ಅನುಸರಿಸಿರುವ ಮಾನದಂಡಗಳೇನು ? (ವಿವರ ನೀಡುವುದು)

## ಧಾರ್ಮಿಕ ಕೈಗಾರಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೦ (೭೬೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರ್ಮಿಕ ಕೈಗಾರಿಕೆ ಎಂದರೇನು ; ರಾಜ್ಯದಲ್ಲಿ ಇದುವರೆಗೆ ಧಾರ್ಮಿಕ ಕೈಗಾರಿಕೆಗೆಂದು ಎಷ್ಟು ಎಕರೆ ಭೂಮಿಯನ್ನು ಕೆ.ಐ.ಡಿ.ಬಿ ಮುಖಾಂತರ ಉದ್ಯಮಿಗಳಿಗೆ ಗುತ್ತಿಗೆ/ ಮಾರಾಟದ ಮೂಲಕ ವಿತರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಉದ್ದೇಶಕ್ಕೆ ಕೆ.ಐ.ಡಿ.ಬಿ ಮುಖಾಂತರ ಉದ್ಯಮಿಗಳಿಗೆ ಗುತ್ತಿಗೆ/ ಮಾರಾಟದ ಮೂಲಕ ವಿತರಿಸಲಾಗಿದೆಯೇ ; ಆ ಉದ್ದೇಶಕ್ಕೆ ಬಳಸಿಕೊಳ್ಳದ ಎಷ್ಟು ಎಕರೆ ಭೂಮಿಯನ್ನು ಕೆ.ಐ.ಡಿ.ಬಿ ವತಿಯಿಂದ ಹಿಂದಕ್ಕೆ ಪಡೆದುಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ದಕ್ಷಿಣ ತಾಲ್ಲೂಕು ಉತ್ತರಹಳ್ಳಿ ಹೋಬಳಿ ದೊಡ್ಡ ಕಲ್ಲಸಂದ್ರ ಗ್ರಾಮದ ಸರ್ವೆ ನಂ ೫೫/೧(ಪಿ), ೫೫/೨(ಪಿ), ೫೬, ೫೭, ೫೮, ೫೯(ಪಿ) ಮತ್ತು ೬೦(ಪಿ) ಯಲ್ಲಿನ ೨೪ ಎಕರೆ ಜಾಗವನ್ನು ಯಾವ ಉದ್ದೇಶಕ್ಕಾಗಿ ಯಾರಿಗೆ ಕೆ.ಐ.ಡಿ.ಬಿ ಮುಂಖಾತರ ವಿತರಿಸಲಾಗಿತ್ತು ;

(ಈ) ಪ್ರಸ್ತುತ ಆ ಜಾಗದಲ್ಲಿ ಯಾವ ಕೈಗಾರಿಕೆ ಪ್ರಾರಂಭಗೊಂಡಿದೆ ; ಇದರಿಂದ ಎಷ್ಟು ಕನ್ನಡಗರಿಗೆ ಉದ್ಯೋಗ ದೊರೆತಿದೆ ; ಈ ಕೈಗಾರಿಕೆಯ ಉತ್ಪನ್ನಗಳೇನು ;

(ಉ) ಸದರಿ ಜಾಗವನ್ನು ಯಾವ ಉದ್ದೇಶಕ್ಕಾಗಿ ನೀಡಲಾಗಿತ್ತೋ ಆ ಉದ್ದೇಶಕ್ಕೆ ಬಳಸಿಕೊಳ್ಳದಿದ್ದಲ್ಲಿ ಸದರಿ ಜಾಗವನ್ನು ಕೆ.ಐ.ಡಿ.ಬಿ ಹಿಂದಕ್ಕೆ ಪಡೆದುಕೊಳ್ಳಲು ಯಾವ ಕ್ರಮ ಕೈಗೊಂಡಿದೆ ; ಈ ಕುರಿತು ಯಾವಾಗ ನೋಟೀಸ್ ನೀಡಲಾಗಿದೆ ?

## ಮರಳು ಮಾಫಿಯ ಕುರಿತು

**ಶ್ರೀ ಎಸ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೧ (೭೭೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಲ್ಲಿ ಮರಳು ಮಾಫಿಯಾದ ದಾಳಿಯಿಂದ ಮೃತರಾದ ಅಧಿಕಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಕಂಪನಿಗಳಿಗೆ ಅಥವಾ ವ್ಯಕ್ತಿಗಳಿಗೆ ಮರಳು ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಹೆಸರಿನೊಂದಿಗೆ ಸಮಗ್ರ ವಿವರ ನೀಡುವುದು)

(ಇ) ಕಳೆದ ಎರಡು ವರ್ಷದಲ್ಲಿ ಅಕ್ರಮ ಗಣಿಗಾರಿಕೆಯ ಎಷ್ಟು ಪ್ರಕರಣಗಳು ದಾಖಲಾಗಿವೆ ; ಅಕ್ರಮ ಗಣಿಗಾರಿಕೆಯ ವಿರುದ್ಧ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ೨೦೨೫ ರಲ್ಲಿ ಜರುಗಿದ ಜಾಗತಿಕ ಹೂಡಿಕೆದಾರರ ಸಮಾವೇಶನದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೭೨೨ (೮೪೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಫೆಬ್ರವರಿ–೨೦೨೫ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಎಷ್ಟು ದೇಶ ಮತ್ತು ವಿದೇಶಗಳಿಂದ ಉದ್ದಿಮೆದಾರರು ಭಾಗವಹಿಸಿದ್ದರು ; ದೇಶ–ವಿದೇಶಗಳ ಉದ್ದಿಮೆದಾರರ ಪ್ರತ್ಯೇಕ ಮಾಹಿತಿ ನೀಡುವುದು ;

(ಆ) ಭಾಗವಹಿಸಿದ ಉದ್ದಿಮೆದಾರರಲ್ಲಿ ಎಷ್ಟು ಉದ್ದಿಮೆದಾರರು ಉದ್ಯಮ ಪ್ರಾರಂಭಿಸಲು ಒಡಂಬಡಿಕೆ ಮಾಡಿಕೊಂಡಿದ್ದಾರೆ ;

(ಇ) ಉದ್ದಿಮೆದಾರರು ಯಾವ ಯಾವ ಸ್ಥಳ ಹಾಗೂ ಕ್ಷೇತ್ರಗಳಲ್ಲಿ ಎಷ್ಟು ಪ್ರಮಾಣದ ಬಂಡಾವಾಳ ಹೂಡಿಕೆಗೆ ಸರ್ಕಾರದ ಜೊತೆಗೆ ಒಡಂಬಡಿಕೆ ಮಾಡಿಕೊಂಡಿದ್ದಾರೆ ;

(ಈ) ಹೊಸದಾಗಿ ಪ್ರಾರಂಭವಾಗಲಿರುವ ಉದ್ದಿಮೆಗಳು ಎಷ್ಟು ಅವಧಿಯಲ್ಲಿ ತಮ್ಮ ತಮ್ಮ ಘಟಕಗಳನ್ನು ಪ್ರಾರಂಭಸುವ ಬಗ್ಗೆ ಭರವಸೆ ನೀಡಿದ್ದಾರೆ ; ಮತ್ತು ಈ ಉದ್ದಿಮೆದಾರರಿಗೆ ಯಾವ ಯಾವ ರೀತಿಯಲ್ಲಿ ಪ್ರೋತ್ಸಾಹದಾಯಕ ಅನುಕೂಲತೆಗಳನ್ನು ಮಾಡಿಕೊಡುವ ಬಗ್ಗೆ ಸರ್ಕಾರ ಭರವಸೆ ನೀಡಿದೆ ; (ವಿವರ ನೀಡುವುದು)

(ಉ) ಹೊಸದಾಗಿ ಪ್ರಾರಂಭವಾಗಲಿರುವ ವಿವಿಧ ರೀತಿಯ ಉದ್ದಿಮೆಗಳಿಂದ ನಮ್ಮ ಭಾಗದ ಯುವ ಪದವೀಧರರಿಗೆ ಎಷ್ಟು ಉದ್ಯೋಗಾವಕಾಶ ಲಭ್ಯವಾಗಿರುವುದು ; (ಮಾಹಿತಿ ನೀಡುವುದು)

(ಊ) ಫೆಬ್ರವರಿ–೨೦೨೫ ಜಾಗತೀಕ ಹೂಡಿಕೆದಾರರ ಸಮಾವೇಶ ಎಷ್ಟು ದಿನಗಳವರೆಗೆ ಜರುಗಿದೆ ಮತ್ತು ಅದಕ್ಕೆ ಖರ್ಚು ಆದ ಹಣ ಎಷ್ಟು ; (ಮಾಹಿತಿ ನೀಡುವುದು)

(ಋ) ಫೆಬ್ರವರಿ–೨೦೨೫ರ ಜಾಗತಿಕ ಹೂಡಿಕೆದಾರರ ಸಮಾವೇಶದ ಪೂರ್ವ ಈ ಹಿಂದೆ ಯಾವಾಗ ಹಾಗೂ ಯಾವ ಸ್ಥಳದಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶ ನಡೆದಿತ್ತು ; ಹಿಂದಿನ ಹೂಡಿಕೆದಾರರು ಸಮಾವೇಶದಲ್ಲಿ ಎಷ್ಟು ಉದ್ದಿಮೆದಾರರು ಉದ್ಯಮ

ಪ್ರಾರಂಭಿಸಲು ಒಡಂಬಡಿಕೆ ಮಾಡಿಕೊಂಡಿದ್ದರು ; ಆ ಪೈಕಿ ಇಂದಿನವರೆಗೆ ಎಷ್ಟು ಉದ್ದಿಮೆಗಳು ಪ್ರಾರಂಭವಾಗಿವೆ ? (ಸಂಪೂರ್ಣ ವಿವರ ನೀಡುವುದು)

## ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಮೆಗಳನ್ನು ಸ್ಥಾಪಿಸುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೩ (೭೭೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸಭೆ ವ್ಯಾಪ್ತಿಯ ಸಾರ್ವಜನಿಕ ಸ್ಥಳಗಳಾದ ರಸ್ತೆ, ವೃತ್ತಗಳಲ್ಲಿ ಪ್ರತಿಮೆ ಪುತ್ಥಳಿಗಳನ್ನು ಇರಿಸಲು, ಪ್ರತಿಷ್ಠಾಪನೆ ಮಾಡಲು ಇರುವ ನಿಯಮಗಳೇನು ;

(ಆ) ಬಳ್ಳಾರಿ ನಗರದ ವಾಲ್ಮೀಕಿ (ಎಸ್‌ಪಿ) ವೃತ್ತದಲ್ಲಿ ವಾಲ್ಮೀಕಿ ಪುತ್ಥಳಿಯನ್ನು ಪ್ರತಿಷ್ಠಾಪನೆ ಮಾಡಲು ಅನುಮತಿ ಪಡೆಯಲಾಗಿದೆಯೇ ; ಪಡೆದಿದ್ದಲ್ಲಿ, ಅವುಗಳ ಆದೇಶ ಪ್ರತಿಗಳೊಂದಿಗೆ ಮಾಹಿತಿ ಒದಗಿಸುವುದು ;

(ಇ) ಅನುಮತಿ ಪಡೆಯಲು ಸಂಬಂಧಿಸಿದ ಇಲಾಖೆಗಳು ಈವರೆಗೆ ನಡೆಸಿರುವ ಪ್ರಯತ್ನಗಳೇನು ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಅನುಮತಿಯೇ ಇಲ್ಲದೇ ಪುತ್ಥಳಿ ಪ್ರತಿಷ್ಠಾಪನೆ ಮಾಡಿದ್ದರೆ, ಅದು ಕಾನೂನು ಬಾಹಿರ ಅಲ್ಲವೇ ; ಹಾಗಿದ್ದಲ್ಲಿ, ಅದರ ವಿರುದ್ಧ ಸರ್ಕಾರ ತೆಗೆದುಕೊಂಡ ಕಾನೂನು ಕ್ರಮಗಳೇನು ;

(ಉ) ಇದಕ್ಕೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮಗಳನ್ನು ಯಾವಾಗ ಕೈಗೊಳ್ಳಲಾಗುತ್ತದೆ ? (ವಿವರಗಳನ್ನು ಒದಗಿಸುವುದು)

## MOU ಮಾಡಿಕೊಂಡ ಕಂಪನಿಗಳ ಹೂಡಿಕೆ ಮಾಡದಿರುವ ಬಗ್ಗೆ

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೪ (೭೨೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಿಂದ ೨೦೨೫ ರವರೆಗೆ ಎಷ್ಟು ಕಂಪನಿಗಳು Expression of Interest ಮತ್ತು MOU ಮಾಡಿಕೊಂಡ ಕಂಪನಿಗಳಾವುವು ಹಾಗೂ ಸದರಿ ಕಂಪನಿಗಳಿಗೆ ನೀಡಿದ ಭೂಮಿ ಪ್ರಮಾಣವೆಷ್ಟು; ಎಲ್ಲಿ ನೀಡಲಾಗಿದೆ ; (ಕಂಪನಿವಾರು ಮಾಹಿತಿ ನೀಡುವುದು)

(ಆ) Expression of Interest ಮತ್ತು MOU ಹಾಗೂ ಹೂಡಿಕೆ ಮಾಡದಿರಲು ಕಾರಣಗಳೇನು ; (ಕಂಪನಿವಾರು ಮಾಹಿತಿ ಒದಗಿಸುವುದು)

(ಇ) MOU ಮಾಡಿಕೊಳ್ಳದ ಕಂಪನಿಗಳಿಗೆ ನೀಡಿದ ಭೂಮಿಯನ್ನು ಎಷ್ಟು ಭೂಮಿಯನ್ನು ಹಿಂಪಡೆದುಕೊಂಡಿದೆ ಮತ್ತು ಸದರಿ ಭೂಮಿಯನ್ನು ಯಾವ ಉದ್ದೇಶಕ್ಕೆ ಬಳಸಿದೆ ಹಾಗೂ ಇನ್ನೂ ಎಷ್ಟು ಪ್ರಮಾಣದ ಭೂಮಿಯನ್ನು ಹಿಂಪಡೆಯಲು ಬಾಕಿ ಇದೆ ? (ಕೈಗಾರಿಕಾ ಪ್ರದೇಶವಾರು ಮತ್ತು ಕಂಪನಿವಾರು ಮಾಹಿತಿ ಒದಗಿಸುವುದು)

## ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಸ್ಥಿತಿಗತಿಗಳ ಬಗ್ಗೆ

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೫ (೭೩೦) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳೆಷ್ಟು ಈ ಸಮಿತಿಗಳ ಒಟ್ಟು ವಾರ್ಷಿಕ ವಹಿವಾಟು ಎಷ್ಟು ; ಇವುಗಳಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು ;

(ಆ) ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳಲ್ಲಿ ಸ್ವಚ್ಛತೆ ಮೇಲುಸ್ತುವಾರಿ ಮಾಡುವವರು ಯಾರು ; ನಿರ್ವಹಣೆಗೆ ವ್ಯಯಿಸುತ್ತಿರುವ ಮೊತ್ತವೆಷ್ಟು ; ಈ ಬಗ್ಗೆ ಸರ್ಕಾರದ ನಿಯಮವೇನು ;

(ಇ) ರಾಜ್ಯದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಅಂಗಡಿಗಳನ್ನು ಹರಾಜು ಮಾಡುವ ಪ್ರಕ್ರಿಯೆಯ ಸಂಪೂರ್ಣ ವಿವರ ನೀಡುವುದು ; ರಾಜ್ಯದ ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಅಂಗಡಿಗಳ ಹರಾಜು ಮಾಡಲು ಬಾಕಿ ಇವೆ ; ಬಾಕಿಗೆ ಕಾರಣಗಳೇನು ;

(ಈ) ಮಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣ ಅಭಿವೃದ್ಧಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಭಿವೃದ್ಧಿಯಾಗದಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಅಭಿವೃದ್ಧಿ ಮಾಡಲಾಗುವುದು ?

## ಕಲಬುರಗಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಅನಧಿಕೃತ ಆಸ್ತಿಗಳು, ತೆರಿಗೆ ವಿನಾಯಿತಿ ಹಾಗೂ ಇ–ಆಸ್ತಿಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೭೨೬ (೭೫೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಅನಧಿಕೃತ ಆಸ್ತಿಗಳು ಯಾವುವು ; (ವಾರ್ಡ್‌ವಾರು ಪಟ್ಟಿ ನೀಡುವುದು)

(ಆ) ಸದರಿ ಆಸ್ತಿಗಳಿಂದ ವಸೂಲಿ ಮಾಡಿರುವ ದಂಡಗಳ ವಿವರ ಹಾಗೂ ಕೈಗೊಂಡಿರುವ ಕ್ರಮಗಳ ವಿವರ ನೀಡುವುದು ;

(ಇ) ಪಾಲಿಕೆಯು ವ್ಯಾಪ್ತಿಯಲ್ಲಿ Karnataka Municipal Corporations Act ೧೯೭೬ Section ೧೧೦ ರ ನಿಯಮದನ್ವಯ ತೆರಿಗೆ ವಿನಾಯಿತಿ ಪಡೆಯುತ್ತಿರುವ ಹಾಗೂ ವಿನಾಯಿತಿಯಿಂದ ವಂಚಿತವಾಗಿರುವ ಸಂಸ್ಥೆಗಳ ವಿವರಗಳೇನು ; (ವಲಯವಾರು ಮಾಹಿತಿ ನೀಡುವುದು)

(ಈ) ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಹಣಕಾಸು ವರ್ಷ ೨೦೨೪-೨೫ ಹಾಗೂ ಈ ಸಾಲಿನಿಂದ ಇಲ್ಲಿಯವರೆಗೆ ಅನಧಿಕೃತ ಆಸ್ತಿಗಳಿಗೆ ವಿಧಿಸಿರುವ ದಂಡ ಶುಲ್ಕಗಳ ವಿವರಗಳೇನು ; (ವಲಯವಾರು ಮತ್ತು ಆಸ್ತಿವಾರು ಮಾಹಿತಿ ನೀಡುವುದು)

(ಉ) ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಷ್ಟು ಆಸ್ತಿಗಳಿಗೆ ಇಲ್ಲಿಯವರೆಗೆ ಇ-ಖಾತೆ ಪ್ರಮಾಣ ಪತ್ರವನ್ನು ನೀಡಲಾಗಿದೆ ? (ವಲಯವಾರು ಆಸ್ತಿಗಳ ಸಮೇತ ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರ ಬಗ್ಗೆ ಮತ್ತು ಕಳೆದ ೩ ತಿಂಗಳಲ್ಲಿ ವಿತರಿಸಿರುವ ಕಟ್ಟಡ ಪರವಾನಗಿಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೭೨೭ (೭೬೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರು ಎಷ್ಟು ; (ಹುದ್ದೆ ಮತ್ತು ಅವರ ಜವಾಬ್ದಾರಿ ಸಮೇತ ವಿವರ ನೀಡುವುದು ಹಾಗೂ ವಲಯವಾರು ಮಾಹಿತಿ ನೀಡುವುದು)

(ಆ) ಪಾಲಿಕೆ ಕಛೇರಿಯಲ್ಲಿ ಕಳೆದ ೫ ವರ್ಷಕ್ಕಿಂತಲೂ ಹೆಚ್ಚಿನ ಕಾಲ ಒಂದೇ ಹುದ್ದೆಯಲ್ಲಿ ಮತ್ತು ಒಂದೇ ವಲಯದ ಜವಾಬ್ದಾರಿಯಲ್ಲಿ

ಕಾರ್ಯನಿರ್ವಹಿಸುತ್ತಿರುವ ನೌಕರರ ಪಟ್ಟಿ ಒದಗಿಸುವುದು ; (ಸರ್ಕಾರಿ ಗುತ್ತಿಗೆ ಹಾಗೂ ಹೊರಗುತ್ತಿಗೆ)

(ಇ) ಒಂದೇ ಹುದ್ದೆಯಲ್ಲಿ ಹಾಗೂ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುವ ನೌಕರರಿಂದ ಭ್ರಷ್ಟಾಚಾರ ಹಾಗೂ ಅಧಿಕಾರದ ದುರುಪಯೋಗದ ಬಗ್ಗೆ ಸಾರ್ವಜನಿಕ ವಲಯದಲ್ಲಿ ದೂರುಗಳು ಹೆಚ್ಚಾಗುತ್ತಿದ್ದು ಈ ನೌಕರರ ಸ್ಥಳಾಂತರದ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕಳೆದ ೩ ತಿಂಗಳಲ್ಲಿ ಪಾಲಿಕೆಯ ವ್ಯಾಪ್ತಿಯಲ್ಲಿ ವಿತರಿಸಿರುವ ಕಟ್ಟಡ ನಿರ್ಮಾಣ ಪರವಾನಗಿಗಳು ಎಷ್ಟು ? (ವಲಯವಾರು ಮಾಹಿತಿಯೊಂದಿಗೆ ಪ್ರತಿಗಳನ್ನು ನೀಡುವುದು)

## ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಆಸ್ತಿಗಳಿಗೆ ಇ–ಆಸ್ತಿ ಪ್ರಮಾಣ ಪತ್ರ ನೀಡುವಲ್ಲಿ ಇರುವ ನಿಯಮಗಳು ಹಾಗೂ ಕಾರ್ಯವಿಧಾನಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೭೨೮ (೭೬೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಸ್ತಿಯಲ್ಲಿ ೫೦ ವರ್ಷದ ಕಟ್ಟಡ ಪರವಾನಿಗೆ ಇಲ್ಲದೆ ಕಟ್ಟಡ ನಿರ್ಮಾಣವಾಗಿದ್ದಲ್ಲಿ (ಅಧಿಕೃತ ಆಸ್ತಿ ದಾಖಲೆಗಳು ಇದ್ದಲ್ಲಿ) ಆದರೆ ಇಲ್ಲಿಯವರೆಗೂ ಆಸ್ತಿ ತೆರಿಗೆ ಪಾವತಿಸಿದ್ದಲ್ಲಿ, ಇಂತಹ ಆಸ್ತಿಗಳಿಗೆ 'ಎ' ಖಾತೆ ನೀಡಬಹುದೇ ;

(ಆ) ಆಸ್ತಿಯ ಅಧಿಕೃತ ಮಾರಾಟ ಕರಾರು ಪತ್ರವಿದ್ದು ಕಟ್ಟಡ ಪರವಾನಿಗೆ ಇಲ್ಲದೆ ನಿರ್ಮಾಣವಾಗಿದ್ದಲ್ಲಿ, ಕಟ್ಟಡ ಸೀಮಿತ 'ಬಿ' ಖಾತೆ ನೀಡಲಾಗುವುದೇ ಅಥವಾ ಸಂಪೂರ್ಣ ಆಸ್ತಿಗೆ 'ಬಿ' ಖಾತೆ ನೀಡಲಾಗುವುದೇ ;

(ಇ) ಅನಧಿಕೃತ ಆಸ್ತಿಗೆ ದಂಡ ಶುಲ್ಕ ವಿಧಿಸಿ 'ಬಿ' ಖಾತೆ ನೀಡಬಹುದೆ ; ಈ ಕುರಿತು ಇರುವ ಕಾರ್ಯ ವಿಧಾನಗಳು ಯಾವುವು ;

(ಈ) ಇ-ಆಸ್ತಿ ಕಾರ್ಯ ವಿಧಾನದಲ್ಲಿ ದಂಡ ಕಟ್ಟಿಸಿಕೊಳ್ಳಲು ಅವಕಾಶವಿದೆಯೇ ; ( ಈ ಕುರಿತು ಇರುವ ಸುತ್ತೋಲೆಗಳನ್ನು ನೀಡುವುದು)

(ಉ) ಆಸ್ತಿಯ ಒಟ್ಟು ವಿಸ್ತೀರ್ಣದಲ್ಲಿ ಕಟ್ಟಡ ಆವರಿಸಿರುವ ಜಾಗ ಹೊರತುಪಡಿಸಿ ಉಳಿದ ಖಾಲಿ ಜಾಗದ ಬಗ್ಗೆ ಆಸ್ತಿ ತೆರಿಗೆ ಎಂದಿನಿಂದ ವಿಧಿಸಬಹುದಾಗಿದೆ ; ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 'ಬಿ' ಖಾತೆ ನೀಡಲು ಯೋಗ್ಯವಿರುವ ಆಸ್ತಿಗೆ 'ಬಿ' ಖಾತೆ ನೀಡುವ ಸಲುವಾಗಿ ಖಾಲಿ ಜಾಗ ಸೇರಿಸಿ ಗರಿಷ್ಟ ಎಷ್ಟು ವರ್ಷದ ತೆರಿಗೆ ವಿಧಿಸಬಹುದಾಗಿದೆ ?

## ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಪರವಾನಗಿ ಪಡೆಯಲು ಇರುವ ನಿಯಮ ಹಾಗೂ ಕಾರ್ಯವಿಧಾನಗಳ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :-**

೭೨೯ (೭೬೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಪರವಾನಗಿ ಪಡೆಯಲು ಇರುವ ನಿಯಮಗಳು ಹಾಗೂ ಕಾರ್ಯ ವಿಧಾನಗಳೇನು ;

(ಆ) ನಿರ್ಮಾಣ್-೨ ತಂತ್ರಾಂಶದ ಮೂಲಕ ಕಟ್ಟಡ ನಿರ್ಮಾಣ ಪರವಾನಿಗೆ ಅರ್ಜಿ ಸಲ್ಲಿಸುವುದು ಕಡ್ಡಾಯವೇ ಹಾಗೂ ಕಳೆದ ೩ ತಿಂಗಳಿಂದ ಕಾರ್ಯ ನಿರ್ವಹಿಸುತ್ತಿಲ್ಲದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಾತ್ಕಾಲಿಕವಾಗಿ ಕೈಗೊಂಡ ಕ್ರಮಗಳೇನು ;

(ಇ) ಸದರಿ ತಂತ್ರಾಂಶವು ಕಾರ್ಯನಿರ್ವಹಿಸುತ್ತಿಲ್ಲದ ಸಮಯದಲ್ಲಿ ಕಟ್ಟಡ ನಿರ್ಮಾಣ ಮಾಡಲು ಪರವಾನಿಗೆ ನೀಡಲು ಅನುಸರಿಸುತ್ತಿರುವ ಕ್ರಮಗಳೇನು ;

(ಈ) ನಿರ್ಮಾಣ ತಂತ್ರಾಂಶ ಕಾರ್ಯ ನಿರ್ವಹಿಸದ ಸಂದರ್ಭದಲ್ಲಿ ಭೌತಿಕವಾಗಿ ಪರವಾನಿಗೆ ನೀಡುವಂತೆ ಅರ್ಜಿ ಸಲ್ಲಿಸಿದ್ದಲ್ಲಿ ಹಾಗೂ ಪಾಲಿಕೆಯಿಂದ ಪರವಾನಿಗೆ ನೀಡದ ಸಂದರ್ಭದಲ್ಲಿ ಕಟ್ಟಡ ನಿರ್ಮಾಣ ಮಾಡಲು ಕಾನೂನಿನಲ್ಲಿ ಅವಕಾಶವಿದೆಯೇ ?

## ಕಲಬುಗರಿ ಜಿಲ್ಲೆಯ ಹೊನ್ನಕಿರಣಗಿ ಮತ್ತು ನದಿಸಿನ್ನೂರು ಗ್ರಾಮದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಪಿಎಂ ಮಿತ್ರ ಮೆಗಾ ಜವಳಿ ಪಾರ್ಕ್ ನಿರ್ಮಾಣದ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :–**

೭೩೦ (೭೬೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯ ಜಿಲ್ಲೆಯ ಹೊನ್ನಕಿರಣಗಿ ಮತ್ತು ನದಿಸಿನ್ನೂರು ಗ್ರಾಮಗಳಲ್ಲಿ ನಿರ್ಮಿಸಲು ಉದ್ದೇಶಿಸಿರುವ ಪಿಎಂ ಮಿತ್ರ ಮೆಗಾ ಜವಳಿ ಪಾರ್ಕ್ ಯೋಜನೆ ಕಾಮಗಾರಿಯು ಯಾವ ಹಂತದಲ್ಲಿದೆ ; ಯೋಜನೆ ಪೂರ್ಣಗೊಳಿಸಲು ನಿರ್ದಿಷ್ಟಪಡಿಸಿದ ಅವಧಿ ಎಷ್ಟು ;

(ಆ) ಈ ಯೋಜನೆಗೆ ಮೀಸಲಿರಿಸಿದ ಒಟ್ಟು ಅನುದಾನವೆಷ್ಟು ; (ಇದರಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲುದಾರಿಕೆಯ ವಿವರ ನೀಡುವುದು)

(ಇ) ಈ ಕೈಗಾರಿಕೆ ಯೋಜನೆಯಲ್ಲಿ ಯಾವ ಯಾವ ಕಂಪನಿಗಳಿಗೆ ಪಾರ್ಕ್ ನಿರ್ಮಿಸಲು ಅನುಮೋದನೆ ನೀಡಲಾಗಿದೆ ಹಾಗೂ ಕಂಪನಿಗಳ ತಲಾ ಹೂಡಿಕೆಯ ವಿವರವನ್ನು ನೀಡುವುದು ;

(ಈ) ಪಾರ್ಕ್ ನಿರ್ಮಾಣ ಯೋಜನೆಗೆ ಖರೀದಿಸಿದ ಒಟ್ಟು ಜಮೀನಿನ ವಿಸ್ತೀರ್ಣ ಎಷ್ಟು ; ಈ ಜಮೀನಿನ ಮಾಲಿಕರು/ರೈತರಿಗೆ ಸರ್ಕಾರ ನಿಗದಿಪಡಿಸಿದ ಸಹಾಯಧನ ಮೊತ್ತವೆಷ್ಟು ; ಇಲ್ಲಿಯವರೆಗೆ ಎಷ್ಟು ಜನರಿಗೆ ಸಹಾಯಧನವನ್ನು ನೀಡಲಾಗಿದೆ ; ಪ್ರಸ್ತುತ ಎಷ್ಟು ಜನ–ಜಮೀನು ಮಾಲೀಕರಿಗೆ ಇನ್ನು ಸಹಾಯಧನ ಪಾವತಿಸಲು ಬಾಕಿ ಉಳಿದಿದೆ ಹಾಗೂ ಯಾವ ಕಾಲಮಿತಿಯಲ್ಲಿ ಬಾಕಿ ಸಹಾಯಧನವನ್ನು ನೀಡಲಾಗುತ್ತದೆ ; (ರೈತರ ವಿವರಗಳ ಸಮೇತ ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಉ) ಸದರಿ ಜವಳಿ ಪಾರ್ಕ್‌ನಲ್ಲಿ ಸೃಷ್ಟಿಯಾಗುವ ಉದ್ಯೋಗಗಳು ಎಷ್ಟು ; ಈ ಉದ್ಯೋಗ ಹಂಚಿಕೆಯಲ್ಲಿ ಡಾ.ಸರೋಜಿನಿ ಮಹಿಷಿ ವರದಿಯನ್ವಯ ಉದ್ಯೋಗಗಳನ್ನು ಹಂಚಿಕೆ ಮಾಡಲಾಗುತ್ತದೆಯೇ ; ಇದರಲ್ಲಿ ಸ್ಥಳೀಯ ನಿವಾಸಿಗಳು ಹಾಗೂ ಕರ್ನಾಟಕದ ಇತರೆ ಭಾಗದ ಎಷ್ಟು ಜನರಿಗೆ ಉದ್ಯೋಗವನ್ನು ನೀಡಲು ಸರ್ಕಾರ ಉದ್ದೇಶಿಸಿದೆ ? (ಮಾಹಿತಿ ನೀಡುವುದು)

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಬಗ್ಗೆ

**ಶ್ರೀ ಕೆ.ಶಿವಕುಮಾರ್ (ನಾಮನಿರ್ದೇಶನ ಹೊಂದಿದವರು) :–**

೭೩೧ (೭೭೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ವತಿಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಉದ್ಯಮಿಗಳಿಗೆ ಹಂಚಿಕೆ ಮಾಡಲಾದ ಒಟ್ಟು ಭೂಮಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪರಿಶಿಷ್ಟ ಜಾತಿಯ ಒಳಪಂಗಡಗಳಾದ ಎ.ಬಿ.ಸಿ. ಮತ್ತು ಡಿ ಪ್ರವರ್ಗಗಳ ಫಲಾನುಭವಿಗಳಿಗೆ ಹಂಚಿಕೆಯಾದ ಭೂಮಿಯ ವಿಸ್ತೀರ್ಣ ಎಷ್ಟು ; ಈ ಪೈಕಿ ಎಷ್ಟು ಫಲಾನುಭವಿಗಳು ಈಗಾಗಲೇ ಕೈಗಾರಿಕೆಗಳನ್ನು ಪ್ರಾರಂಭಿಸಿದ್ದಾರೆ ; (ಸಂಪೂರ್ಣ ಪಟ್ಟಿ ಒದಗಿಸುವುದು)

(ಇ) ಈ ವರ್ಗದವರಿಗೆ ಭೂಮಿ ಖರೀದಿಯಲ್ಲಿ ನೀಡಲಾಗುತ್ತಿರುವ ರಿಯಾಯಿತಿ ಮೊತ್ತ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಈ ಬಾಬ್ತಿನಡಿ ಕೆಐಎಡಿಬಿ ಗೆ ಪಾವತಿಸಲಾದ ಒಟ್ಟು ಅನುದಾನ ಎಷ್ಟು ?

## ರಾಜ್ಯದ ಮಹಾನಗರ ಪಾಲಿಕೆಗಳ ಬಗ್ಗೆ

**ಶ್ರೀ ಕೆ.ಶಿವಕುಮಾರ್ (ನಾಮನಿರ್ದೇಶನ ಹೊಂದಿದವರು) :–**

೭೩೨ (೭೭೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ) ಸೇರಿದಂತೆ ರಾಜ್ಯದ ವಿವಿಧ ಮಹಾನಗರ ಪಾಲಿಕೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಒಟ್ಟು ಸಮುದಾಯ ಭವನಗಳ/ ಕಲ್ಯಾಣ ಮಂಟಪಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಸಮುದಾಯ ಭವನಗಳ ಪೈಕಿ ಅತ್ಯಂತ ಹಳೆಯದಾದ ಹಾಗೂ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ಗುರುತಿಸಲಾಗಿದೆಯೇ ; ಅಂತಹ ಕಟ್ಟಡಗಳನ್ನು ನೆಲಸಮಗೊಳಿಸಿ (Demolish) ಆಧುನಿಕ ತಂತ್ರಜ್ಞಾನ ಹಾಗೂ ಸುಸಜ್ಜಿತ ಸೌಲಭ್ಯಗಳೊಂದಿಗೆ ಮರು ನಿರ್ಮಾಣ ಮಾಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಖಾಸಗಿ ಕಲ್ಯಾಣ ಮಂಟಪಗಳ ಬಾಡಿಗೆ ದರವು ಸಾಮಾನ್ಯ ಜನರ ಕೈಗೆಟುಕದಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಡ ಮತ್ತು ಮಧ್ಯಮ ವರ್ಗದ ಜನರ ಅನುಕೂಲಕ್ಕಾಗಿ ರಿಯಾಯಿತಿ ದರದಲ್ಲಿ ಆಧುನಿಕ ಸೌಲಭ್ಯವುಳ್ಳ ಕಲ್ಯಾಣ ಮಂಟಪಗಳನ್ನು ನಿರ್ಮಿಸಲು ನಗರಾಭಿವೃದ್ಧಿ ಪ್ರಾಧಿಕಾರಗಳ ವತಿಯಿಂದ ಕೈಗೊಂಡಿರುವ ಕ್ರಮಗಳೇನು ?

## ಕೆ.ಜಿ.ಎಫ್ ನಗರದಲ್ಲಿನ ಕೈಗಾರಿಕೆಗಳ ಸ್ಥಾಪನೆ ಬಗ್ಗೆ

**ಶ್ರೀ ಕೆ.ಶಿವಕುಮಾರ್ (ನಾಮನಿರ್ದೇಶನ ಹೊಂದಿದವರು) :–**

೭೩೩ (೭೭೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಜಿ.ಎಫ್ ನಗರದಲ್ಲಿ ನೂತನ ಕೈಗಾರಿಕೆಗಳ ಸ್ಥಾಪನೆ ಮಾಡುವ ಚಿಂತನೆ ಸರ್ಕಾರಕ್ಕೆ ಇದೆಯೇ ; ಇದ್ದರೆ, ಎಷ್ಟು ಪ್ರಮಾಣ ಹೂಡಿಕೆ ಮಾಡಲು ಉದ್ದೇಶಿಸಿದೆ ಹಾಗೂ ಎಷ್ಟು ಪ್ರದೇಶದಲ್ಲಿ ಕೈಗಾರಿಕೆಗಳು ಅಭಿವೃದ್ಧಿ ಪಡಿಸಲಾಗುತ್ತಿದೆ ; ಇದರಿಂದ ಎಷ್ಟು ಜನರಿಗೆ ಉದ್ಯೋಗ ದೊರಕಲಿದೆ ; (ಮಾಹಿತಿ ನೀಡುವುದು)

(ಆ) ಕೆ.ಜಿ.ಎಫ್. ನಲ್ಲಿ ಹೂಡಿಕೆದಾರರನ್ನು ಸೆಳೆಯಲು ನೆರೆಯ ಆಂಧ್ರಪ್ರದೇಶ ಹಾಗೂ ತಮಿಳುನಾಡಿನಲ್ಲಿ ರೋಡ್ ಶೋ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಪ್ರಸ್ತುತ ಎಷ್ಟು ಕೈಗಾರಿಕೆಗಳು ಚಾಲ್ತಿಯಲ್ಲಿದೆ ; ಎಷ್ಟು ಜನರಿಗೆ ಉದ್ಯೋಗ ದೊರಕಿದೆ ?

## ಚಾಮರಾಜನಗರದಲ್ಲಿ ನಡೆಯುತ್ತಿರುವ ಗಣಿಗಾರಿಕೆ ರಫ್ತಿನ ಬಗ್ಗೆ

**ಶ್ರೀ ಕೆ.ಶಿವಕುಮಾರ್ (ನಾಮನಿರ್ದೇಶನ ಹೊಂದಿದವರು) :–**

೭೩೪ (೭೭೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದಲ್ಲಿ ಎಷ್ಟು ಗಣಿಗಾರಿಕೆ ಪರವಾನಗಿ ಇವೆ ; ಇದರಲ್ಲಿ ಅನಧಿಕೃತವಾಗಿ ಎಷ್ಟು ಗಣಿಗಾರಿಕೆ ನಡೆಯುತ್ತಿವೆ ; ಯಾವ ಯಾವ ವಿಧದ ಗಣಿಗಾರಿಕೆ ನಡೆಯುತ್ತಿದೆ ;

(ಆ) ರಾಜ್ಯದಲ್ಲಿ ನಡೆಯುತ್ತಿರುವ ಗಣಿಗಾರಿಕೆಯಿಂದ ಹಾಗೂ ಚಾಮರಾಜನಗರ ಜಿಲ್ಲೆಯಿಂದ ಸರ್ಕಾರಕ್ಕೆ ರಾಜಧನ ರೂಪದಲ್ಲಿ ಬರುತ್ತಿರುವ ಆದಾಯವೆಷ್ಟು ;

(ಇ) ರಾಜ್ಯದ ಕರಿಕಲ್ಲು ಯಾವ ದೇಶಕ್ಕೆ ಹಾಗೂ ಎಷ್ಟು ಪ್ರಮಾಣದಲ್ಲಿ ರಫ್ತಾಗುತ್ತಿದೆ ;

(ಈ) ರಷ್ಯಾ, ಯುಕ್ರೇನ್, ಇರಾನ್ ಸೇರಿದಂತೆ ಜಾಗತಿಕವಾಗಿ ನಡೆಯುತ್ತಿರುವ ಯುದ್ಧದಿಂದ ಕರಿಕಲ್ಲು ರಫ್ತಿನ ಮೇಲೆ ಪರಿಣಾಮ ಬೀರಿದೆಯೇ ; ಎಷ್ಟು ಪ್ರಮಾಣ ರಫ್ತು ಕುಸಿದಿದೆ ; ಇದರಿಂದ ಸರ್ಕಾರಕ್ಕೆ ಆಗುತ್ತಿರುವ ನಷ್ಟ ಎಷ್ಟು ?

## ರಾಜ್ಯದಲ್ಲಿ ಹೊಸದಾಗಿ ಜವಳಿ ಪಾರ್ಕ್‌ಗಳ ನಿರ್ಮಾಣದ ಬಗ್ಗೆ

**ಶ್ರೀ ಕೆ.ಶಿವಕುಮಾರ್ (ನಾಮನಿರ್ದೇಶನ ಹೊಂದಿದವರು) :–**

೭೩೫ (೭೭೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಜಿಲ್ಲೆಯಲ್ಲಿ ಹೊಸದಾಗಿ ಜವಳಿ ಪಾರ್ಕ್ ನಿರ್ಮಾಣಕ್ಕಾಗಿ ಸ್ಥಳ ಗುರುತಿಸಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಹೊಸ ಜವಳಿ ಪಾರ್ಕ್ ನಿರ್ಮಾಣಕ್ಕೆ ಎಷ್ಟು ಪ್ರಮಾಣದ ಬಂಡವಾಳ ನಿರೀಕ್ಷಿಸಲಾಗುತ್ತಿದೆ ; ಇದರಿಂದ ಎಷ್ಟು ಉದ್ಯೋಗ ಸೃಷ್ಟಿಯಾಗಲಿದೆ ; ಎಷ್ಟು ಪ್ರಮಾಣ ಆದಾಯ ನಿರೀಕ್ಷಿಸಲಾಗಿದೆ ;

(ಇ) ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಗಾರ್ಮೆಂಟ್ಸ್ ತೆರೆಯಲು ಸರ್ಕಾರದಿಂದ ನೀಡಲಾಗುತ್ತಿರುವ ಸಹಾಯಧನ ಎಷ್ಟು ?

## ರಾಜ್ಯದಲ್ಲಿ ಕೈಗಾರಿಕಾ ನಿವೇಶನಗಳನ್ನು ಪ್ರವರ್ಗ–೧ ರ ಜನಗಳಿಗೆ ನೀಡಿರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೭೩೬ (೭೯೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಗಾರಿಕಾ ನಿವೇಶನಗಳನ್ನು ಯಾವ ಯಾವ ಸ್ಥಳಗಳಲ್ಲಿ ನಿರ್ಮಿಸಲಾಗಿದೆ ; ಎಷ್ಟು ಕೈಗಾರಿಕಾ ನಿವೇಶನಗಳನ್ನು ಸಿದ್ಧಪಡಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಇದುವರೆಗೂ ಹಂಚಿಕೆ ಮಾಡಲಾದ ಕೈಗಾರಿಕಾ ನಿವೇಶನಗಳ ಸಂಖ್ಯೆ ಎಷ್ಟು ; ಯಾವ–ಯಾವ ಕೈಗಾರಿಕೆಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅತ್ಯಂತ ಹಿಂದುಳಿದ ಪ್ರವರ್ಗ – ೧ ರ ಜಾತಿಗಳಿಗೆ ಮೀಸಲಿಟ್ಟಿರುವ ಶೇಕಡವಾರು ನಿವೇಶನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಈ ಪೈಕಿ ಎಷ್ಟು ಜನ ಪ್ರವರ್ಗ– ೧ರ ಜಾತಿಯ ಫಲಾನುಭವಿಗಳಿಗೆ ಕೈಗಾರಿಕಾ ನಿವೇಶನಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಉ) ನಿವೇಶನಗಳನ್ನು ವಿತರಿಸಿರುವ ಪ್ರವರ್ಗ–೧ ರ ಜಾತಿಯ ಜನಗಳು ಎಷ್ಟು ; ಅವರ ವಿವರಗಳನ್ನು ಒದಗಿಸುವುದು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನಲ್ಲಿ ನಿರ್ಮಿಸಿರುವ ಕೈಗಾರಿಕಾ ಪಾರ್ಕ್‌ಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೭೩೭ (೭೯೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆ ಹಿರಿಯೂರಿನಲ್ಲಿ ಹೊಸದಾಗಿ ಎಷ್ಟು ಕೈಗಾರಿಕಾ ಪಾರ್ಕ್‌ಗಳನ್ನು ಪ್ರಾರಂಭಿಸಲಾಗಿದೆ ;

(ಆ) ಈ ಕೈಗಾರಿಕಾ ಪಾರ್ಕ್‌ಗಳಿಗೆ ಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ವಿಸ್ತೀರ್ಣ ಎಷ್ಟು ; ರೈತರ ಸಂಖ್ಯೆ ಎಷ್ಟು ;

(ಇ) ಸ್ವಾಧೀನ ಪಡಿಸಿಕೊಂಡಿರುವ ರೈತರ ಜಮೀನಿಗೆ ಪರಿಹಾರ ನೀಡಲು ಸರ್ಕಾರವು ನಿಗದಿಪಡಿಸಿರುವ ಹಣ ಎಷ್ಟು ; ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ ; ಉಳಿಕೆ ರೈತರು ಎಷ್ಟು ; ನ್ಯಾಯಾಲಯದಲ್ಲಿರುವ ಪ್ರಕರಣ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಕೈಗಾರಿಕಾ ಪಾರ್ಕ್‌ಗಳಿಗೆ ನೀಡಿರುವ ಮೂಲಭೂತ ಸೌಕರ್ಯಗಳೇನು ;

(ಉ) ಪಾರ್ಕ್‌ಗೆ Allot ಆಗಿರುವ ನೀರಿನ ವಿದ್ಯುತ್ ಪ್ರಮಾಣವೆಷ್ಟು; ಯಾವ ಮೂಲದಿಂದ ನೀರಿನ ವ್ಯವಸ್ಥೆ ಮಾಡಲಾಗುವುದು ;

(ಊ) ಈ ಹಿಂದೆ ಹಿರಿಯೂರು ತಾಲ್ಲೂಕಿನ ಸೀಗೆಹಟ್ಟಿ, ಯಲ್ಲದಕೆರೆ, ಗ್ರಾಮಗಳ ಸರ್ವೆ ನಂ. ೨೨೮, ೨೨೯, ೨೩೦, ೨೩೧, ೨೩೨, ೨೩೬ರವರೆಗೆ ಸರ್ಕಾರಿ ಜಮೀನು ನೀಡಿದ್ದು, ಇದುವರೆವಿಗೂ ೪೪೦ ಎಕರೆ ಜಮೀನುಗಳಲ್ಲಿ ಯಾವುದೇ ಪ್ರಗತಿ ಇರುವುದಿಲ್ಲ, ಈ ಜಮೀನನ್ನು ವಾಪಸ್ಸು ನೀಡದಿರಲು ಕಾರಣವೇನು ? (ವಿವರದೊಂದಿಗೆ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಬಗ್ಗೆ

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೭೩೮ (೭೯೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರಾಭಿವೃದ್ಧಿ ಇಲಾಖೆಯ ವ್ಯಾಪ್ತಿಗೆ ಬರುವ ಮಹಾನಗರ ಪಾಲಿಕೆಗಳು, ನಗರ ಪಾಲಿಕೆಗಳು, ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಮಹಾನಗರಪಾಲಿಕೆ, ನಗರಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯುತ್ ವ್ಯಾಪ್ತಿಯುಲ್ಲಿ 'ಎ' ಖಾತೆಗೆ ಮೇಲ್ದರ್ಜೆಗೇರಿಸಿರುವ ಆಸ್ತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಪಾಲಿಕೆವಾರು ಮಾಹಿತಿ ನೀಡುವುದು)

(ಇ) 'ಬಿ' ಖಾತೆಯ ಆಸ್ತಿಗಳನ್ನು 'ಎ' ಖಾತೆಗೆ ಮೇಲ್ದರ್ಜೆಗೇರಿಸಲು ಯಾವ ಯಾವ ನಗರಸಭೆಗಳಲ್ಲಿ ಪುರಸಭೆಗಳಲ್ಲಿ ಎಷ್ಟು ಎಷ್ಟು ಶುಲ್ಕವನ್ನು ನಿಗದಿಪಡಿಸಲಾಗಿದೆ ; (ಮಾಹಿತಿಯನ್ನು ನೀಡುವುದು)

(ಈ) ಈ ಎಲ್ಲಾ ಮಹಾನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಬರುವ ಆಸ್ತಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ 'ಎ' ಖಾತಾ ಸಂಖ್ಯೆ

ಹಾಗೂ 'ಬಿ' ಖಾತಾ ಸಂಖ್ಯೆ ಎಷ್ಟು ? (ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಉದ್ಯಮ ಸ್ಥಾಪಿಸುವ ಬಗ್ಗೆ

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೭೩೯ (೭೯೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಉದ್ಯಮ ಸ್ಥಾಪಿಸಲು ಸರ್ಕಾರವು ನೀಡುತ್ತಿರುವ ಸೌಲಭ್ಯಗಳು ಹಾಗೂ ಉತ್ತೇಜನಗಳು ಯಾವುವು ;

(ಆ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರಾಜ್ಯದಲ್ಲಿ ಅತ್ಯಂತ ಹಿಂದುಳಿದ ಪ್ರವರ್ಗ –೧ರ ಜಾತಿಗಳಿಗೆ ಮೀಸಲಾತಿಯನ್ನು ನೀಡಲಾಗಿದೆಯೇ ;

(ಇ) ಮೀಸಲಾತಿಯನ್ನು ನೀಡಿದಲ್ಲಿ ಶೇಕಡವಾರು ನೀಡಿರುವ ಸಂಖ್ಯೆ ಎಷ್ಟು ; ಇದುವರೆಗೂ ಎಷ್ಟು ಪ್ರವರ್ಗ – ೧ರ ಜಾತಿಯ ಉದ್ದಿಮೆದಾರರಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅನುವು ಮಾಡಿಕೊಡಲಾಗಿದೆ ;

(ಈ) ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಬ್ಯಾಂಕುಗಳಿಂದ ಸಾಲ ಪಡೆಯಲು ಸರ್ಕಾರದ ಗ್ಯಾರಂಟಿ ನೀಡಲಾಗುತ್ತದೆಯೇ ಅಥವಾ ಇಲ್ಲವೇ ಮಾಹಿತಿ ನೀಡುವುದು ?

## ಹೊರ ರಾಜ್ಯಗಳಿಗೆ ಕಬ್ಬು ಕಾರ್ಖಾನೆಗೆ ಸಾಗಣಿಕೆಯಾಗುತ್ತಿರುವ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೦ (೮೧೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೆಳೆದ ಕಬ್ಬನ್ನು ಹೊರ ರಾಜ್ಯಗಳ ಕಾರ್ಖಾನೆಗಳಿಗೆ ಸಾಗಾಣಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಹೊರ ರಾಜ್ಯಗಳಿಗೆ ರವಾನೆ ಮಾಡಲಾಗುತ್ತಿರುವ ಕಬ್ಬುಗಳು ಯಾವ ಕಾರ್ಖಾನೆಗೆ ರವಾನೆಯಾಗುತ್ತಿದೆ ಮತ್ತು ಅವರು ನೀಡುತ್ತಿರುವ ನಿಗದಿತ ದರ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೊರ ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬು ಬೆಳೆಗೆ ಕರ್ನಾಟಕ ರಾಜ್ಯಕ್ಕಿಂತ ದರ ಹೆಚ್ಚಿರುವುದರ ಬಗ್ಗೆ ಸರ್ಕಾರ ಅಧ್ಯಯನ ಮಾಡುತ್ತಿದೆಯೇ ; ಮಾಡಿದ್ದಲ್ಲಿ, ಯಾವ ರೀತಿ ಅಧ್ಯಯನ ಮಾಡಲಾಗುತ್ತಿದೆ ;

(ಈ) ಕರ್ನಾಟಕ ಗಡಿ ಭಾಗದಲ್ಲಿ ಹೊಂದಿಕೊಂಡಿರುವ ಸಕ್ಕರೆ ಕಾರ್ಖಾನೆಗಳು ನಿಗದಿಪಡಿಸಿರುವ ದರದ ವಿವರ ನೀಡುವುದು ಮತ್ತು (ಮಹರಾಷ್ಟ್ರ, ತೆಲಂಗಾಣ ಮತ್ತು ಆಂಧ್ರಪ್ರದೇಶ) ಹೊರ ರಾಜ್ಯದಲ್ಲಿ ನಿಗದಿ ಪಡಿಸಿರುವ ದರವನ್ನು ನೀಡುವುದು ?

## ರೈತರ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೧ (೮೧೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿಶ್ವ ವಿದ್ಯಾಲಯಗಳು ಯಾವುವು ;

(ಆ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ ರೈತರಿಗೆ ಸಂಬಂಧಿಸಿದಂತೆ ತರಬೇತಿ ನೀಡಲಾಗುತ್ತಿದೆಯೇ ; ನೀಡಲಾಗಿದ್ದಲ್ಲಿ, ಎಷ್ಟು ರೈತರು ಪಾಲ್ಗೊಂಡಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ರೈತರಿಗೆ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಯಾವ ಯೋಜನೆಯನ್ನು ರೂಪಿಸಲಾಗಿದೆ ; ಅದರ ಸದುಪಯೋಗ ಪಡೆದ ಫಲಾನುಭವಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಯಾವ ಯಾವ ಯೋಜನೆಗಳಲ್ಲಿ ರೈತರಿಗೆ ಸಹಾಯಧನ ನೀಡಲಾಗುತ್ತಿದೆ ; ಯಾವ ಯಾವ ಬೆಳೆಗೆ ಅಥವಾ ಯಂತ್ರೋಪಕರಣಗಳಿಗೆ ಎಷ್ಟು ಸಹಾಯಧನ ನೀಡಲಾಗುತ್ತಿದೆ ಹಾಗೂ ರಾಜ್ಯದ ರೈತರು ಬೆಳೆದ ಫಸಲಿಗೆ ಬೆಂಬಲ ಬೆಲೆ ನೀಡಲಾಗುತ್ತಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರುದ್ಯೋಗ ಹೆಚ್ಚಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೨ (೮೧೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸ್ಥಾಪನೆಯಲ್ಲಿ ಎಷ್ಟು ಮೊತ್ತದ ಹೂಡಿಕೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಯಿಂದ ಎಷ್ಟು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಮುಂಬರುವ ಹೂಡಿಕೆಯಿಂದ ರಾಜ್ಯದಲ್ಲಿ ಎಷ್ಟು ಉದ್ಯೋಗ ಅವಕಾಶ ಸೃಷ್ಟಿಸಲು ಸರ್ಕಾರ ಕ್ರಮ ಕೈಗೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರುದ್ಯೋಗ ಯುವಕ/ ಯುವತಿಯರು ಹೆಚ್ಚಿದ್ದು ಈ ಭಾಗದಲ್ಲಿ ಬೃಹತ್ ಕೈಗಾರಿಕೆ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ/ಪಂಗಡ ಉದ್ಯಮಿಗಳಿಗೆ ನೀಡುತ್ತಿರುವ ಸೌಲಭ್ಯದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೩ (೮೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೈಗಾರಿಕೆ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಿಗಳಿಗೆ ಮಂಡಳಿ ವತಿಯಿಂದ ಹಾಲಿ ನೀಡುತ್ತಿರುವ ಸೌಲಭ್ಯ ಮತ್ತು ರಿಯಾಯಿತಿಗಳು ಯಾವುವು ; ಯಾವ ದಿನಾಂಕದಿಂದ ಇವುಗಳನ್ನು ಜಾರಿಗೊಳಿಸಲಾಗಿದೆ ; (ವಿವರವಾಗಿ ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಆ) ಸದರಿ ಸೌಲಭ್ಯ ಮತ್ತು ರಿಯಾಯಿತಿಗಳು ಜಾರಿಗೆ ಬಂದಾಗಿನಿಂದ ಇಲ್ಲಿಯವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉದ್ಯಮಿಗಳಿಗೆ ಮಂಡಳಿ ವತಿಯಿಂದ ನೀಡಿರುವ ನಿವೇಶನಗಳು ಯಾವುವು ; ಎಷ್ಟು ; ವಿವರವಾಗಿ ಉದ್ಯಮಿಯ ಹೆಸರು, ಉದ್ಯಮದ ಹೆಸರು ಮತ್ತು ವಿಳಾಸ, ಹಂಚಿಕೆ ಮಾಡಿದ ಕೈಗಾರಿಕೆ ನಿವೇಶನದ ವಿಸ್ತೀರ್ಣ ಹಾಗೂ ಪ್ರದೇಶ ಮತ್ತು ನೀಡಿರುವ ರಿಯಾಯಿತಿ ಮೊತ್ತ ಹಾಗೂ ಇತರೆ ವಿವರಗಳೊಂದಿಗೆ, ಜಿಲ್ಲಾವಾರು, ಕೈಗಾರಿಕಾ ಪ್ರದೇಶವಾರು ಸಂಪೂರ್ಣ ಮಾಹಿತಿ ನೀಡುವುದು ;

(ಇ) ನೂತನ ಸರ್ಕಾರ ಬಂದಾಗಿನಿಂದ ದಾಬಸ್ ಪೇಟೆ ಕೈಗಾರಿಕಾ ಪ್ರದೇಶದಲ್ಲಿ ಹಂಚಿಕೆ ಮಾಡಿರುವ ನಿವೇಶನದ ಸಂಪೂರ್ಣ ವಿವರ ನೀಡುವುದು ? (ಉದ್ಯಮಿಯ ಹೆಸರು, ಉದ್ಯಮದ ಹೆಸರು ಮತ್ತು ವಿಳಾಸ, ಹಂಚಿಕೆ ಮಾಡಿರುವ ನಿವೇಶನದ ವಿಸ್ತೀರ್ಣಗಳ ವಿವರ ನೀಡುವುದು)

## ಇ–ಸ್ವತ್ತು ತಾಂತ್ರಿಕ ಸಮಸ್ಯೆ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೪ (೭೩೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಇತ್ತೀಚಿನ ಸಮೀಕ್ಷೆಯಂತೆ ಎಷ್ಟು ಅಧಿಕೃತ ಮತ್ತು ಅನಧಿಕೃತ ಆಸ್ತಿಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು/ಪಾಲಿಕೆವಾರು ಮಾಹಿತಿ ನೀಡುವುದು)

(ಆ) ಬಳ್ಳಾರಿ ಪಾಲಿಕೆಯಲ್ಲಿ ಅತಿ ಹೆಚ್ಚು (೨೪,೩೯೯) ಮತ್ತು ಮಂಗಳೂರು ಪಾಲಿಕೆಯಲ್ಲಿ ಅತಿ ಕಡಿಮೆ (೧,೩೭೮) ಅನಧಿಕೃತ ಆಸ್ತಿಗಳು ಪತ್ತೆಯಾಗಲು ಕಾರಣಗಳೇನು ; ಈ ವ್ಯತ್ಯಾಸಕ್ಕೆ ಮಾನದಂಡಗಳೇನಾದರೂ ಬದಲಾಗಿದೆಯೇ ;

(ಇ) ರಾಜ್ಯಾದ್ಯಂತ ಗುರುತಿಸಲಾದ ಸುಮಾರು ೪.೫೦ ಲಕ್ಷ ಅನಧಿಕೃತ ಆಸ್ತಿಗಳಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಆಗುತ್ತಿರುವ ಅಂದಾಜು ತೆರಿಗೆ ನಷ್ಟ ಎಷ್ಟು ;

(ಈ) ಇ–ಸ್ವತ್ತು (e-Swathu ೨.೦) ತಂತ್ರಾಂಶದಲ್ಲಿ ತಾಂತ್ರಿಕ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟದಲ್ಲಿ ಇ–ಸ್ವತ್ತು ವಿತರಣೆ ವಿಳಂಬವಾಗುತ್ತಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಅನಧಿಕೃತ ಆಸ್ತಿಗಳನ್ನು ಸಕ್ರಮಗೊಳಿಸಲು ಅಥವಾ ಅವುಗಳಿಂದ ದಂಡ ಸಹಿತ ತೆರಿಗೆ ವಸೂಲಿ ಮಾಡಲು ಸರ್ಕಾರ ಹೊಸ ನೀತಿಯನ್ನು ರೂಪಿಸಿದೆಯೇ ?

## ರಾಜ್ಯದಲ್ಲಿನ ರೈಲ್ವೆ ಯೋಜನೆಗಳ ಪ್ರಗತಿ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೫ (೭೩೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಪ್ರಗತಿಯಲ್ಲಿರುವ ಹೊಸ ರೈಲ್ವೆ ಮಾರ್ಗಗಳು, ಹಳಿ ಜೋಡಿ ಮಾರ್ಗ (Doubling) ಮತ್ತು ವಿದ್ಯುದ್ದೀಕರಣ ಯೋಜನೆಗಳು ಯಾವುವು ; (ಯೋಜನೆವಾರು ವಿವರ ನೀಡುವುದು)

(ಆ) ಈ ಯೋಜನೆಗಳ ಪೈಕಿ ಎಷ್ಟು ಯೋಜನೆಗಳಿಗೆ ರಾಜ್ಯ ಸರ್ಕಾರವು ಭೂಸ್ವಾಧೀನ ಪಡಿಸಿಕೊಡಬೇಕಿದೆ ಮತ್ತು ಪ್ರಸ್ತುತ ಎಷ್ಟು ಎಕರೆ ಭೂಸ್ವಾಧೀನ ಪ್ರಕ್ರಿಯೆ ಬಾಕಿ ಉಳಿದಿದೆ ;

(ಇ) ರೈಲ್ವೆ ಯೋಜನೆಗಳಿಗೆ ರಾಜ್ಯ ಸರ್ಕಾರವು ನೀಡಬೇಕಾದ ಆರ್ಥಿಕ ವಂತಿಗೆ (Financial Contribution) ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಈ ಬಾಬ್ತಿನಲ್ಲಿ ಬಿಡುಗಡೆ ಮಾಡಲಾದ ಮತ್ತು ಬಾಕಿ ಇರುವ ಅನುದಾನದ ಮೊತ್ತ ಎಷ್ಟು ;

(ಈ) ಭೂಸ್ವಾಧೀನ ವಿಳಂಬ ಅಥವಾ ರಾಜ್ಯ ಸರ್ಕಾರದ ಪಾಲಿನ ಅನುದಾನದ ಕೊರತೆಯಿಂದಾಗಿ ಯಾವುದಾದರೂ ಯೋಜನೆಗಳು ಸ್ಥಗಿತಗೊಂಡಿವೆಯೇ ಅಥವಾ ವಿಳಂಬವಾಗುತ್ತಿವೆಯೇ ; ಇದ್ದಲ್ಲಿ, ಅಂತಹ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಏನು ;

(ಉ) ಬೆಂಗಳೂರು ಉಪನಗರ ರೈಲು ಯೋಜನೆ (Bengaluru Suburban Rail Project) ಸೇರಿದಂತೆ ರಾಜ್ಯದ ಪ್ರಮುಖ ರೈಲ್ವೆ ಯೋಜನೆಗಳ ಪ್ರಸ್ತುತ ಭೌತಿಕ ಪ್ರಗತಿ ಎಷ್ಟು?

## ಕಲಬುರಗಿ ಜಿಲ್ಲೆಯಲ್ಲಿ PM ಮಿತ್ರ ಯೋಜನೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೬ (೭೪೦) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಸ್ಥಾಪಿಸಲಾಗುತ್ತಿರುವ ಪಿಎಂ ಮಿತ್ರ (PM MITRA) ಮೆಗಾ ಜವಳಿ ಪಾರ್ಕ್ ಯೋಜನೆಯ ಪ್ರಸ್ತುತ ಸ್ಥಿತಿಗತಿ ಏನು ಮತ್ತು ಈ ಯೋಜನೆಯಿಂದ ಜಿಲ್ಲೆಯ ಎಷ್ಟು ಜನರಿಗೆ ಉದ್ಯೋಗ ದೊರೆಯಲಿದೆ ;

(ಆ) ಕಲಬುರಗಿ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು ಸ್ಥಾಪಿಸಲು ಮತ್ತು ಸ್ಥಳೀಯ ಇಂಜಿನಿಯರಿಂಗ್ ಪದವೀಧರರಿಗೆ ಸ್ವಯಂ ಉದ್ಯೋಗಾವಕಾಶ ಕಲ್ಪಿಸಲು ಸರ್ಕಾರವು ಹಮ್ಮಿಕೊಂಡಿರುವ ವಿಶೇಷ ಪ್ರೋತ್ಸಾಹಕ ಕ್ರಮಗಳೇನು ;

(ಇ) ಕಲಬುರಗಿಯ ಪ್ರಮುಖ ಉದ್ಯಮವಾದ ಬೇಳೆ ಕಾರ್ಖಾನೆಗಳನ್ನು (Dal Mills) ಆಧುನೀಕರಿಸಲು ಮತ್ತು ಅವುಗಳನ್ನು ಜಾಗತಿಕ ಮಟ್ಟದ ಸ್ಪರ್ಧಾತ್ಮಕತೆಗೆ ಸಜ್ಜುಗೊಳಿಸಲು ಸರ್ಕಾರವು ತಾಂತ್ರಿಕ ಹಾಗೂ ಆರ್ಥಿಕ ನೆರವು ನೀಡುತ್ತಿದೆಯೇ ; ನೀಡುತ್ತಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ನೀಡಲಾದ ಅನುದಾನದ ವಿವರವೇನು ;

(ಈ) ಜಿಲ್ಲೆಯಲ್ಲಿ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿಗಾಗಿ (Industrial Infrastructure) ಗುರುತಿಸಲಾದ ಪ್ರದೇಶಗಳು

ಯಾವುವು ಮತ್ತು ಇಲ್ಲಿನ ಸಣ್ಣ ಉದ್ದಿಮೆದಾರರಿಗೆ ಸಂಶೋಧನೆ ಹಾಗೂ ನಾವೀಣ್ಯತೆಗಾಗಿ (R&D) ಸಜ್ಜುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಪೈಪ್ ಮುಖಾಂತರ LPG (PNG) ಸಂಪರ್ಕ ಕಲ್ಪಿಸುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೭ (೬೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಂದು ದೇಶ ಒಂದು ಅನಿಲ ಜಾಲ ಯೋಜನೆಯಡಿ ಪ್ರತಿ ಮನೆಗೂ ಪೈಪ್ ಮೂಲಕ ಅನಿಲ ಸಂಪರ್ಕ ಕಲ್ಪಿಸುವ ಯೋಜನೆ ಆರಂಭವಾಗಿ ೧೦ ವರ್ಷ ಕಳೆದರೂ ಕೇವಲ ೧೧.೮೫ ಲಕ್ಷ ಮನೆಗಳಿಗೆ ಮಾತ್ರ ಸಂಪರ್ಕ ತಲುಪಲು ಕಾರಣವೇನು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯ ಅನುಷ್ಠಾನಕ್ಕಾಗಿ ಆಯ್ಕೆಯಾದ ಗೇಲ್ (GAIL) ಅದಾನಿ, ಐ. ಓ. ಸಿ. ಎಲ್ (IOCL) ನಂತಹ ಕಂಪನಿಗಳು ನಿಗದಿತ ಅವಧಿಯಲ್ಲಿ ಗುರಿ ತಲುಪುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬ ಮಾಡುತ್ತಿರುವ ಕಂಪನಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸ್ಥಳೀಯ ಸಂಸ್ಥೆಗಳಿಂದ ರಸ್ತೆ ಅಗೆಯಲು ಅನುಮತಿ ಪಡೆಯುವಲ್ಲಿ ವಿಳಂಬ ಮತ್ತು ಹೆಚ್ಚಿನ ಶುಲ್ಕದಿಂದಾಗಿ ಕಾಮಗಾರಿಗಳು ಸ್ಥಗಿತಗೊಂಡಿರುವುದು ನಿಜವೇ ; ಹಾಗಿದ್ದಲ್ಲಿ, "ಗತಿ ಶಕ್ತಿ" ಯೋಜನೆಯಡಿ ಈ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸಿಲಿಂಡರ್ ಗ್ಯಾಸ್‌ಗಿಂತ ಪೈಪ್ ಗ್ಯಾಸ್ ಬಳಸುವುದರಿಂದ ಪ್ರತಿ ಕುಟುಂಬಕ್ಕೆ ವಾರ್ಷಿಕ ಸುಮಾರು ೨೦೦ ರೂ. ಉಳಿತಾಯವಾಗಲಿದ್ದು, ಯೋಜನೆಯು ವಿಳಂಬದಿಂದ ಜನಸಾಮಾನ್ಯರ ಮೇಲಾಗುತ್ತಿರುವ ಆರ್ಥಿಕ ಹೊರೆಯನ್ನು ತಪ್ಪಿಸಲು ೨೦೩೦ ಗುರಿಯನ್ನು ಮುಂಚಿತವಾಗಿಯೇ ತಲುಪಲು ಸರ್ಕಾರ ಕಾಲಮಿತಿಯ ಯೋಜನೆಯನ್ನು ರೂಪಿಸಿದೆಯೇ ?

## ರಾಜ್ಯದಲ್ಲಿ ಹಾಪ್ ಕಾಮ್ಸ್‌ಗಳನ್ನು ಮುಚ್ಚುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೭೪೮ (೭೩೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಹಾಪ್ ಕಾಮ್ಸ್‌ಗಳು ಇವೆ ; ಇದರಲ್ಲಿ ಕೆಲವು ಹಾಪ್ ಕಾಮ್ಸ್‌ಗಳನ್ನು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದುವರೆಗೂ ಎಷ್ಟು ಹಾಪ್ ಕಾಮ್ಸ್‌ಗಳನ್ನು ಮುಚ್ಚಲಾಗಿದೆ ;

(ಆ) ಹಾಪ್ ಕಾಮ್ಸ್‌ಗಳ ವಹಿವಾಟು ಸುಧಾರಣೆಗೆ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ;

(ಇ) ಮುಚ್ಚಿರುವ ಹಾಪ್ ಕಾಮ್ಸ್‌ಗಳನ್ನು ಮತ್ತೆ ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯ ಪೌರಾಡಳಿತ ಮತ್ತು ಹಜ್ ಇಲಾಖೆಯ ಕಾಮಗಾರಿಗಳ ಬಗ್ಗೆ

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೯ (೭೩೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ಹಣಕಾಸು ವರ್ಷಗಳಲ್ಲಿ ರಾಯಚೂರು ಜಿಲ್ಲೆಗೆ ವಿವಿಧ ಯೋಜನೆಗಳಡಿ (ನಗರೋತ್ಥಾನ, ಎಸ್.ಎಫ್.ಸಿ, ಅಮೃತ್ ಯೋಜನೆ ಇತ್ಯಾದಿ) ಬಿಡುಗಡೆಯಾದ ಒಟ್ಟು ಅನುದಾನ ಎಷ್ಟು; (ತಾಲ್ಲೂಕುವಾರು ಮತ್ತು ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಬಿಡುಗಡೆಯಾದ ಅನುದಾನದಲ್ಲಿ ಇದುವರೆಗೆ ವೆಚ್ಚ ಮಾಡಲಾದ ಮೊತ್ತ ಎಷ್ಟು ಮತ್ತು ಬಳಕೆಯಾಗದೆ ಬಾಕಿ ಉಳಿದಿರುವ ಅನುದಾನ ಎಷ್ಟು ; ಅನುದಾನ ಬಳಕೆಯಾಗದಿರಲು ಕಾರಣಗಳೇನು ;

(ಇ) ಕಳೆದ ೩ ವರ್ಷಗಳಲ್ಲಿ ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಕೈಗೆತ್ತಿಕೊಂಡ ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪೂರ್ಣಗೊಂಡಿರುವ, ಅರ್ಧಕ್ಕೆ ನಿಂತಿರುವ ಮತ್ತು ಇನ್ನೂ ಪ್ರಾರಂಭವಾಗದ ಕಾಮಗಾರಿಗಳ ವಿವರವೇನು ; (ಕಾಮಗಾರಿ ಹೆಸರು ಮತ್ತು ಅಂದಾಜು ವೆಚ್ಚದೊಂದಿಗೆ ಮಾಹಿತಿ ನೀಡುವುದು)

(ಈ) ಹಜ್ ಮತ್ತು ವಕ್ಫ್ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿ ಶಾದಿ ಮಹಲ್ ನಿರ್ಮಾಣ, ಕಬ್ರಸ್ತಾನ್ ಅಭಿವೃದ್ಧಿ ಹಾಗೂ ಯಾತ್ರಿ ನಿವಾಸಗಳಿಗಾಗಿ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ಮತ್ತು ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ ? (ತಾಲ್ಲೂಕುವಾರು ಮತ್ತು ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯ ಸರ್ಕಾರ ರೈತರ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಂಡಿರುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೭೫೦ (೭೮೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ೨೦೨೩ನೇ ಸಾಲಿನಿಂದ ೨೦೨೬ನೇ ಸಾಲಿನ ವರೆಗೆ ರೈತರ ಜಮೀನನ್ನು ಕೈಗಾರಿಕಾ ವಲಯಕ್ಕೆ ಭೂಸ್ವಾಧೀನ ಪಡಿಸಿಕೊಂಡಿರುವ ಜಮೀನುಗಳು ಯಾವುವು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಸರ್ಕಾರ, ರೈತರಿಂದ ಭೂಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ಮಾಲೀಕರಿಗೆ ಭೂ ಪರಿಹಾರದ ಹಣವನ್ನು ನೀಡಲಾಗಿದೆಯೇ ; ಇನ್ನು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಭೂ ಸ್ವಾಧೀನ ಪಡಿಸಿಕೊಂಡ ಸರ್ಕಾರವು ಅಭಿವೃದ್ಧಿಪಡಿಸಿ ಎಷ್ಟು ಭೂಮಿಯನ್ನು ನೀಡಿದೆ ಹಾಗೂ ಭೂಮಿಯನ್ನು ಕೈಗಾರಿಕೆಗಳಿಗೆ ಸರ್ಕಾರ ಯಾವ ನಿಯಮಗಳ ಆಧಾರದ ಮೇರೆಗೆ ನೀಡಲಾಗಿದೆ ?

## ಮಂಡ್ಯ ಸಕ್ಕರೆ ಕಾರ್ಖಾನೆಯಲ್ಲಿ ರೈತರಿಗೆ ಬಾಕಿ ಹಣವನ್ನು ನೀಡುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೭೫೧ (೭೮೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಯಲ್ಲಿ ೨೦೨೫ನೇ ಸಾಲಿನಿಂದ ೨೦೨೬ನೇ ಸಾಲಿನ ವರೆಗೆ ರೈತರ ಎಷ್ಟು ಟನ್ ಕಬ್ಬನ್ನು ಕಾರ್ಖಾನೆಗೆ ತೆಗೆದುಕೊಳ್ಳಲಾಗಿದೆ ; (ತಾಲ್ಲೂಕುವಾರು ವಿವರವಾದ ಪೂರ್ಣ ಮಾಹಿತಿ ನೀಡುವುದು)

(ಆ) ಈ ಸಾಲಿನಲ್ಲಿ ಸಕ್ಕರೆ ಕಾರ್ಖಾನೆಗೆ ಕಬ್ಬನ್ನು ಸರಬರಾಜು ಮಾಡಿದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಹಣವನ್ನು ನೀಡಲಾಗಿದೆಯೇ ; ನೀಡದಿದ್ದರೆ, ಇನ್ನು ಬಾಕಿ ಇರುವ ಮೊತ್ತ ಎಷ್ಟು ;

(ಇ) ಸಕ್ಕರೆ ಕಾರ್ಖಾನೆಗೆ ರೈತರು ಸರಬರಾಜು ಮಾಡಿದ ಕಬ್ಬಿನ ಬಾಕಿ ಬಿಲ್ಲುಗಳನ್ನು ಸರ್ಕಾರ ಯಾವ ದಿನಾಂಕದೊಳಗಾಗಿ ನೀಡಲು ಕ್ರಮ ಕೈಗೊಳ್ಳುವುದು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. ಔ 175/500 ಪ್ರತಿಗಳು/24–02–2026